ಸಂಪುಟ : 13 Volume ಸಂಚಿಕೆ : 192 Issue ಪುಟಗಳು : 08 Pages ಶುಕ್ರವಾರ 12 ಸಪ್ಟೆಂಬರ್ 2025 ₹2 RNINO:KARKAN/2011/48371 BDR/054/2026-20274 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಬೆಳಗು
' ಬದುಕು ಎಂಬುದು ಹತ್ತಿಯಿದ್ದಂತೆ ಅದನ್ನು ಸಂತೋಷವೆಂಬ ಗಾಳಿಯಲ್ಲಿ ಊದಿ ಆದರೆ ಅದನ್ನು ದುಃಖವೆಂಬ ನೀರಿನಲ್ಲಿ ಅದ್ದಬೇಡಿ '
– ಕುವೆಂಪು

ಸಂಪಾದಕರು: ರಮೇಶ ರೆಡ್ಡಿ

ವೈದ್ಯರ ಹಾಗೂ ಔಷಧಿ ಕೊರತೆ ನೀಗಿಸಿ 2
ಸಾತೋ ಶಹೀದ್ ಉರುಸ್ ಯಶಸ್ವಿ 4
ಸಂಖ್ಯೆಗಳ ಸ್ಟಿಕ್ಕರ್ ಬಿಡುಗಡೆ 8

## ಬುರ್ಖಾ ಧರಿಸಿ ಮಹಿಳೆ ಮಂಗಳಸೂತ್ರ ಸುಲಿಗೆ: ಇಬ್ಬರ ಬಂಧನ

ಕಲಬುರಗಿ:ಸೆ.11:ತಾಲೂಕಿನಕಡಣಿಯಲ್ಲಿಹೊಲದಲ್ಲಿಮಹಿಳೆಯೊಬ್ಬರ ಕೊರಳಲ್ಲಿನಸುಮಾರು80,000ರೂ.ಗಳಮೌಲ್ಯದಬಂಗಾರದಮಂಗಳಸೂತ್ರವನ್ನು ಬುರ್ಖಾ ಧರಿಸಿ ಕಸಿದುಕೊಂಡು ಹೋದ ಪ್ರಕರಣಕ್ಕೆ ಸಂಬಂಧಿಸಿದಂತೆ ಫರತಾಬಾದ್ ಠಾಣೆಯಪೋಲಿಸರುಇಬ್ಬರುಆರೋಪಿಗಳನ್ನುಬಂಧಿಸಿದ್ದಾರೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಹೇಳಿದರು.ಗುರುವಾರಸುದ್ದಿಗೋಷ್ಠಿಯಲ್ಲಿಮಾತನಾಡಿದಅವರು,ಪ್ರಕರಣಕ್ಕೆ ಸಂಬಂಧಿಸಿದಂತೆಕಡಣಿಗ್ರಾಮದಕಲ್ಲಾಲಿಂಗಅಲಿಯಾಸ್ಕಲ್ಮೇಶ್ತಂದೆ ಬಸವರಾಜ್ದ್ಯಾಮನ್ (27) ಹಾಗೂಕಡಣಿತಾಂಡಾದಮಹೇಶ್ತಂದೆ ಪಾಂಡುರಾಠೋಡ್(27)ಅವರನ್ನುಬಂಧಿಸಲಾಗಿದೆಎಂದರು.ಬಂಧಿತರು ಸುಲಿಗೆ ಮಾಡಿದ್ದನ್ನು ವಿಚಾರಣೆಯ ವೇಳೆ ಒಪ್ಪಿಕೊಂಡಿದ್ದಾರೆ. ಬಂಧಿತ






ಆರೋಪಿಗಳಿಂದ ಎರಡು ಸುಲಿಗೆ ಪ್ರಕರಣಗಳಲ್ಲಿ ದೋಚಿದ ಒಟ್ಟು ಎರಡು ಲಕ್ಷ ರೂ.ಗಳ ಮೌಲ್ಯದ 20 ಗ್ರಾಮ್ ತೂಕದ 2 ಬಂಗಾರದತಾಳಿಸರಗಳನ್ನು ಹಾಗೂ ಕೃತ್ಯಕ್ಕೆ ಬಳಸಿದ ಮೋಟರ್ ಸೈಕಲ್ ಹಾಗೂ ಇತರೇ ವಸ್ತುಗಳನ್ನು ಜಪ್ತಿ ಮಾಡಲಾಗಿದೆ ಎಂದರು.ಆರೋಪಿಗಳುತಮ್ಮದುಶ್ಚಟಗಳಿಗೆಹಣ ಹೊಂದಿಸಲು ಒಂಟಿ ಮಹಿಳೆಯರನ್ನು ಟಾರ್ಗೆಟ್ ಮಾಡಿ ಅವರಿಗೆ ಹೆದರಿಸಿ ಸುಲಿಗೆ ಮಾಡುತ್ತಿದ್ದರು ಎಂದ ಅವರು, ಸಬ್ ಅರ್ಬನ್ ಉಪ ವಿಭಾಗದ ಸಹಾಯಕ ಪೋಲಿಸ್ ಆಯುಕ್ತ ಡಿ.ಜಿ. ರಾಜಣ್ಣ ಅವರ ನೇತೃತ್ವದಲ್ಲಿ ಪಿಎಸ್ಐ ಮಲ್ಲಿಕಾರ್ಜುನ್ ಇಕ್ಕಳಕಿ, ಎಎಸ್ಐ ಅಶೋಕ್, ಸಿಬ್ಬಂದಿಗಳಾದ ತುಕಾರಾಮ್, ಕಲ್ಯಾಣಕುಮಾರ್, ಆನಂದ್ ಅವರು ಕಾರ್ಯಾಚರಣೆ ಕೈಗೊಂಡು ಆರೋಪಿಗಳನ್ನು ಬಂಧಿಸಿದ್ದಾರೆ ಎಂದರು.

# ಸಾಹಸಸಿಂಹ ವಿಷ್ಣುವರ್ಧನ್, ಬಿ.ಸರೋಜಾದೇವಿಗೆ ಮರಣೋತ್ತರ 'ಕರ್ನಾಟಕ ರತ್ನ' ಪ್ರಶಸ್ತಿ

1971ರಲ್ಲಿವಿಷ್ಣುವರ್ಧನ್ಬೆಳ್ಳಿತೆರೆಗೆಪ್ರವೇಶಿಸಿದರು. ವಂಶವೃಕ್ಷ ಅವರ ಮೊದಲ ಚಿತ್ರ. ಖ್ಯಾತ ನಿರ್ದೇಶಕ ಪುಟ್ಟಣ್ಣಕಣಗಾಲ್ಅವರನಿರ್ದೇಶನದನಾಗರಹಾವು ಸಿನಿಮಾ ವಿಷ್ಣುವರ್ಧನ್ ಅವರ ಸಿನಿಮಾ ಬದುಕಿಗೆ ತಿರುವುನೀಡಿತು.ಭೂತಯ್ಯನಮಗಅಯ್ಯು,ಗಂಧದ ಗುಡಿ ಸಿನಿಮಾಗಳಲ್ಲೂ ಗಮನ ಸೆಳೆದರು. ನಂತರ ಸಾಲುಸಾಲುಸಿನಿಮಾಗಳಮೂಲಕಕನ್ನಡರಂಗದಲ್ಲಿ ಅಪಾರಅಭಿಮಾನಿಗಳನ್ನುಸಂಪಾದಿಸಿದರು.ಆಪ್ತರಕ್ಷಕ ವಿಷ್ಣು ಅಭಿನಯದ ಕೊನೆ ಚಿತ್ರ. ಇದು 2010 ರಲ್ಲಿ ತೆರೆ ಕಂಡಿತ್ತು.ಕನ್ನಡ ಸೇರಿದಂತೆ ತಮಿಳು, ತೆಲುಗು, ಮಲಯಾಳ, ಹಿಂದಿ ಭಾಷೆಗಳಲ್ಲಿ ಸುಮಾರು 220 ಸಿನಿಮಾಗಳಲ್ಲಿವಿಷ್ಣುವರ್ಧನ್ನಟಿಸಿದ್ದಾರೆ.ಬೆಂಗಳೂರು ವಿಶ್ವವಿದ್ಯಾಲಯವು2005ರಲ್ಲಿವಿಷ್ಣುವರ್ಧನ್ಅವರಿಗೆ ಗೌರವ ಡಾಕ್ಟರೇಟ್ ಕೊಟ್ಟು ಗೌರವಿಸಿತ್ತು.





ಅಭಿನಯ ಸರಸ್ವತಿ ಎಂದೇ ಜನಪ್ರಿಯತೆ ಗಳಿಸಿದ್ದ ಅಭಿನೇತ್ರಿ ಬಿ.ಸರೋಜಾದೇವಿಅವರುಜು.14ರಂದು ನಿಧನರಾದರು. ಅವರು ಕನ್ನಡ, ತಮಿಳು, ತೆಲುಗು ಹಾಗೂಹಿಂದಿಚಿತ್ರರಂಗದಲ್ಲಿನಟಿಸಿಖ್ಯಾತಿಗಳಿಸಿದ್ದಾರೆ. ಸುಮಾರು 200 ಕ್ಕೂ ಹೆಚ್ಚು ಸಿನಿಮಾಗಳಲ್ಲಿ ನಟಿ ಸೈ ಎನಿಸಿಕೊಂಡಿದ್ದಾರೆ.1955ರಲ್ಲಿತೆರೆಕಂಡಮಹಾಕವಿ ಕಾಳಿದಾಸಸಿನಿಮಾಮೂಲಕಕನ್ನಡಚಿತ್ರರಂಗಕ್ಕೆಎಂಟ್ರಿ ಕೊಟ್ಟರು.ಕನ್ನಡದಮೊದಲಮಹಿಳಾಸೂಪರ್ಸ್ಟಾರ್ ಎಂಬಬಿರುದನ್ನೂಪಡೆದುಕೊಂಡರು.1970ರದಶಕದ ವರೆಗೂಹಲವಾರುಯಶಸ್ವಿಚಿತ್ರಗಳಲ್ಲಿನಟಿಸಿಖ್ಯಾತಿ ಗಳಿಸಿದರು.

ಬೆಂಗಳೂರು:ಸೆ.11:ಸಾಹಸಸಿಂಹಡಾ.ವಿಷ್ಣುವರ್ಧನ್ ಹಾಗೂನಟಿಬಿ.ಸರೋಜಾದೇವಿ ಅವರಿಗೆಮರಣೋತ್ತರ 'ಕರ್ನಾಟಕರತ್ನ' ಪ್ರಶಸ್ತಿಯನ್ನುಸರ್ಕಾರಘೋಷಿಸಿದೆ. ಮುಖ್ಯಮಂತ್ರಿಸಿದ್ದರಾಮಯ್ಯನೇತೃತ್ವದಲ್ಲಿಇಂದುನಡೆದ ಸಚಿವಸಂಪುಟಸಭೆಯಲ್ಲಿಈನಿರ್ಧಾರಕೈಗೊಳ್ಳಲಾಗಿದೆ. ಸಚಿವಸಂಪುಟಸಭೆಯನಂತರಸುದ್ದಿಗಾರರಿಗೆಮಾಹಿತಿ ನೀಡಿದಕಾನೂನುಸಚಿವಎಚ್.ಕೆ.ಪಾಟೀಲ್,ವಿಷ್ಣುವರ್ಧನ್ ಸ್ಮಾರಕ ನಿರ್ಮಾಣಕ್ಕೆ ಜಮೀನು ನೀಡಬೇಕೆಂಬ ಬಗ್ಗೆ ಅಭಿಮಾನಿಗಳು ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಿದ್ದರು. ಈ ಬಗ್ಗೆ ಸಂಪುಟ ಸಭೆಯಲ್ಲಿ ಯಾವುದೇ ಚರ್ಚೆಯಾಗಿಲ್ಲಎಂದರು.ನಟವಿಷ್ಣುವರ್ಧನ್ಅವರಿಗೆ ಮರಣೋತ್ತರಕರ್ನಾಟಕರತ್ನನೀಡುವಂತೆಪತ್ನಿಭಾರತಿ ಮತ್ತು ಅಳಿಯಅನಿರುದ್ಧ್,ಸಿಎಂಸಿದ್ದರಾಮಯ್ಯರನ್ನು ಭೇಟಿಯಾಗಿ ಮನವಿ ಮಾಡಿದ್ದರು. ಈ ಸಂಬಂಧ ವಿಷ್ಣು ಅಭಿಮಾನಿಗಳುಸಹ ಸರ್ಕಾರದ ಮೇಲೆ ಒತ್ತಡ ಹಾಕಿದ್ದರು. ಸಿನಿಮಾ ರಂಗಕ್ಕೆ ವಿಷ್ಣು ಅವರ ಕೊಡುಗೆ ಹಾಗೂ ಅಭಿಮಾನಿಗಳ ಒತ್ತಾಸೆಯನ್ನು ಪರಿಗಣಿಸಿ ಸರ್ಕಾರ ಕರ್ನಾಟಕ ರತ್ನ ಪ್ರಶಸ್ತಿಯನ್ನು ಘೋಷಿಸಿದೆ.

## ಲಘು ಭೂಕಂಪ : ಆತಂಕ ಬೇಡ

ಕಲಬುರಗಿ:ಸೆ.11: ಜಿಲ್ಲೆಯ ಆಳಂದ ತಾಲೂಕಿನ ಚಿಂಚನಸೂರು ಗ್ರಾಮದ ಸುತ್ತಮುತ್ತಲಿನ ಪ್ರದೇಶದಲ್ಲಿ ಸೆ.11 ರಂದು ಬೆಳಗ್ಗೆ 8:17ರ ಸುಮಾರಿಗೆ ಸಣ್ಣ ಪ್ರಮಾಣದ ಭೂಕಂಪನವಾಗಿದ್ದು, ರಿಕ್ಟರ್ ಮಾಪಕದಲ್ಲಿ 2.3 ತೀವ್ರತೆ ದಾಖಲಾಗಿದೆ.

ಘಟನೆ ಹಿನ್ನೆಲೆ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿ, ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದೊಂದಿಗೆ ಸಂಪರ್ಕದಲ್ಲಿದ್ದು, ಸ್ಥಳಕ್ಕೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳು, ತಹಸೀಲ್ದಾರ್, ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ಎಂದು ತಿಳಿಸಿದ್ದಾರೆ.

ಭೂಕಂಪನ ಸಣ್ಣ ಪ್ರಮಾಣದ್ದಾಗಿದ್ದು, ಸಾರ್ವಜನಿಕರು ಹಾಗೂ ಚಿಂಚನಸೂರು ಸೇರಿದಂತೆ ಸುತ್ತಮುತ್ತಲಿನ ವ್ಯಾಪ್ತಿಯ ಗ್ರಾಮಸ್ಥರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗಬಾರದು ಎಂದು ಪ್ರಿಯಾಂಕ್ ಖರ್ಗೆ ಮನವಿ ಮಾಡಿದ್ದಾರೆ.

## ವಿಧಾನ ಪರಿಷತ್: ನಾಲ್ಕು ನೂತನ ಸದಸ್ಯರ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು, ಸೆ 11:ಕರ್ನಾಟಕ ವಿಧಾನ ಪರಿಷತ್ತಿಗೆ ನೂತನವಾಗಿ ನೇವಕವಾಗಿರುವ ಸದಸ್ಯರುಗಳಾದ ಡಾ. ಆರತಿ ಕೃಷ್ಣ, ಎಫ್. ಹೆಚ್. ಜಕ್ಕಪ್ಪನವರ್, ಶಿವಕುಮಾರ್. ಕೆ ಮತ್ತು ರಮೇಶ್ ಬಾಬು ಅವರು ಇಂದು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಸರಳ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.ಎಲ್ಲಾ ನೂತನ ಸದಸ್ಯರುಗಳಿಗೆ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಗೌಪ್ಯತಾ ಪ್ರಮಾಣ ವಚನ ಬೋಧಿಸಿದರು.ಪರಿಷತ್ ಸದಸ್ಯರಾಗಿ ನೇಮಕವಾಗಿರುವ ಡಾ. ಆರತಿ ಕೃಷ್ಣ, ಶಿವಕುಮಾರ್. ಕೆ ಮತ್ತು ರಮೇಶ್ ಬಾಬು ಅವರು ಭಗವಂತನ ಹೆಸರಿನಲ್ಲಿ ಹಾಗೂ ಎಫ್. ಹೆಚ್. ಜಕ್ಕಪ್ಪನವರ್ ಅವರು ಭಗವಾನ್ ಬುದ್ಧ ಮತ್ತು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಮಂತ್ರಿಗಳಾದ ಡಾ. ಜಿ. ಪರಮೇಶ್ವರ, ಕರ್ನಾಟಕ ವಿಧಾನ ಪರಿಷತ್ತಿನ ಸಭಾನಾಯಕರು ಹಾಗೂ ಸಣ್ಣ ನೀರಾವರಿ ಇಲಾಖೆ ಸಚಿವರಾದ ಎನ್. ಎಸ್ ಭೋಸರಾಜು, ವಿಧಾನ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ ಸೇರಿದಂತೆ, ಸಚಿವರು, ಶಾಸಕರು, ಮಾಜಿ ಶಾಸಕರು, ಉಪಸ್ಥಿತರಿದ್ದರು.

## ಪ್ರವಾಹ ಪೀಡಿತ ಉತ್ತರಾಖಂಡಕ್ಕೆ ಮೋದಿ ಭೇಟಿ 1,200 ಕೋಟಿ ನೆರವು ಘೋಷಣೆ



ಡೆಹ್ರಾಡೂನ್:ಸೆ.11: ಪ್ರವಾಹ ಹಾನಿಯನ್ನುಪರಿಶೀಲಿಸುವಸಲುವಾಗಿ ಉತ್ತರಾಖಂಡಕ್ಕೆ ಭೇಟಿ ನೀಡಿದರು. ಬಂದಿಳಿದಪ್ರಧಾನಿಮೋದಿಯವರನ್ನು ಧಾಮಿ,ಗವರ್ನರ್ಲೆಫ್ಟಿನೆಂಟ್ಜನರಲ್ ತಮ್ಮ ಭೇಟಿಯಸಮಯದಲ್ಲಿಮೋದಿ ನಡೆಸಿದರು. ಅಲ್ಲದೇಪ್ರವಾಹಪೀಡಿತ ಮತ್ತು ಭಾರೀಮಳೆಯಿಂದಉಂಟಾದ ಪ್ರಧಾನಿನರೇಂದ್ರ ಮೋದಿ ಗುರುವಾರ ಡೆಹ್ರಾಡೂನ್ ವಿಮಾನ ನಿಲ್ದಾಣದಲ್ಲಿ ಅಲ್ಲಿನಮುಖ್ಯಮಂತ್ರಿ ಪುಷ್ಕರ್ ಸಿಂಗ್ ಗುರುಪ್ರೀತ್ ಸಿಂಗ್ ಸ್ವಾಗತಿಸಿದರು. ಅಧಿಕಾರಿಗಳೊಂದಿಗೆಪರಿಶೀಲನಾಸಭೆ ಕುಟುಂಬಗಳೊಂದಿಗೆಸಂವಾದನಡೆಸಿದರು. ಇದೇ ವೇಳೆ ಪ್ರವಾಹ ಮತ್ತು ಮಳೆ ಪೀಡಿತ ಪ್ರದೇಶಗಳಿಗೆ ಪ್ರಧಾನಿ ಮೋದಿ 1,200 ಕೋಟಿ ರೂ.ಗಳ ಆರ್ಥಿಕ ನೆರವನ್ನು ಘೋಷಿಸಿದ್ದಾರೆ. ಅಲ್ಲದೇ ಮೃತರ ಕುಟುಂಬಗಳಿಗೆ 2 ಲಕ್ಷ ರೂ. ಪರಿಹಾರ ಮತ್ತು ಗಾಯಗೊಂಡವರಿಗೆ 50,000 ರೂ.ಗಳ ಪರಿಹಾರವನ್ನು ಸಹ ಘೋಷಿಸಿದರು. ಪ್ರವಾಹ ಮತ್ತು ಭೂಕುಸಿತದಿಂದ ಅನಾಥರಾದ ಮಕ್ಕಳಿಗೆ ಪಿಎಂ ಕೇರ್ಸ್ ಫಾರ್ ಚಿಲ್ಡ್ರನ್ ಯೋಜನೆಯಡಿಯಲ್ಲಿ ಸಂಪೂರ್ಣ ಸಹಾಯ ನೀಡುವುದಾಗಿ ಮೋದಿ ಭರವಸೆ ನೀಡಿದರು. ಇನ್ನು ಎನ್ಡಿಆರ್ಎಫ್, ಎಸ್ಡಿಆರ್ಎಫ್ ಮತ್ತು ಆಪ್ದಾ ಮಿತ್ರ ಸ್ವಯಂಸೇವಕರೊಂದಿಗೆ ಸಂವಾದ ನಡೆಸಿದ ಮೋದಿ ಅವರ ನಿರಂತರ ಕೆಲಸ ಹಾಗೂ ಪ್ರಯತ್ನವನ್ನು ಶ್ಲಾಘಿಸಿದರು. ಪೀಡಿತ ಪ್ರದೇಶಗಳಲ್ಲಿ ಹಾನಿಗೊಳಗಾದ ಮೂಲಸೌಕರ್ಯಗಳ ಪುನಃಸ್ಥಾಪನೆ ಮತ್ತು ಪುನರ್ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಸಂಪೂರ್ಣ ಬೆಂಬಲವನ್ನು ನೀಡುವುದಾಗಿ ಭರವಸೆ ನೀಡಿದೆ. ಹವಾಮಾನ ವೈಪರೀತ್ಯದಿಂದಾಗಿ ಮೋದಿ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ಕೈಗೊಳ್ಳಲು ಸಾಧ್ಯವಾಗಲಿಲ್ಲ.

## ಭಾರತ – ಪಾಕ್ ಪಂದ್ಯ ಬೇಡ ಅರ್ಜಿ ತುರ್ತು ವಿಚಾರಣೆಗೆ ಸುಪ್ರೀಂ ನಕಾರ

ನವದೆಹಲಿ:ಸೆ.11: ಭಾರತ ಮತ್ತು ಪಾಕಿಸ್ತಾನ ನಡುವೆ ಸೆ.14ರಂದು ನಡೆಯಲಿರುವ ಟಿ20 ಏಷ್ಯಾಕಪ್ ಪಂದ್ಯವನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆಗೆ ತಿರಸ್ಕರಿಸಿದೆ.2025ರ ಟಿ20 ಏಷ್ಯಾಕಪ್ ವೇಳಾಪಟ್ಟಿ ಪ್ರಕಟವಾದಾಗಿನಿಂದಲೂ ಭಾರತ – ಪಾಕ್ ನಡುವಿನ ಪಂದ್ಯಕ್ಕೆ ಭಾರೀ ವಿರೋಧ ಕೇಳಿಬರ್ತಿದೆ. ಆಪರೇಷನ್ ಸಿಂಧೂರ ಕಾರ್ಯಾಚರಣೆ ಬಳಿಕ ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳು ಹದಗೆಟ್ಟಿವೆ. ಹೀಗಾಗಿ ಇಂಡೋ–ಪಾಕ್ ಪಂದ್ಯ ನಿಲ್ಲಿಸುವಂತೆ ಒತ್ತಾಯಗಳು ಕೇಳಿಬರುತ್ತಿವೆ. ಅದೇ ರೀತಿ ಭಾರತ–ಪಾಕಿಸ್ತಾನ ನಡುವಿನ ಏಷ್ಯಾಕಪ್ ಪಂದ್ಯವನ್ನು ರದ್ದುಗೊಳಿಸುವಂತೆ ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿತ್ತು. ಆದ್ರೆ ಅರ್ಜಿಯನ್ನ ವಿಚಾರಣೆಗೆ ಪರಿಗಣಿಸೋದಕ್ಕೂ ಸುಪ್ರೀಂ ಕೋರ್ಟ್ ನಿರಾಕರಿಸಿದೆ.ನ್ಯಾಯಮೂರ್ತಿಗಳಾದ ಜೆಕೆ ಮಹೇಶ್ವರಿ ಮತ್ತು ವಿಜಯ್ ಬಿಷ್ಣೋಯ್ ಅವರ ಪೀಠವು ಅರ್ಜಿ ವಿಚಾರ ಕೇಳೋದಕ್ಕೂ ನಿರಾಕರಿಸಿದ್ದು, ಇದು ಕೇವಲ ಒಂದು ಪಂದ್ಯ ಅಷ್ಟೇ ಎಂದು ಹೇಳಿದೆ.

## ಅರಣ್ಯ ಹುತಾತ್ಮರ ತ್ಯಾಗ-ಬಲಿದಾನ ಸ್ಮರಿಸಿ ಗೌರವ ಸೂಚಿಸಬೇಕು :ಸಿಎಂ

ಬೆಂಗಳೂರು, ಸೆ 11:ಅರಣ್ಯ ಹುತಾತ್ಮರ ಸೇವೆ ಹಾಗೂ ತ್ಯಾಗ-ಬಲಿದಾನಗಳನ್ನು ಸ್ಮರಿಸಿ ಅವರಿಗೆ ಗೌರವ ಸಲ್ಲಿಸುವುದು ನಮ್ಮ ನಿಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.ಇಂದು ಅರಣ್ಯ ಇಲಾಖೆಯವತಿಯಿಂದ ಮಲ್ಲೇಶ್ವರಂನ ಅರಣ್ಯ ಭವನದಲ್ಲಿ ರಾಷ್ಟ್ರೀಯಅರಣ್ಯಹುತಾತ್ಮರದಿನಾಚರಣೆ2025ಕಾರ್ಯಕ್ರಮದಲ್ಲಿಮುಖ್ಯ ಅತಿಥಿಗಳಾಗಿಭಾಗವಹಿಸಿಮಾತನಾಡಿದಮುಖ್ಯಮಂತ್ರಿಗಳು, ನಾಡಿನಅರಣ್ಯ ಮತ್ತು ವನ್ಯಜೀವಿ ಸಂಪತ್ತನ್ನು ಸಂರಕ್ಷಿಸಲು ಪ್ರಾಣತ್ಯಾಗ ಮಾಡಿದ ಅರಣ್ಯ ಇಲಾಖೆಯ ಹುತಾತ್ಮರಿಗೆ ಶ್ರದ್ಧಾಂಜಲಿ ಅರ್ಪಿಸುತ್ತಾ, ಅರಣ್ಯ ಇಲಾಖೆಯಲ್ಲಿ ಕರ್ತವ್ಯ ನಿರತರಾಗಿದ್ದಾಗ ಸುಮಾರು 62 ಜನಹುತಾತ್ಮರಾಗಿದ್ದಾರೆ. ಅರಣ್ಯ ಹುತಾತ್ಮರಿಗೆ ಗೌರವ ಸಲ್ಲಿಸುವಂತಹ ಕಾರ್ಯನಿರ್ವಹಿಸುತ್ತಿರುವಅಧಿಕಾರಿಹಾಗೂ ಅಲ್ಲದೇಅರಣ್ಯಹುತಾತ್ಮರಧ್ಯೇಯ, ಇಂತಹ ಕಾರ್ಯಕ್ರಮಗಳು ಪ್ರಸ್ತುತ ಸಿಬ್ಬಂದಿಗಳಿಗೆಸ್ಪೂರ್ತಿದಾಯಕವಾಗಲಿ, ಗುರಿಗಳುಇತರರಿಗೆಮಾರ್ಗದರ್ಶನವಾಗಲಿ ಎಂದು ತಿಳಿಸಿದರು.ಪ್ರಕೃತಿ ನಮಗೆ ಹೊದಿಕೆಯಾದಅರಣ್ಯವನ್ನುಕಾಪಾಡುವುದು ಕೊಡುಗೆಯಾಗಿ ನೀಡಿರುವ ಹಸಿರು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಜನರು ಸಂತೃಪ್ತಿಯಿಂದ ಬದುಕಲು, ಮಳೆ ಬೆಳೆಯಾಗಲು ಅರಣ್ಯದ ಪಾತ್ರ ಹಿರಿದು. ಪ್ರತಿ ವರ್ಷ ಕೋಟ್ಯಾಂತರ ಗಿಡ ನೆಡಲಾಗುತ್ತದೆ. ಸುಮಾರು 40 ವರ್ಷದಿಂದಅರಣ್ಯ ಇಲಾಖೆಯಸಭೆ, ಸಮಾರಂಭದಲ್ಲಿ ಭಾಗವಹಿಸಿದ್ದೇನೆ. ಕಾಡು ಹೆಚ್ಚಾಗಬೇಕಾಗಿತ್ತು. ಆದರೆ ಅಷ್ಟೊಂದುಪ್ರಮಾಣದಲ್ಲಿಹೆಚ್ಚಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.ಕರ್ನಾಟಕ ರಾಜ್ಯವು ಸಮೃದ್ಧ ಅರಣ್ಯ ಹಾಗೂ ವನ್ಯಜೀವಿ ಸಂಪತ್ತು ಹೊಂದಿರುವ ರಾಜ್ಯವಾಗಿದ್ದು, ಆನೆ ಸಂಖ್ಯೆಯಲ್ಲಿ ನಮ್ಮ ರಾಜ್ಯವು ಮೊದಲನೇ ಸ್ಥಾನದಲ್ಲಿದ್ದು, ಹುಲಿಗಳ ಸಂಖ್ಯೆಯಲ್ಲಿ ಎರಡನೇ ಸ್ಥಾನದಲ್ಲಿದೆ ಎಂದರು.ಕಾಡು ಪ್ರಾಣಿಗಳ ಮಾನವನವರ ಸಂಘರ್ಷ ತಪ್ಪಿಸಲು ರೈಲ್ವೇ ಬ್ಯಾರಿಕೇಡ್‌ಗಳನ್ನು ಹೆಚ್ಚಾಗಿ ನಿರ್ಮಿಸಬೇಕು. ಈಗ 410 ಕಿ.ಮೀ. ಬ್ಯಾರಿಕೇಡ್ ಪೂರ್ಣಗೊಂಡಿದೆ. ಅರಣ್ಯ ಇಲಾಖೆಯಲ್ಲಿ ಸಾಕಷ್ಟು ಹಣವಿದೆ. ಅಗತ್ಯ ಬಿದ್ದರೆ ಸರ್ಕಾರವು ನೀಡುವುದು ಕೂಡಲೇ ಎಲ್ಲಾ ಬ್ಯಾರಿಕೇಡ್‌ಗಳನ್ನು ಪೂರ್ಣಗೊಳಿಸಲು ಸೂಚಿಸಿದರು.ಕಾಡು ಉಳಿಸುವುದು, ರಕ್ಷಣೆ ಮಾಡುವ ಜವಾಬ್ದಾರಿ ಅಧಿಕಾರಗಳ ಮೇಲಿದೆ. ಅಧಿಕಾರಿಗಳು ಕಾಡಿಗೆ ಆಗಾಗ ಭೇಟಿ ನೀಡವುದು ಅವಶ್ಯಕ ಹಾಗೂ ಕಾಡಿನಲ್ಲೇ ಉಳಿದರೆ ಉತ್ತಮ. ಆಗ ಕೆಳ ಹಂತದ ಸಿಬ್ಬಂದಿ ಕೂಡ ಕಾಡಿನೊಳಗೆ ಇದ್ದು ಕರ್ತವ್ಯ ನಿರ್ವಹಿಸುತ್ತಾರೆ ಎಂದು ತಿಳಿಸಿದರು.ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವ ಈಶ್ವರ್ ಬಿ ಖಂಡ್ರೆ ಮಾತನಾಡಿ ಹವಾಮಾನ ವೈಪರೀತ್ಯ ಮನುಕುಲದ ಸವಾಲಾಗಿದೆ. ಜಾಗತಿಕ ತಾಪಮಾನ ಹೆಚ್ಚಾಗಿದೆ. ಗುಡ್ಡ ಕುಸಿತ, ಪ್ರವಾಹ, ಪ್ರಕೃತಿ ವಿಕೋಪದಿಂದ ಮನುಕುಲ ನಾಶವಾಗುವ ಸಂಭವವಿದೆ. ಪ್ರಕೃತಿ ಪರಿಸರ ಸಂರಕ್ಷಣೆ ಆದ್ಯ ಕರ್ತವ್ಯ. ಅರಣ್ಯ ಸಂಪತ್ತನ್ನು ಸಂರಕ್ಷಿಸಲು ನೂರಾರು ಜನ ಹುತಾತ್ಮರಾಗಿದ್ದಾರೆ ಎಂದು ತಿಳಿಸಿದರು.



## ಸಿ.ಟಿ ರವಿ ದ್ವೇಷ ಭಾಷಣ ಮಾಡಿದ್ದಕ್ಕೆ ಎಫ್ಐಆರ್ : ರಾಮಲಿಂಗಾರೆಡ್ಡಿ

ಬೆಂಗಳೂರು:ಸೆ.11:ಬಿಜೆಪಿನಾಯಕಸಿ.ಟಿರವಿದ್ವೇಷಭಾಷಣಮಾಡಿದ್ದಕ್ಕೆ ಎಫ್ಐಆರ್ ದಾಖಲು ಮಾಡಲಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ಎಫ್ಐಆರ್ ಹಾಕಿರೋದನ್ನ ಸಮರ್ಥನೆ ಮಾಡಿಕೊಂಡಿದ್ದಾರೆ.ಸಿ.ಟಿ ರವಿ ಮೇಲೆಎಫ್ಐಆರ್ಆಗಿರೋವಿಚಾರಕ್ಕೆವಿಧಾನಸೌಧದಲ್ಲಿಪ್ರತಿಕ್ರಿಯೆನೀಡಿದ ಅವರು,ಸಿ.ಟಿರವಿಅವರಮಾತುಕೇಳಿದ್ದೇನೆ.ತೊಡೆಮುರಿಯೋದು,ತಲೆ ತೆಗೆಯೋದುಅಂತೆಲ್ಲಮಾತಾಡಿದ್ದಾರೆ.ರವಿಅವರುಸಚಿವರಾಗಿದ್ದವರು,ಶಾಸಕರು. ಅಂತಹವರ ಬಾಯಿಂದ ಇಂತಹ ಪದ ಬಳಕೆ ಸರಿನಾ? ಜನರೇ ಇದನ್ನ ತೀರ್ಮಾನಮಾಡಲಿ. ಹಾಗೆದ್ವೇಷಭಾಷಣಮಾಡಿದ್ದಕ್ಕೆಕೇಸ್ಹಾಕಿದ್ದಾರೆ. ಅದರಲ್ಲಿ ತಪ್ಪೇನು ಎಂದು ಎಫ್ಐಆರ್ ಸಮರ್ಥನೆ ಮಾಡಿಕೊಂಡರು. ಇದೇವೇಳೆಸಿಎಂಪಾಕಿಸ್ತಾನಹೋಗಲಿ ಎಂಬವಿಪಕ್ಷನಾಯಕಅಶೋಕ್ಹೇಳಿಕೆಗೆ ಪ್ರತಿಕ್ರಿಯೆನೀಡಿದಅವರು, ಅಶೋಕ್ ಹೀಗೆಮಾತಾಡೋದುಸರಿಯಲ್ಲ.ಅವರ ಹೇಳಿಕೆವಿಪಕ್ಷನಾಯಕನಸ್ಥಾನಕ್ಕೆಗೌರವ ತರೋದಿಲ್ಲ.ಪ್ರಧಾನಿಮೋದಿಅವರು ಆಹ್ವಾನಇಲ್ಲದೆಪಾಕಿಸ್ತಾನಕ್ಕೆಹೋದರು, ಯಾಕೆ ಹೋದ್ರು? ಆಪರೇಷನ್ ಸಿಂಧೂರದಲ್ಲಿ ಇಡೀ ದೇಶ ಮೋದಿ



ಪರಇತ್ತು.ಆದರೆಇವರುರಾತ್ರೋರಾತ್ರಿ ಯುದ್ಧನಿಲ್ಲಿಸಿದ್ರು.ಪಾಕಿಸ್ತಾನವನ್ನ ಭೂಪಟದಲ್ಲಿಇಲ್ಲದಂತೆಮಾಡಬಹುದಿತ್ತು.ಯಾಕೆಮಾಡಲಿಲ್ಲ? ಅಶೋಕ್ ಹೀಗೆ ಮಾತಾಡೋದು ಸರಿಯಲ್ಲ. ಅಶೋಕ್ ತಮ್ಮ ಹೇಳಿಕೆ ವಾಪಸ್ ಪಡೆಯಲಿಎಂದುಆಗ್ರಹಿಸಿದರು.ಮುಂದಿನ10ವರ್ಷಬಿಜೆಪಿಅಧಿಕಾರದಲ್ಲಿ ಇರುತ್ತೆ ಎಂಬ ಅಶೋಕ್ ಹೇಳಿಕೆಗೆ ತಿರುಗೇಟು ಕೊಟ್ಟ ಅವರು, ಬಿಜೆಪಿ ಇನ್ನು 10 ವರ್ಷ ವಿಪಕ್ಷದಲ್ಲೇ ಇರುತ್ತದೆ. ಕೇಂದ್ರದಲ್ಲೂ ಬಿಜೆಪಿ ವಿಪಕ್ಷಕ್ಕೆ ಬರಲಿದೆ.ಬಿಜೆಪಿಯವರಿಗೆ ಅಧಿಕಾರ ಮಾತ್ರ ಮುಖ್ಯ. ನಾವು ಜನರ ಕೆಲಸಮಾಡುತ್ತೇವೆ. ಬಿಜೆಪಿ ಅವರು ಧರ್ಮ, ದೇವರ ಹೆಸರಿನಲ್ಲಿ ಮತ ಕೇಳುತ್ತಾರೆ. 10 ವರ್ಷ ಬಿಜೆಪಿ ಅವರು ವಿಪಕ್ಷದಲ್ಲಿ ಇರುತ್ತಾರೆ ಎಂದು ಭವಿಷ್ಯನುಡಿದರು. ಇನ್ನು ಮದ್ದೂರು ಗಲಾಟೆ ವಿಚಾರವಾಗಿ ಪ್ರತಿಕ್ರಿಯೆ ನೀಡಿದಅವರು,ದಸರಾಉದ್ಘಾಟನೆಗೆಬಾನುಮುಷ್ತಾಕ್ಆಯ್ಕೆಬೆನ್ನಲ್ಲೇಈನೆಪ ಇಟ್ಟುಕೊಂಡು ಬಿಜೆಪಿ ಮದ್ದೂರಿನಂತಹ ಘಟನೆಗಳನ್ನ ಮಾಡಿಸುತ್ತಿದ್ದಾರೆ. ಮದ್ದೂರಿನಲ್ಲಿ ಗಣೇಶೋತ್ಸವದ ಮೇಲೆ ಕಲ್ಲು ತೂರಾಟ ಮಾಡಿದರು. ಈಗಾಗಲೇ ಕಲ್ಲು ಹೊಡೆದವರ ಮೇಲೆ ಕೇಸ್ ಹಾಕಲಾಗಿದೆ. ಕಾನೂನು ಪ್ರಕಾರ ಸರ್ಕಾರ ಕ್ರಮ ತೆಗೆದುಕೊಂಡಿದೆ. ಬಿಜೆಪಿ ಎಲ್ಲಾದರೂ ಇಂತಹ ಘಟನೆ ಆಗಲಿ ಅಂತ ಕಾಯುತ್ತಿರುತ್ತಾರೆ ಎಂದು ಕಿಡಿಕಾರಿದರು. ಸ್ವಾತಂ ಮುಂಚೆಯೂ ಕೋಮು ಗಲಭೆಗಳು ಆಗಿತ್ತು. ಈಗ ಮದ್ದೂರಿನಲ್ಲಿ ಬಿಜೆಪಿ ಅವರು ಬೆಂಕಿಗೆ ತುಪ್ಪ ಹಾಕೋ ಕೆಲಸ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಅರಾಜಕತೆ ಸೃಷ್ಟಿ ಮಾಡೋ ಕೆಲಸ ಮಾಡುತ್ತಿದ್ದಾರೆ. ಕಲ್ಲು ಹೊಡೆದವರ ಮೇಲೆ ಕ್ರಮ ಆಗದೇ ಇದ್ದರೆ ಬಿಜೆಪಿ ಮಾತಾಡಬಹುದಿತ್ತು.

## ಹಿರಿಯ ನಾಗರಿಕರ ಕಾಯ್ದೆಯಡಿ 10 ಸಾ,ರೂ ಮಿತಿ ಪರಿಷ್ಕರಣೆಗೆ ಹೈಕೋರ್ಟ್ ಶಿಫಾರಸು

ಬೆಂಗಳೂರು: ಸೆ.11: ದೇಶಾದ್ಯಂತ ವೃದ್ಧರಿಗೆ ಪ್ರಯೋಜನಕಾರಿಯಾದ ಕ್ರಮದಲ್ಲಿ, ಜೀವನ ವೆಚ್ಚದಲ್ಲಿನ ಹೆಚ್ಚಳವನ್ನು ಪರಿಗಣಿಸಿ, ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ 2007ರ ಸೆಕ್ಷನ್ 9 ಅನ್ನು ಮರುಪರಿಶೀಲಿಸುವಂತೆ ಕರ್ನಾಟಕ ಹೈಕೋರ್ಟ್ ಕೇಂದ್ರಕ್ಕೆ ಶಿಫಾರಸು ಮಾಡಿದೆ.ಇಷ್ಟು ಕಡಿಮೆ ನಿರ್ವಹಣೆಯು ಕಾಯ್ದೆಯ ಉದ್ದೇಶಗಳನ್ನು ಈಡೇರಿಸಬಹುದೇ? ಸೆಕ್ಷನ್ 9 ರ ಮಿತಿಯೊಳಗೆ ನಾಗರಿಕನು ಘನತೆ, ಜೀವನಾಧಾರ ಮತ್ತು ವೈದ್ಯಕೀಯ ಸಹಾಯವನ್ನು ಪಡೆಯಬಹುದೇ? ಈ ಬಗ್ಗೆ ಚಿಂತನೆಯ ಅಗತ್ಯವಿದೆ. ಇಲ್ಲದಿದ್ದರೆ ಆ ಹಿರಿಯ ನಾಗರಿಕರ ಅಸ್ತಿತ್ವವನ್ನು 'ಕೇವಲ ಪ್ರಾಣಿಗಳ' ಮಟ್ಟಕ್ಕೆ ಇಳಿಸುತ್ತದೆ ಎಂದು ಹೈಕೋರ್ಟ್ ಕಿಡಿಕಾರಿದೆ.ಈ ನ್ಯಾಯಾಲಯವು ಶಾಸನ ಮಾಡಲು ಸಾಧ್ಯವಿಲ್ಲ; ಇದು ಸೆಕ್ಷನ್ 9 ಅನ್ನು ಪುನಃ ಬರೆಯಲು ಸಾಧ್ಯವಿಲ್ಲ. ಆದರೆ 2007 ರಲ್ಲಿ ಅರ್ಥಪೂರ್ಣವಾಗಿದ್ದ ಈ ನಿಬಂಧನೆಯು ಈಗ 2025 ರಲ್ಲಿ ಅದನ್ನು ಅಣಕಿಸುವಂತಿದೆ ಎಂದ ಹೈಕೋರ್ಟ್, ಕೇಂದ್ರ ಸರ್ಕಾರ ಸಂವೇದನಾಶೀಲಗೊಳಿಸುವ ಜವಾಬ್ದಾರಿಯನ್ನು ಹೊಂದಿದೆ ಎಂದು ಹೇಳಿದೆ.ಆಹಾರ, ವಸತಿ, ಔಷಧ ಬೆಲೆ ಏರಿಕೆಯಾಗಿದೆ ಎಂದು ನ್ಯಾಯಾಲಯ ತಿಳಿಸಿದೆ.ಈ ನ್ಯಾಯಾಲಯವು ಕೇಂದ್ರ, ಸರ್ಕಾರ, ಸೆಕ್ಷನ್ 9 ಅನ್ನು ಮರುಪರಿಶೀಲಿಸುವಂತೆ ಮತ್ತು ಜೀವನ ವೆಚ್ಚ ಸೂಚ್ಯಂಕಕ್ಕೆ ಅನುಗುಣವಾಗಿ ಮಿತಿಯನ್ನು ಪರಿಷ್ಕರಿಸುವಂತೆ ಶಿಫಾರಸು ಮಾಡುವುದು ಸೂಕ್ತವೆಂದು ಪರಿಗಣಿಸುತ್ತದೆ. ವೃದ್ಧಾಪ್ಯದಲ್ಲಿ ಘನತೆಯ ಜೀವನ ಖಾತರಿಪಡಿಸಿಕೊಳ್ಳಬೇಕು ಎಂದು ಹೇಳಿದೆ.ಈ ಕಾಯ್ದೆ ಜಾರಿಗೆ ಬಂದು 18 ವರ್ಷವಾದರೂ ಮಿತಿಯನ್ನು ಹೆಚ್ಚಿಸಲಾಗಿಲ್ಲ.




## ಅಲ್ಪಸಂಖ್ಯಾತರ ಹಿಂದುಳಿದ ಕಾಲೋನಿಗಳ ಅಭಿವೃದ್ಧಿಗೆ 398 ಕೋಟಿ :ಸಂಪುಟ ನಿರ್ಧಾರಕ್ಕೆ ಬಿಜೆಪಿ ಟೀಕೆ

ಬೆಂಗಳೂರು:ಸೆ.11:ಅಲ್ಪಸಂಖ್ಯಾತಸಮುದಾಯದವರಿಗೆಸರ್ಕಾರದಿಂದ ಮತ್ತೊಂದುಬಂಪರ್ಕೊಡುಗೆಸಿಕ್ಕಿದೆ.ಅಲ್ಪಸಂಖ್ಯಾತರುವಾಸಿಸುವನಗರ ಪ್ರದೇಶದಹಿಂದುಳಿದಕಾಲೋನಿಗಳುಮಾದರಿಕಾಲೋನಿಯಾಗಿಅಭಿವೃದ್ಧಿಗೆ ಸರ್ಕಾರಮುಂದಾಗಿದೆ. 22 ವಿಧಾನಸಭಾಕ್ಷೇತ್ರಗಳಲ್ಲಿಮಾದರಿಕಾಲೋನಿ ನಿರ್ಮಾಣಕ್ಕೆಸರ್ಕಾರತಿರ್ಮಾನಮಾಡಿದ್ದು, 398 ಕೋಟಿ ರೂ. ಮೊತ್ತದ ಯೋಜನೆ ಜಾರಿಗೆ ಸಂಪುಟ ಸಭೆ ಒಪ್ಪಿಗೆ ಕೊಟ್ಟಿದೆ.ಅಲ್ಪಸಂಖ್ಯಾತರು ಇರುವ ಅತಿ ಹಿಂದುಳಿದ ಹಾಗೂ ಹಿಂದುಳಿದ ಕಾಲೋನಿಗಳನ್ನು ಮಾದರಿ ಕಾಲೋನಿಗಳಾಗಿ ಅಭಿವೃದ್ಧಿಪಡಿಸುವುದು ಉದ್ದೇಶ. ಇದಕ್ಕಾಗಿ ಈಗಾಗಲೇ 1,000 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಮೀಸಲಿಟ್ಟಿದೆ. ಆ ಮೊತ್ತಕ್ಕೆ ಕ್ರಿಯಾ ಯೋಜನೆ ಸಿದ್ಧಪಡಿಸಿ ಹಂತಹಂತವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ತೀರ್ಮಾನಿಸಲಾಗಿದೆ. ಅದರ ಭಾಗವಾಗಿ ಈಗ 398 ಕೋಟಿ ರೂ ವೆಚ್ಚದಲ್ಲಿ ಅಲ್ಪಸಂಖ್ಯಾತರಕಾಲೋನಿಗಳಅಭಿವೃದ್ಧಿಕಾಮಗಾರಿಗಳನ್ನುಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೈಗೊಳ್ಳಲಿದೆ. ಸರ್ಕಾರದ ಈ ನಡೆಗೆ ಬಿಜೆಪಿ ನಾಯಕರು ಮತ್ತೊಂದು ಓಲೈಕೆ ರಾಜಕೀಯ ಎಂದು ಟೀಕಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮುಸ್ಲಿಮರಲ್ಲಿ ಬಡವರಿದ್ದಾರೆ, ದಲಿತರಲ್ಲಿ ಬಡವರಿದ್ದಾರೆ. ಈ ಬಡವರನ್ನು ಮೇಲೆತ್ತಿ, ಅಲ್ಪಸಂಖ್ಯಾತರ ಕಾಲೋನಿಗಳನ್ನು ಅಭಿವೃದ್ಧಿ ಮಾಡೋದಲ್ಲ. ಈ ತರಹದ ಓಲೈಕೆ ಬಿಡಲಿ. ಕಾಂಗ್ರೆಸ್, ಧರ್ಮ-ಧರ್ಮಗಳ ನಡುವೆ ವಿಷ ಬೀಜ ಬಿತ್ತುತ್ತಿದ್ದಾರೆ. ಇದು ಸರ್ಕಾರದ ಓಲೈಕೆ ರಾಜಕಾರಣ. ಇದು ರಾಜ್ಯದ ಜನತೆಗೂ ಗೊತ್ತಿದೆ. ಓಲೈಕೆ ಮಾಡಿ ಜನರನ್ನು ದಾರಿತಪ್ಪಿಸುವ ಕೆಲಸ ಇದು ಎಂದು ಟೀಕಿಸಿದ್ದಾರೆ.

ಏಷ್ಯಾ ಕಪ್:ದುಬೈ ನಲ್ಲಿ ನಡೆದ ಪಂದ್ಯದಲ್ಲಿ ಭಾರತಕ್ಕೆ ಯುಎಇ ವಿರುದ್ಧ 9 ವಿಕೆಟ್ ಗಳ ಜಯ

# ಕಮಲನಗರ ಆರೋಗ್ಯ ಕೇಂದ್ರದಲ್ಲಿ ವೈದ್ಯರ ಹಾಗೂ ಔಷಧಿ ಕೊರತೆ ನೀಗಿಸಿ:ಮಂಜುನಾಥ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆಕಮಲ ನಗರ:ಸೆ.11:ಕಮಲನಗರ ತಾಲೂಕು ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರು, ಔಷಧಿ ಹಾಗೂ ಮೂಲ ಸೌಕರ್ಯಗಳ ಕೊರತೆಯನ್ನು ನಿವಾರಿ,ಜನ ಸಾಮಾನ್ಯರ ಸಮಸ್ಯೆಗೆ ಬಗ್ಗೆ ಹರಿಸಬೇಕು ಎಂದು ಮಂಜುನಾಥ ಸ್ವಾಮಿ ಅಗ್ರಹಿಸಿದರು.ಪಟ್ಟಣದ ತಹಸೀಲ ಕಛೇರಿಯಲ್ಲಿ ಗುರುವಾರ ಕರವೇ ತಾಲೂಕ ಅಧ್ಯಕ್ಷ ಮಂಜುನಾಥ ಸ್ವಾಮಿ ನೇತೃತ್ವದಲ್ಲಿ ಕಮಲನಗರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರು, ಔಷಧಿ ಹಾಗೂ ಮೂಲ ಸೌಕರ್ಯಗಳ ಕೊರತೆಯನ್ನು ನಿವಾರಿಸುವ ಬಗ್ಗೆ ಮುಖ್ಯ ಮಂತ್ರಿಯರಿಗೆ ಬರೆದ ಮನವಿ ಪತ್ರ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಅವರು ಮೂಲಕ ಸಲ್ಲಿಸಿದರು.ನಂತರ ಮಾತನಾಡಿ,

ಕಮಲನಗರ ತಾಲೂಕು ವ್ಯಾಪ್ತಿಯ 54 ಹಳ್ಳಿಗಳಿಗೆ ಸೇವೆ ನೀಡುವ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಜನಸಾಮಾನ್ಯರು ದಿನನಿತ್ಯ ಚಿಕಿತ್ಸೆ ಪಡೆಯಲು ಆಗಮಿಸುತ್ತಾರೆ ಆದರೆ ಈ ಆಸ್ಪತ್ರೆಯಲ್ಲಿ ಹಲವು ಸಮಸ್ಯೆಗಳು ಎದುರಾಗುತ್ತಿವೆ.ವೈದ್ಯರ ಕೊರತೆಯಿಂದಾಗಿ ತುರ್ತು ಸಂದರ್ಭಗಳಲ್ಲಿ ತಕ್ಷಣ ಚಿಕಿತ್ಸೆ ನೀಡಲು ಸಾಧ್ಯವಾಗುತ್ತಿಲ್ಲಾ ವಿಶೇಷವಾಗಿ ತಜ್ಞವೈದ್ಯರ ಕೊರತೆ ತೀವ್ರವಾಗಿ ಅನುಭವವಾಗುತ್ತಿದೆ. ಅಗತ್ಯ ಪ್ರಮಾಣದಲ್ಲಿ ಔಷಧಿ ಲಭ್ಯವಿಲ್ಲದಿರುವುದರಿಂದ ರೋಗಿಗಳು ಖಾಸಗಿ ಅಂಗಡಿಗಳಿಂದ ಹೆಚ್ಚಿನ ವೆಚ್ಚದಲ್ಲಿ ಔಷಧಿ ಖರೀದಿಸಲು ಮಜಬೂರರಾಗುತ್ತಿದ್ದಾರೆ.ಆಸ್ಪತ್ರೆಯಲ್ಲಿ 31 ಮೂಲಸೌಕರ್ಯಗಳ ಕೊರತೆ (ಹಾಸಿಗೆ, ಉಪಕರಣಗಳು, ಪ್ರಯೋಗಾಲಯ ಸೌಲಭ್ಯಗಳು, ಪಾನೀಯ ನೀರು, ಶೌಚಾಲಯ) ಸರಿಯಾಗಿ ಇರುವುದಿಲ್ಲಾ ಆರೋಗ್ಯ ಕೇಂದ್ರದ ಕಾರ್ಯನಿರ್ವಹಣೆಗೆ ಅಡ್ಡಿಂಯಾಗುತ್ತಿದೆ.ಆರೋಗ್ಯ ಕೇಂದ್ರದಲ್ಲಿ ಪ್ರತಿದಿನ ನೂರಾರು ಹೋರರೋಗಿಗಳು ಹಾಗೂ ಹಲವಾರು ಒಳರೋಗಿಗಳು ಚಿಕಿತ್ಸೆ ಪಡೆಯಲು ಬರುತ್ತಾರೆ.ಆದರೆ ಪ್ರಸ್ತುತ ಇರುವ ಸೌಲಭ್ಯಗಳು ಮತ್ತು ಸಿಬ್ಬಂಧಿ ಈ ಅಗತ್ಯಗಳನ್ನು ಪೂರೈಸಲು ಸಮರ್ಪಕವಾಗಿಲ್ಲ.ಆದ್ದರಿಂದ ತಕ್ಷಣ ಕ್ರಮ ಕೈಗೊಂಡು ಖಾಲಿ ಇರುವ ವೈದ್ಯರು ಮತ್ತು ಸಿಬ್ಬಂಧಿ ಹುದ್ದೆಗಳನ್ನು ಭರ್ತಿ ಮಾಡುವುದು. ಅಗತ್ಯ ಔಷಧಿಗಳನ್ನು ಸಮರ್ಪಕ ಪ್ರಮಾಣದಲ್ಲಿ ಪೂರೈಸುವುದು. ಮೂಲಸೌಕರ್ಯಗಳನ್ನು ವಿಸ್ತರಿಸಿ ಬಲಪಡಿಸುವುದು. ಇವುಗಳನ್ನು ಶೀಘ್ರದಲ್ಲಿ ಜಾರಿಗೆ ತರಲು ಮನವಿ ಪತ್ರ ಮೂಲಕ ತಿಳಿಸಲಾಗಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ತಾಲೂಕ ಗೌರವ ಅಧ್ಯಕ್ಷ ಸುಭಾಷ ಮಿರ್ಚೆ, ಸುಭಾಷ ಗಾಯಕವಾಡ ಸಂಗಮೇಶ ಜಿರೋಬೆ, ಸುರೇಶ ಮೈತ್ರೆ, ಬಸವರಾಜ ತಾಂಬೂಳೆ, ಆಕಾಶ ಸ್ವಾಮಿ,ವೀರಶೆಟ್ಟಿ ಮಹಾಜನ್ ಸಂಗಮನಾಥ ಬಿರಾದರ,ಸಾಯಿನಾಥ ರಮೇಶ ಸೇರಿದಂತೆ ಇನ್ನಿತರ ಇದ್ದರು.

# ಗ್ರಾ.ಪಂ ಪ್ರತಿನಿಧಿಗಳ ಮೇಲೆ ಸುಳ್ಳು ಆರೋಪ ಎಸಗುತ್ತಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸಿ: ನರಸಾರಡ್ಡಿ




ಬೀದರ. ಸೆ. 11 : ಗ್ರಾಮ ಪಂಚಾಯತ ಅಧ್ಯಕ್ಷರು,ಉಪಾಧ್ಯಕ್ಷರು ಸೇರಿದಂತೆ ಹಾಲಿ ಸದಸ್ಯರ ಮೇಲೆ ಬ್ರಷ್ಟಾಚಾರ ಎಸಗಲಾಗಿದೆ ಎಂಬ ಸುಳ್ಳು ಆರೋಪ ಮಾಡಿ ಗ್ರಾಮ ಪಂಚಾಯತ ಘನತೆ ಹಾಗೂ ಗೌರವಕ್ಕೆ ಧಕ್ಕೆ ತಂದಿರುವವರ ವಿರೂದ್ಧ ಕಾನೂನು ಕ್ರಮ ಜರುಗಿಸುವಂತೆ ಉಡಬಳ ಗ್ರಾಮ ಪಂಚಾಯತ ಹಾಲಿ ಸದಸ್ಯರು ಹಾಗೂ ಮಾಜಿ ಗ್ರಾ.ಪಂ ಅಧ್ಯಕ್ಷ ನರಸಾರಡ್ಡಿ ಇದ್ದಾರಡ್ಡಿ ಆಗ್ರಹಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕರಿಗೆ ಈ ನಿಟ್ಟಿನಲ್ಲಿ ಮನವಿ ಸಲ್ಲಿಸಲಾಗಿದೆ. ಚಿಟಗುಪ್ಪ ತಾಲೂಕಿನ ಉಡಬಾಳ ಗ್ರಾಮ ಪಂಚಾಯತ್ ಅಧ್ಯಕ್ಷೆ ಅನುಸೂಯಾ ಸಂಬಣ್ಣ ಅವರ ನೇತೃತ್ವದಲ್ಲಿ ಉಪಾಧ್ಯಕ್ಷೆ ಜಗದೇವಿ ಗಂಡ ರವಿ, ಸರ್ವ ಸದಸ್ಯರು ಹಾಗೂ ಪಂಚಾಯತ್ ಸಿಬ್ಬಂದಿ ಸಹಿ ಸಹಿತವಾಗಿ ಜಿಲ್ಲಾಧಿಕಾರಿ ಅವರಿಗೂ ಪತ್ರ ಸಲ್ಲಿಸಲಾಗಿದೆ ಎಂದರು. ಗ್ರಾಮದ ಕೆಲವು ವ್ಯಕ್ತಿಗಳಾದ ಲಕ್ಷ್ಮಣ್ ಕಲಶೆಟ್ಟಿ, ಪಾಂಡುರಂಗ ಭಂಗಿ,ಶ್ರೀನಿವಾಸರಡ್ಡಿ, ಮಸ್ತಾನಸಾಬ್ ಹಾಗೂ ಮನೋಹರ ಸೋನಿ ಅವರು ನನ್ನನ್ನು ಗು-ರಿಯಾಗಿಸಿ ಹಿಂದೆ ನಮ್ಮ ತಾಯಿ ಹಾಗೂ ತಾನು ಅಧ್ಯಕ್ಷರಾಗಿದ್ದ ವೇಳೆ ನಡೆದ ಕಾಮಗಾರಿಗಳ ಬಗ್ಗೆ ಸುಳ್ಳು ಆರೋಪ ಮಾಡುವ ಮೂಲಕ ನನಗೆ ತೇಜೊವಧೆ ಮಡುತ್ತಿರುವರು. ನನ್ನ ಮೇಲಿನ ಸೇಡಿನ ಜೊತೆಗೆ ಹಾಲಿ ಗ್ರಾ.ಪಂ ಅಧ್ಯಕ್ಷರ ಹಾಗೂ ಎಲ್ಲ ಸದಸ್ಯರ ವಿರೂದ್ಧ ಮಿಥ್ಯ ಆಪಾದನೆ ಮಾಡಿದ್ದಾರೆ.ಲಕ್ಷ ??ಣ ಎಂಬುವವರು ಗ್ರಾ.ಪಂ ಚುನಾವಣೆಯಲ್ಲಿ ನನ್ನ ವಿರೂದ್ಧ ಸ್ಪರ್ಧಿಸಿ ಸೋಲು ಕಂಡ ವ್ಯಕ್ತಿ. ಈತ ಗುಂಪು ಕಟ್ಟಿಕೊಂಡು ಕೆಲವು ಸಾಮಾಜಿಕ ಜಾಲತಾಣ ಹೊಂದಿದವರ ಬಳಿ ಸಂದರ್ಶನಗೈದು ಯಾವುದೇ ಹುರುಳಿಲ್ಲದ ಆಪಾದನೆ ಮಾಡಿದ್ದಾರೆ ಎಂದು ಹರಿಹಾಯ್ದರು.

ಲಕ್ಷಮಣ್ಣ ಹಾಗೂ ಅವರ ತಂಡವು ಪಂಚಾಯತ್ ವಿರುದ್ಧ 2021-22ನೇ ಸಾಲಿನ 15ನೇ ಹಣಕಾಸು ಯೋಜನೆಗಳ ಅನುದಾನ ದುರುಪಯೋಗ ಹಾಗೂ ಅಕ್ರಮ ಕೆಲಸಗಳ ಆರೋಪ ಮಾಡಿದ್ದಾರೆ. ಆದರೆ ಪಂಚಾಯತ್ ಸದಸ್ಯರ ಪ್ರಕಾರ ಈ ದೂರುಗಳು ಸುಳ್ಳು ಹಾಗೂ ಆಧಾರ ರಹಿತವಾಗಿವೆ. ಎಲ್ಲ ಕಾಮಗಾರಿಗಳು ಕ್ರಿಯಾ ಯೋಜನೆಯ ಅನುಸಾರ ಜಿ.ಪಂ ಹಾಗೂ ತಾ.ಪಂ ಅನುಮೋದನೆಯೊಂದಿಗೆ ನಡೆದಿವೆ. 2017ರಿಂದ 2023ರ ವರೆಗೆ 15 ಕಿ.ಮೀ.ಕ್ಕೂ ಹೆಚ್ಚು ಮೆಟಲ್ ರಸ್ತೆ, ಸಿಸಿ ಚರಂಡಿ, ಕೃಷಿ ಹೊಂಡ, ಸಮುದಾಯ ಹಾಗೂ ವೈಯಕ್ತಿಕ ಯೋಜನೆಗಳು ಜಾರಿಗೆ ಬಂದಿವೆ. ಶುದ್ಧ ಕುಡಿಯುವ ನೀರಿನ ಘಟಕ, ವಾಟರ್ ಕಾಮಗಾರಿಗಳು ಸೇರಿದಂತೆ ಹಲವು ಕಾಮಗಾರಿಗಳನ್ನು ಸಂಬಂಧಿತ ಇಲಾಖೆ ಹಾಗೂ ಗುತ್ತಿಗೆದಾರರು ನಡೆಸಿದ್ದಾರೆ. ಎಸ್‌ಸಿ, ಎಸ್‌ಟಿ ಮೀಸಲು ಅನುದಾನವನ್ನು ಪ್ರತಿ ವರ್ಷ ಯೋಜನೆಯ ಪ್ರಕಾರವೇ ಬಳಸಲಾಗಿದೆ ಎಂದು ನರಸಾರಡ್ಡಿ ಸ್ಪಷ್ಟಪಡಿಸಿದರು.

ಸರ್ಕಾರದ ಕಾಮಗಾರಿಗಳಿಗೆ ನಿರಂತರ ತಡೆ,ಸಭೆಗಳಿಗೆ ಹಾಜರಾಗದ ಸದಸ್ಯರ ವಿರುದ್ಧ ಸದಸ್ಯತ್ವ ರದ್ದುಪಡಿಸುವ ಪ್ರಸ್ತಾವನೆ, ಸುಳ್ಳು ದೂರುಗಳ ಮೂಲಕ ಅಧಿಕಾರಿಗಳಿಗೆ ತೊಂದರೆ ಉಂಟುಮಾಡುವುದು ಇವರ ನಿತ್ಯದ ಚಾಳಿಯಾಗಿದೆ. ಹಾಗಾಗಿ ಇಮಥವರ ವಿರೂದ್ಧ ಸೂಕ್ತ ಕಾನೂನು ಕ್ರಮ ಜರುಗಿಸಿ ಗ್ರಾ.ಪಂ ಅಭಿವೃದ್ಧಿ ಕಾಮಗಾರಿಗಳಿಗೆ ಉತ್ತೇಜನ ನೀಡಬೇಕೆಂದು ಒತ್ತಾಯಿಸಿದರು.ಈ ಹಿಂದೆ ನಡೆದ ಕಾಮಗಾರಿಗಳನ್ನು ಆಗಿನ ಜಿ.ಪಂ ಉಪ ಕಾರ್ಯದರ್ಶಿ ಸೂರ್ಯಕಾಂತ ಹಾಗೂ ಚಿಟಗುಪ್ಪ ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳು ಖುದ್ದು ಪರಿಶಿಲಿಸಿದ್ದಾರೆಂದು ನರಸಾರಡ್ಡಿ ಇದೇ ವೇಳೆ ತಿಳಿಸಿದರು. ಗ್ರಾಮ ಪಂಚಾಯತ ಅಧ್ಯಕ್ಷೆ ಅನುಸಯಾ ಗಂಡ ಸಂಬಣ್ಣ, ಉಪಾಧ್ಯಕ್ಷೆ ಜಗದೇವಿ ಗಂಡ ರವಿ, ಸದಸ್ಯರಾದ ರಾಜರಡ್ಡಿ ತಂದೆ ಭೀಮರಡ್ಡಿ, ತುಕ್ಕಣ್ಣ ತಂದೆ ನರಸಪ್ಪ, ಮಾಣಿಕ ತಂದೆ ಸಂಬಣ್ಣ, ರವಿಂದ್ರಕುಮಾರ ತಂದೆ ಚಂದ್ರಪ್ಪ, ಜಿಲಾನಿ ತಂದೆ ಮೌಲಾನಸಾಬ್, ಶಿವಲಿಂಗಮ್ಮ ಗಂಡ ವೀರಶೆಟ್ಟಿ, ಲಕ್ಷ್ಮೀಬಾಯಿ ಗಂಡ ಈರಣ್ಣ, ಛಾಯಾ ಗಂಡ ಶ್ರೀರಂಗ ಪತ್ರಿಕಾಗೋಷ್ಟಿಯಲ್ಲಿದ್ದರು.

# ಶುಕ್ಲತೀರ್ಥ ಮಡಿವಾಳೇಶ್ವರ ಮಂದಿರದಲ್ಲಿ ಶ್ರಾವಣ ಸಮಾಪ್ತಿ

ಬೀದರ. ಸೆ. 11 : ಶ್ರೀ ಶುಕ್ಲತೀರ್ಥ ಮಡಿವಾಳೇಶ್ವರ ಸಾಮಾಜಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಟ್ರಸ್ಟ್ ಹಾಗೂ ಸಾಧನಾ ಯೂಥ್ ಫೌಂಡೇಶನ್ ವತಿಯಿಂದ ಬೆನಕನಳ್ಳಿ ರಸ್ತೆಯಲ್ಲಿರುವ ನಾವದಗೇರಿಯ ಶ್ರೀ ಶುಕ್ಲತೀರ್ಥ ಮಂದಿರದಲ್ಲಿ ಶನಿವಾರ ಶ್ರಾವಣ ಸಮಾಪ್ತಿ, ಜನಪದ ಸಂಗೀತ ಉತ್ಸವ, ನಮ್ಮೂರ ನಾವದಗೇರಿ ಜನಪದ ಜಾತ್ರೆ ಹಾಗೂ ಕುಂಭ ಕಳಶ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಶುಕ್ಲತೀರ್ಥ ಮಡಿವಾಳೇಶ್ವರ ಸಾಮಾಜಿಕ ಮತ್ತು ಸಾಂಸ್ಕೃತಿಕ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಓಂಪ್ರಕಾಶ ಬಜಾರೆ ತಿಳಿಸಿದರು.



ನಗರದ ಶ್ರೀ ಶುಕ್ಲತೀರ್ಥ ಮಡಿವಾಳೇಶ್ವರ ಮಂದಿರದ ಆವರಣದಲ್ಲಿ ಭಿತ್ತಿಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಅವರು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪೂಜ್ಯ ಶ್ರೀ ಅವಧೂತಗಿರಿ ಮಹಾರಾಜರು ಬರ್ದಿಪುರ,ತಮಲೂರಿನ ಶಿವಾನಂದ ಸ್ವಾಮಿಗಳು, ನಿರಗುಡಿ ಮಲ್ಲಯ್ಯ ಮುತ್ಯಾ, ಸೊಂತ್‌ನ ಶಂಕರಲಿಂಗ ಮಹಾರಾಜರು,ಡಾ.ಮಂತ್ರಮಹರ್ಷಿ ಸದ್ಗುರುಜಿ ಸೇರಿದಂತೆ ನಾಡಿನ ಹರ ಚರ ಗುರುಮೂರ್ತಿಗಳು ವಹಿಸಲಿದ್ದಾರೆ. ಬೆಳಿಗ್ಗೆ 10 ಗಂ-ಟೆಗೆ ನಾವದಗೇರಿ ಹನುಮಾನ ಮಂದಿರದಿಂದ ಶುಕ್ಲತೀರ್ಥ ಮಂದಿರವರೆಗೆ ಮೆರವಣಿಗೆ ಜರುಗಲಿದ್ದು, ಉದ್ಘಾಟನೆಯನ್ನು ಗಾಂಧಿ ಗಂಜ್ ಬ್ಯಾಂಕ್ ಅಧ್ಯಕ್ಷರಾದ ವಿಜಯಕುಮಾರ ಪಾಟೀಲ ಗಾದಗಿ ನೆರವೇರಿಸಲಿದ್ದಾರೆ. ಹಲವು ಮುಖಂಡರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಡಾ.ರಾಜಕುಮಾರ ಹೆಬ್ಬಾಳೆ ಮಾತನಾಡಿ ಶನಿವಾರ ಮಧ್ಯಾಹ್ನ 1 ಗಂಟೆಗೆ ಜನಪದ ಸಂಗೀತ ಉತ್ಸವ ಉದ್ಘಾಟನೆ ನಡೆಯಲಿದ್ದು, ಉದ್ಘಾಟನೆಯನ್ನು ನಗರಸಭೆ ಅಧ್ಯಕ್ಷ ಮಹ್ಮದ್ ಗೌಸೋದ್ದಿನ್ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಮಾಜಿ ಶಾಸಕ ಅಶೋಕ ಖೇಣಿ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಪ್ರಶಾಂತ ದೊಡ್ಡಿ,ಪ್ರಮುಖರಾದ ಅಶೋಕ ಹೆಬ್ಬಾಳೆ, ಈಶ್ವರಸಿಂಗ್ ಠಾಕೂರ್ ಸೇರಿದಂತೆ ಹಲವರು ಆಗಮಿಸಲಿದ್ದಾರೆ ಎಂದರು.

ಮುಖಂಡರಾದ ಅನೀಲ ರಾಜ-ಗಿರಾ ಮಾತನಾಡಿ ತೆಲಂಗಾಣದ ವಗ್ಗುಡೋಲು ಸೇರಿದಂತೆ ವಿವಿಧ ಜನಪದ ಕಲಾತಂಡಗಳು ಜಾನಪದ ಸಂಗೀತ ಕಾರ್ಯಕ್ರಮ ನಡೆಸಿಕೊಡಲಿದ್ದು, ಪುಂಡಲಿಕರಾವ ಪಾಟೀಲ ಗುಮ್ಮಾ ನೇತೃತ್ವದಲ್ಲಿ ಜನಪದ ಸಂಗೀತ ಭಜನಾ ಕಾರ್ಯಕ್ರಮ ನಡೆಯಲಿದೆ. ಪ್ರತಿಯೊಬ್ಬರೂ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಿದರು.

ಇದೇ ವೇಳೆ ಪ್ರಮುಖರಾದ ರಾಜಕುಮಾರ ಜಮಾದಾರ್, ಸಾಯಿನಾಥ ಮಡಿವಾಳ, ಬಸವರಾಜ ಬಿರಾದಾರ, ಪಪ್ಪುಗಿರಿ, ಅಶೋಕ ಬರಿದಾಬಾದ, ರಾಜಕುಮಾರ ಡೊಂಗರಗಿ,ಮಡಿವಾಳಯ್ಯ ಸ್ವಾಮಿ, ಪ್ರಮೋದ ಸ್ವಾಮಿ, ಸಾಗರ ಗೌರ್, ಜಗದೀಶ ಬಜಾರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅರಣ್ಯ ಸಂಪತ್ತು, ವನ್ಯ ಪ್ರಾಣಿಗಳ ರಕ್ಷಣೆಯಲ್ಲಿ ಅರಣ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿ ಪಾತ್ರ ಬಹಳ ಮಹತ್ವದ್ದು

ಯಾದಗಿರಿ : ಸೆ 11 : ಅರಣ್ಯ ಸಂಪತ್ತು ಮತ್ತು ವನ್ಯ ಪ್ರಾಣಿಗಳ ರಕ್ಷಣೆಯಲ್ಲಿ ಅರಣ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳ ಪಾತ್ರ ಬಹಳ ಮಹತ್ವದ್ದಾಗಿರುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರುಳಸಿದ್ದಾರಾಧ್ಯ ಹೆಚ್.ಜಿ ಅವರು ಹೇಳಿದರು. ಯಾದಗಿರಿ ನಗರದ (ಸ್ಟೇಷನ್ ರೋಡ್) ಪ್ರಾದೇಶಿಕ ಅರಣ್ಯ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ ಆವರಣದಲ್ಲಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಗೌರವ ಅರ್ಪಿಸಿ ಅವರು ಮಾತನಾಡಿದರು. ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ದೇಶದಾದ್ಯಂತ ಆಚರಿಸಲಾಗುತ್ತದೆ, ಇದರ ಇತಿಹಾಸ 1730ರ ಸೆಪ್ಟೆಂಬರ್ 11 ರಂದು ಜೋಧಪುರದ ಮಹಾರಾಜ ಅಭಯಸಿಂಗ್‌ನ ಸೈನಿಕರು ಕೇಜರ್ಲಿ ಪ್ರಾಂತ್ಯದಲ್ಲಿ ಬೆಳೆದಿದ್ದ ಮರಗಳನ್ನು ರಾಜನ ಹೊಸ ಅರಮನೆಗೆ ಅವಶ್ಯವಿದ್ದ ಕೇಜರ್ಲಿ ಮರಗಳನ್ನು ಕಡಿಯಲು ವಿರೋಧಿಸಿದ ಬಿಷ್ಣೋಯ ಸಮುದಾಯದ 663 ಪುರುಷ ಮಹಿಳೆ ಮತ್ತು ಮಕ್ಕಳನ್ನು ಕೊಲ್ಲಲಾಯಿತು,ಮರಗಳ ಸಂರಕ್ಷಣೆಗಾಗಿ ಬಲಿದಾನ ಹೊಂದಿದ ಬಿಷ್ಣೋಯಗಳ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸಲು ಭಾರತ ಸರ್ಕಾರ ಈ ದಿನವನ್ನು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಆಚರಣೆ ಎಂದು ಘೋಷಿಸಿರುತ್ತದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಮಾತನಾಡಿ,ಇಂದಿನ ದಿನಮಾನಗಳಲ್ಲಿ ಅಮೂಲ್ಯ ಅರಣ್ಯ ಸಂಪತ್ತನ್ನು ರಕ್ಷಿಸುವ ಕಾಯಕದಲ್ಲಿ ನಿರತರಾಗಿದ್ದಾಗ ಹುತಾತ್ಮರಾದ ಅರಣ್ಯ ಇಲಾಖೆಯ ಸಿಬ್ಬಂದಿಯ ಬಲಿದಾನವನ್ನು ದೇಶ ಇಂದು ಸ್ಮರಿಸಿಕೊಳ್ಳುತ್ತದೆ. ಭಾರತೀಯ ಅರಣ್ಯ ಸೇವೆಯ ಉಪ ಅರಣ್ಯ ಸಂರಕ್ಷಣಾಧಿಕಾರಿ ದಿವಂಗತ ಶ್ರೀ ಪಿ.ಶ್ರೀನಿವಾಸ ಅವರು ಕಾಡುಗಳ್ಳ ವೀರಪ್ಪನಿಂದ ವಿಧಿವಶರಾದ ದಿನ ನವೆಂಬರ್ 10 ರಂದು ಕರ್ನಾಟಕ ಅರಣ್ಯ ಇಲಾಖೆ ಹುತಾತ್ಮರ ದಿನವೆಂದು 1991-2012ರ ವರೆಗೂ ಆಚರಿಸಲಾಗುತ್ತಿತ್ತು. ಭಾರತ ಸರ್ಕಾರದ ಪರಿಸರ ಮತ್ತು ಅರಣ್ಯ ಸಚಿವಾಲಯದಿಂದ ನಿರ್ದೇಶಿಸಿದ ಮೇರೆಗೆ ಸೆಪ್ಟೆಂಬರ್ 11 ರಂದು ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನವೆಂದು ಘೋಷಿಸಲಾಗಿದೆ ಎಂದು ಹೇಳಿದರು. ಯಾದಗಿರಿ ಪ್ರಾದೇಶಿಕ ಅರಣ್ಯ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಶ್ರೀ ಎ.ಬಿ ಪಾಟೀಲ ಅವರು ಮಾತನಾಡಿದರು, ಗೌರವ ನುಡಿಯಾಗಿ ಅರಣ್ಯ ಇಲಾಖೆಯ ಸಿಬ್ಬಂದಿಗಳು ದೇಶದ ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಗಾಗಿ ಮಾಡಿದ ತ್ಯಾಗ ಮತ್ತು ಬಲಿದಾನಗಳ ಸ್ಮರಣೆಗಾಗಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ದೇಶದಾದ್ಯಂತ ಆಚರಿಸಲಾಗುತ್ತದೆ. ಹಾಗೂ ದೇಶದ ಗಡಿ ಕಾಯುವ ಯೋಧರು ಮತ್ತು ನಾಡಿನ ಶಾಂತಿ ಮತ್ತು ಭದ್ರತೆ ಕಾಪಾಡುವ ಪೊಲೀಸ್‌ರು ಎಷ್ಟು ಮುಖ್ಯವೋ ಜಗತ್ತಿಗೆ ಅಮ್ಲಜನಕ ನೀಡುವ ಹಸಿರು ಯೋಧರಾದ ಅರಣ್ಯ ಪಡೆ ಸಿಬ್ಬಂದಿಯ ಅಷ್ಟೇ ಮುಖ್ಯ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಯಾದಗಿರಿ ಪ್ರಾದೇಶಿಕ ಅರಣ್ಯ ಉಪ ವಿಭಾಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಶ್ರೀ ಸುನೀಲಕುಮಾರ, ಯಾದಗಿರಿ ಪ್ರಾದೇಶಿಕ ಅರಣ್ಯ ವಿಭಾಗ, ಉಪ ವಲಯ ಅರಣ್ಯ ಅಧಿಕಾರಿ ಶ್ರೀ ಭೀಮಾಶಂಕರ, ಸಾಮಾಜಿಕ ಅರಣ್ಯ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಶ್ರೀ ಚೇತನ್ ಎಮ್ ಗಸ್ತಿ ಉಪಸ್ಥಿತರಿದ್ದರು.

# ಮಹಿಳೆ ಮತ್ತು ಪುರುಷ ಒಂದೇ ನಾಣ್ಯದ ಎರಡು ಮುಖಗಳು




ಮಲ್ಲಮ್ಮ ನುಡಿ ವಾರ್ತೆ ಬೀದರ:ಸೆ.11: ನಗರದ ಬಿ.ವಿ.ಭೂಮರಡ್ಡಿ ಪದವಿ ಮಹಾವಿದ್ಯಾಲಯ ಹಾಗೂ ಅಖಿಲ ಭಾರತೀಯ ರಾಷ್ಟ್ರೀಯ ಶೈಕ್ಷಿಕ ಮಹಾಸಂಘ ವತಿಯಿಂದ ವೀರ ಮಹಿಳೆಯರ ಕುರಿತು ಕಾರ್ಯಾಗಾರವನ್ನು ಜ್ಯೋತಿ ಬೆಳಗುವುದರೊಂದಿಗೆ ಸಮಾಜ ಸೇವಕರಾದ ಶ್ರೀಮತಿ ಶೈನಿ ಗುಂಟಿಯವರ ಅಮೃತ ಹಸ್ತದಿಂದ ಉದ್ಘಾಟಿಸಿ ಮಾತನಾಡುತ್ತಾ ಇಂದಿನ ಮಹಿಳೆಯರು ರಾಣಿ ಅಬ್ಬಕ್ಕ, ಕಿತ್ತೂರು ಚೆನ್ನಮ್ಮ, ಕೆಳದಿಯ ಚೆನ್ನಮ್ಮ, ಬೆಳವಡಿ ಮಲ್ಲಮ್ಮ, ಅಹಲ್ಯಾಬಾಯಿ ಹೋಳ್ಕರ ಇವರ ಆದರ್ಶ ಇಟ್ಟು-ಕೊಂಡು ಬದುಕಬೇಕು ಮಹಿಳೆ ಮತ್ತು ಪುರುಷ ಒಂದೇ ನಾಣ್ಯದ ಎರಡು ಮುಖಗಳು ಅದಕ್ಕಾಗಿ ಮಹಿಳೆಯರಿಗೆ ಯಾವುದೇ ತೆ-ಊಂದರೆಯಾದರೆ ಪೋಲಿಸ ಪಡೆಯ ಸಹಕಾರ ಅಂದರೆ 112ಗೆ ಕರೆ ಮಾಡಿದಾಗ ಅಕ್ಕಪಡೆ ಬಂದು ನಿಮಗೆ ಸಹಾಯ ಮಾಡುತ್ತದೆ ಎಂದು ವಿದ್ಯಾರ್ಥಿಗಳಿಗೆ ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮದ ಮುಖ್ಯ ಭಾಷಣಕಾರರಾಗಿ ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ಮಾತನಾಡುತ್ತಾ ರಾಣಿ ಅಬ್ಬಕ್ಕ, ಕಿತ್ತೂರು ಚೆನ್ನಮ್ಮ, ಅಹಲ್ಯಾಬಾಯಿ ಹೋಳ್ಕರ ಈ ಮೂವರು ಮಹನೀಯರು ಯಾವುದೇ ಶ್ರೀಮಂತ ಕುಟುಂಬದಲ್ಲಿ ಜನಿಸಿಲ್ಲ ಅವರ ಜೀವನದಲ್ಲಿ ಪತಿಯನ್ನು ಕಳೆದುಕೊಂಡರು ಸಹ ಪುರುಷರಂತೆ ಬ್ರಿಟಿಷರೊಂದಿಗೆ ಹೋರಾಡಿ ಭಾರತದ ಸ್ವತಂತ್ರ ಸಂಗ್ರಾಮದಲ್ಲಿ ಸಿಂಹ ಸ್ವಪ್ನವಾಗಿ ಹೋರಾಡಿ ಬ್ರಿಟಿಷರನ್ನು ಹೊಡೆದೋಡಿಸಿದ ಕೀರ್ತಿ ನಮ್ಮ ಇಂದಿನ ವಿದ್ಯಾರ್ಥಿನಿಯರು ಅರಿತು ಯಾವುದೇ ಕೆಲಸದಲ್ಲಿ ಧೈರ್ಯದಿಂದ ಮುನ್ನುಗ್ಗಬೇಕೆಂದು ನುಡಿದರು. ಕಾರ್ಯಕ್ರಮ ಮುಖ್ಯ ಅತಿಥಿಯಾಗಿ ಆಗಮಿಸಿದ ಅಖಿಲ ಭಾರತೀಯ ರಾಷ್ಟ್ರೀಯ ಶೈಕ್ಷಿಕ ಮಹಾಸಂಘದ ನಿರ್ದೇಶಕರಾದ ಶ್ರೀ ಶಿವಕಾಂತಪಾಟೀಲ ಮಾತನಾಡುತ್ತಾ ಈ ಮೂವರು ಮಹನೀಯರು ಅಂದರೆ ರಾಣಿ ಅಬ್ಬಕ್ಕ, ಕಿತ್ತೂರು ಚೆನ್ನಮ್ಮ, ಅಹಲ್ಯಾಬಾಯಿ ಹೋಳ್ಕರ ಇವರುಗಳು ದೇಶದ ಸ್ವತಂತ್ರಕ್ಕಾಗಿ ಪುರುಷಕ್ಕಿಂತ ಒಂದು ಹೆಜ್ಜೆ ಮುಂದೆಹೋಗಿ ದೇಶಕ್ಕಾಗಿ ಪ್ರಾಣ ಕೊಡಲು ಸಿದ್ದರಿದ್ದರು. ಇವರುಗಳ ಆದರ್ಶವನ್ನು ಇಟ್ಟು-ಕೊಂಡು ಅಧ್ಯಯನ ಮಾಡಿದಾಗ ಶ್ರೇಷ್ಠ ವ್ಯಕ್ತಿಗಳಾಗಿ ಹೊರಹೊಮ್ಮಲು ಸಾಧ್ಯವೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.ಇನ್ನೋರ್ವ ಮುಖ್ಯ ಅತಿಥಿಗಳಾದ ಜಿ.ಎನ್.ಡಿ.ಇ.ಸಿ. ಪ್ರಾಧ್ಯಾಪಕರಾದ ಡಾ. ಕೆ. ನೀಲಶೆಟ್ಟಿ ಮಾತನಾಡುತ್ತಾ ಇಂದಿನ ವಿದ್ಯಾರ್ಥಿನಿಯರು ಮೋಬೈಲಗಳನ್ನು ಹೆಚ್ಚಾಗಿ ಬಳಸದೇ ಯಾವುದೇ ಕಾರ್ಯಕ್ರಮ ರ್ಯಾಲಿಗಳು ಇದ್ದಾಗ ಭಾಗವಹಿಸಿ ಅಲ್ಲಿನ ಉಪನ್ಯಾಸಗಳನ್ನು ಕೇಳಿ ರಾಣಿ ಅಬ್ಬಕ್ಕ, ಕಿತ್ತೂರು ಚೆನ್ನಮ್ಮ, ಅಹಲ್ಯಾಬಾಯಿ ಹೋಳ್ಕರ ಇವರುಗಳ ಜೀವನ ಚರಿತ್ರೆ ಆಳವಾಗಿ ಅಧ್ಯಯನ ಮಾಡಿದಾಗ ಅವರುಗಳ ಧೈರ್ಯ ಮತ್ತು ಛಲ ಬರುತ್ತದೆಂದು ನುಡಿದರು. ಈ ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯ, ಬೀದರ ಕುಲಸಚಿವರು(ಆಡಳಿತ) ಆದರಣೀಯ ಸುರೇಖಾ ಅವರು ಉಪಸ್ಥಿತಿರಿದ್ದರು ಹಾಗೂ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ ಅವರು ಹಾಜರಿದ್ದರು. ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಒಬ್ಬ ಮಹಿಳೆ ಶಿಕ್ಷಣ ಪಡೆದರೆ ಇಡೀ ಕುಟುಂಬ ಶಿಕ್ಷಣ ಪಡೆದಂತೆ, 'ಯತ್ರ ನಾರ್ಯಸ್ತು ಪೂಜ್ಯಂತೆ ತತ್ರ ದೇವತಾ:' ಅಂದರೆ ಎಲ್ಲಿ ನಾರಿಯರ ಪೂಜೆ ನಡೆ-ಯುತ್ತದೆಯೋ ಅಲ್ಲಿ ದೇವತೆಗಳು ವಾಸಮಾಡುತ್ತಾರೆ. ಮನೆಯೇ ಮೊದಲ ಪಾಠಶಾಲೆ ತಾಯಿಯೇ ಮೊದಲ ಗುರು, 'ನಾರಿ ದೇಶ ಕೀ ಶಾನ' ಇಂದಿನ ಮಾನ್ಯ ಪ್ರಧಾನ ಮಂತ್ರಿಗಳ 'ಬೇಟಿ ಬಜಾವೊ, ಬೇಟಿ ಪಢಾವೊ' ಅಭಿಯಾನ ಸೂಕ್ತವಾಗಿದೆ. ರಾಣಿ ಅಬ್ಬಕ್ಕ, ಕಿತ್ತೂರು ಚೆನ್ನಮ್ಮ, ಅಹಲ್ಯಾಬಾಯಿ ಹೋಳ್ಕರ ಇವರುಗಳ ಆದರ್ಶವನ್ನು ಇಟ್ಟುಕೊಂಡು ತಾವು ಸಹ ಜೀವನದಲ್ಲಿ ಬಂದ ಹಲವಾರು ಸಮಸ್ಯೆಗಳನ್ನು ಇವರಂತೆ ಧೈರ್ಯದಿಂದ ಎದುರಿಸಿ ತಾವು ಸಹ ಜೀವನದಲ್ಲಿ ಯಶಸ್ವಿಯಾಗಿ ತಮ್ಮ ಪಾಲಕರ ಹಾಗೂ ಗುರುಗಳ ಹೆಸರನ್ನು ಗಗನದೆತ್ತರಕ್ಕೆ ಕೊಂಡೋಯ್ಯಬೇಕೆಂದು ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮ ಮೊದಲಿಗೆ ಬಿ.ಎಸ್ಸಿ. ಪ್ರಥಮ ಸೆಮಿಸ್ಟರಿನ ಕು. ಶ್ರೇಯಾ ಮಠಪತಿ ಪ್ರಾರ್ಥನೆ ಗೀತೆ ಹಾಡಿದರೆ, ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಮಲ್ಲಿಕಾರ್ಜುನ ಕೋಟೆ ಸ್ವಾಗತಿಸದರೆ, ಇತಿಹಾಸ ವಿಭಾಗದ ಶ್ರೀ ಬಸವರಾಜ ಬಿರಾದಾರ ನಿರೂಪಸಿದರೆ, ಶ್ರೀಮತಿ ವಾಣಿಶ್ರೀ ವಂದಿಸಿದರ. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಪ್ರಾಧ್ಯಾಪಕರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ತಾಲ್ಲೂಕು ಆರೋಗ್ಯ ಅಧಿಕಾರಿ ವರ್ಗಾವಣೆಗೆ ಆಗ್ರಹ

ಬೀದರ. ಸೆ. 11 : ಹಲವು ವರ್ಷಗಳಿಂದ ಔರಾದ್ ತಾಲ್ಲೂಕಿನಲ್ಲೇ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಆರೋಗ್ಯ ಅಧಿಕಾರಿಯನ್ನು ಕೂಡಲೇ ಬೇರೆಡೆ ವರ್ಗಾವಣೆ ಮಾಡಬೇಕು ಎಂದು ರಾಷ್ಟ್ರೀಯ ಅಹಿಂದ ಸಂಘಟನೆಯ ಯುವ ಘಟಕ ಆಗ್ರಹಿಸಿದೆ.



ಯುವ ಘಟಕದ ಪದಾಧಿಕಾರಿಗಳು ಬೆಂಗಳೂರಿನಲ್ಲಿ ಗುರುವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಗೆ ಬರೆದ ಮನವಿ ಪತ್ರವನ್ನು ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ ಅವರಿಗೆ ಸಲ್ಲಿಸಿದರು.

ತಾಲ್ಲೂಕು ಆರೋಗ್ಯ ಅಧಿಕಾರಿ, ತಾಲ್ಲೂಕು ಮುಖ್ಯ ವೈದ್ಯಾಧಿಕಾರಿ, ಚಿಂತಾಕಿ, ವಡಗಾಂವ್ ಪಿಎಚ್‌ಸಿ ಆಡಳಿತ ಅಧಿಕಾರಿ ಹುದ್ದೆಗಳನ್ನು ಒಬ್ಬರೇ ನಿರ್ವಹಿಸುತ್ತಿದ್ದಾರೆ ಎಂದು ದೂರಿದರು.

ತಾಲ್ಲೂಕು ಆರೋಗ್ಯ ಅಧಿಕಾರಿ ಪಟ್ಟಣದಲ್ಲಿ ಖಾಸಗಿ ಆಸ್ಪತ್ರೆ ನಡೆಸುತ್ತಿದ್ದಾರೆ. ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಗಳಿಗೆ ತಮ್ಮ ಆಸ್ಪತ್ರೆಗೆ ಹೋಗಲು ತಿಳಿಸುತ್ತಿದ್ದಾರೆ ಎಂದು ಆಪಾದಿಸಿದರು.

ಔರಾದ್ ಸಾರ್ವಜನಿಕ ಆಸ್ಪತ್ರೆಯಲ್ಲಿ ನರ್ಸ್‌ಗಳು ಒಂದು ಹೆರಿಗೆಗೆ ತಲಾ ರೂ. 4 ಸಾವಿರ ಪಡೆಯುತ್ತಿದ್ದಾರೆ. ತಾಲ್ಲೂಕು ಆರೋಗ್ಯಾಧಿಕಾರಿ ಗಮನಕ್ಕೆ ಇದ್ದರೂ ಅವರು ನಿರ್ಲಕ್ಷಿಸುತ್ತಿದ್ದಾರೆ ಎಂದು ಆಪಾದಿಸಿದರು.

ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ರಕ್ತ ಪರೀಕ್ಷೆಗೆ ಹಣ ಪಡೆಯಲಾಗುತ್ತಿದೆ. ಶವ ಪರೀಕ್ಷೆ ಕೋಣೆಯಲ್ಲಿ ವಿದ್ಯುತ್ ಸಂಪರ್ಕ, ಸ್ವಚ್ಛತೆ ಇಲ್ಲ ಎಂದು ಆರೋಪಿಸಿದರು.

ಯುವ ಘಟಕದ ರಾಜ್ಯ ಅಧ್ಯಕ್ಷ ಲಕ್ಷ್ಮಣ ಎಸ್. ದೇವಕತೆ, ತಾಲ್ಲೂಕು ಅಧ್ಯಕ್ಷ ಸಚಿನ್ ಮೇತ್ರೆ, ಮುಖಂಡರಾದ ಜಾನಸನ್ ಘೋಡೆ, ರತ್ನದೀಪ್ ಕಸ್ತೂರೆ,ಬಬಲು,ಎಂ.ಡಿ. ಇರ್ಷಾದ್ ಮತ್ತಿತರರು ಇದ್ದರು.

# ಪ್ರಕಾಶನ ಕ್ಷೇತ್ರದ ಭೀಷ್ಮ ಡಾ.ಬಸವರಾಜ ಕೊನೇಕಗೆ ಸನ್ಮಾನ



ಕಲಬುರಗಿ:ಸೆ.11:ಹೊಸ ದಿಲ್ಲಿಯ ದ ಫೆಡರೇಶನ್ ಆಫ್ ಪಬ್ಲಿಷರ್ಸ್ ಆಯಿಂಡ್ ಬುಕ್ಸ್ ಸೆಲ್ಲರ್ಸ್ ಅಸೋಸಿಯೇಷನ್ ಇನ್ ಇಂಡಿಯಾದಿಂದ 50 ವರ್ಷಕ್ಕಿಂತ ಮೇಲ್ಪಟ್ಟ ಪುಸ್ತಕ ಉದ್ಯಮದಲ್ಲಿ ಕೆಲಸ ನಿರ್ವಹಿಸುತ್ತಿರುವರನ್ನು ಗುರುತಿಸಿ ನೀಡುವ ರಾಷ್ಟಮಟ್ಟದ ಗೋಲ್ಡನ್ ಅವಾರ್ಡ್‌ಗೆ ಶ್ರೀ ಸಿದ್ದಲಿಂಗೇಶ್ವರ ಬುಕ್ ಡಿಪೋ ಮತ್ತು ಪ್ರಕಾಶನ ಸಂಸ್ಥೆಯ ಪ್ರಕಾಶಕ ಡಾ. ಬಸವರಾಜ ಕೊನೇಕ್ ಅವರನ್ನು ಆಯ್ಕೆ ಆಗಿದ್ದು ಅವರ ಶ್ರಮ,ಪ್ರತಿಭೆ,ಸಹಾಸಗಾಥ 'ಯನ್ನು ಕಂಡು

ಪರಿಗಣಿಸಿದ್ದು ನಮ್ಮೆಲ್ಲರಿಗೂ ಸಂತಸ ತಂದಿದೆ ಪ್ರಕಾಶನ ಕ್ಷೇತ್ರದ ಭೀಷ್ಮ ಎಂದು ಸಿರಿಗನ್ನಡ ವೇದಿಕೆ ಮತ್ತು ಸಾಕ್ಷಿ ಪ್ರತಿಷ್ಠಾನ ಅಧ್ಯಕ್ಷ ಡಾ.ಗವಿಸಿದ್ಧಪ್ಪ ಪಾಟೀಲ,ಹೇಳಿದರು.

ಕೇಂದ್ರ ಸಾಹಿತ್ಯ ಅಕಾಡೆಮಿ ಕನ್ನಡ ಸಲಹಾ ಸಮಿತಿ ಸದಸ್ಯರಾದ ಡಾ.ಜಯದೇವಿ ಗಾಯಕವಾಡ ಅವರು ಕಳೆದ ಐದು ದಶಕಗಳಿಗೂ ಹೆಚ್ಚು ಕಾಲ ಪ್ರಕಾಶಕರಾಗಿ ಈ ಭಾಗದ ಲೇಖಕರನ್ನು ಉಪನ್ಯಾಸಕರ ಪ್ರತಿಭೆ ಗುರುತಿಸಿ ಬರೆಯಲು ಹಚ್ಚಿ,ವಿದ್ಯಾರ್ಥಿಗಳಿಗೆ

ಉಪಯುಕ್ತ ಕಾರ್ಯ ಮಾಡಿದ್ದಾರೆಂದರು. ಡಾ.ರಾಜಕುಮಾರ

ಮಾಳಗೆ ನಮ್ಮಂತ ಯುವ ಲೇಖಕರ ಬರವಣಿಗೆಗೆ ಪ್ರೋತ್ಸಹ ದಾಯಕರೆಂದರು. ಆದಿ ಬಣಜಿಗ ಸಂಘದ ಅಧ್ಯಕ್ಷ ಅಡ್ವೋಕೇಟ ಬರೂಡೆ,

ಹಿರಿಯರಾದ ಶಾಂತಪ್ಪ ಪಾಟೀಲ,ಸಾಕ್ಷಿ ಇತರರು ಸನ್ಮಾನಿಸಿದರು.

# ಪ್ರತಿಯೊಬ್ಬರು ಸಂಗೀತ, ಸಾಹಿತ್ಯ ಕಲೆ ಸಂಸ್ಕೃತಿ ಉಳಿಸಿ ಹಾಗೂ ಕಲಾವಿದರನ್ನು ಬೆಳೆಸಬೇಕು:ಚಂದ್ರಿಕಾ ಪರಮೇಶ್ವರ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸೆ. 11: ಸಂಗೀತ, ಸಾಹಿತ್ಯ ಕಲೆ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕಾದರೆ ಕಲಾವಿದರ ಸಹಕಾರ ಅಗತ್ಯವೆಂದು ಅವರು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಹೇಳಿದರು.ಗುರುವಾರದಂದು ಸರಕಾರಿ ಮಹಾವಿದ್ಯಾಲಯದಲ್ಲಿ ಹಾಡಿರೇ ರಾಗಗಳ ತೂಗಿರೇ ದೀಪಗಳ ಎಂಬ ಕಾರ್ಯಕ್ರಮವನ್ನು ಡಾ.ಬಿ.ಆರ್ ಅಂಬೇಡ್ಕರ್ ಪುತ್ಥಳಿಗೆ ಪುಷ್ಪಾರ್ಚನೆಯನ್ನು ಮಾಡಿ ಜ್ಯೋತಿಯನ್ನು ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು.

ಕಲಾವಿದರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಿಗುವ ಪ್ರತಿಯೊಂದು ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ಕುರಿತು ಪತ್ರಿಕಾಗೋಷ್ಠಿ ಮತ್ತು ಸಾಮಾಜಿಕ ಮಾಧ್ಯಮಗಳ ಮುಖಾಂತರ ಕಲಾವಿದರಿಗೆ ಮಾಹಿತಿಯನ್ನು ನೀಡಬೇಕು ಎಂದು ತಿಳಿಸಿದರು. ತಾವು ಕೂಡ ವೈದ್ಯರಾಗಬೇಕು ಎಂಬ ತಂದೆಯವರ ಆಶೆಯಿತ್ತು. ಆದರೆ ತಂದೆಯವರಂತೆ ನಾನು ಸಾಮಾಜಿಕ ಸೇವೆಯನ್ನು ಮಾಡಬೇಕು ಎಂಬ ಉದ್ದೇಶದಿಂದ ರಾಜಕೀಯ ಕ್ಷೇತ್ರಕ್ಕೆ ಬಂದೆ. ಎ.ಐ.ಸಿ.ಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ನನಗೆ ರಾಜಕೀಯ ಕ್ಷೇತ್ರದಲ್ಲಿ ನೀಡಿದ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದ್ದೇನೆ ಎಂದು ಹೇಳಿದರು.

ಕಲಬುರಗಿ ಸರಕಾರಿ ಮಹಾವಿದ್ಯಾಲಯ (ಸ್ವಾಯತ್ ) ಪ್ರಾಂಶುಪಾಲರಾದ ಡಾ. ಸವಿತಾ ತಿವಾರಿ ಅವರು ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ "ಹಾಡಿರೇ ರಾಗಗಳ ತೂಗಿರೇ ದೀಪಗಳ ಎಂಬ ಕಾರ್ಯಕ್ರಮದ ಮೂಲಕ ರಾಗಗಳು ಹಾಡಿದಾಗ ದೀಪಗಳು ತೂಗುವಂತೆ ವಿದ್ಯಾರ್ಥಿಗಳು ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ವಿದ್ಯಾರ್ಜನೆಯನ್ನು ಮುಖ್ಯಗುರಿಯಾಗಿಸಿಕೊಂಡು ಪಠ್ಯದ ಜೊತೆಗೆ ಸಾಂಸ್ಕೃತಿ ಚಟುವಟಿಕೆಗಳು, ಮತ್ತು ಕ್ರೀಡೆಗಳಲ್ಲಿ,ಭಾಗವಹಿಸಿ ಮಾನಸಿಕವಾಗಿ ಮತ್ತು ದೈಹಿಕವಾಗಿ ಸಧೃಡರಾಗಬೇಕು ಎಂದು ಹೇಳಿದರು.

ಕನ್ನಡ ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದಿಶ್ವರಿ ನಾಸಿಯವರು ಕಾರ್ಯಕ್ರಮದ ಪ್ರಸ್ತಾವಿಕ ಮಾತುಗಳನ್ನಾಡಿದರು.

ಹಾಡಿರೇ ರಾಗಗಳ ತೂಗಿರೇ ದೀಪಗಳ ಕಾರ್ಯಕ್ರಮದಲ್ಲಿ ಭಾಗವಹಿಸಿದ ಕಲಾತಂಡಗಳ ವಿವರ ಇಂತಿದೆ. ಸುಗಮ ಸಂಗೀತಿ ಡಾ. ನಾಗರಾಜ್ ಎಂ.ಪುರಮಕರ, ಗೀಗಿ ಪದಗಳು ದೇವೇಂದ್ರಪ್ಪ ಚಿಂಚನಸೂರ, ರಂಗಗೀತೆಗಳು ಡಾ. ಸಂದೀಪ ಬಿ. ಬಾವಗೀತೆ ಲಕ್ಷ್ಮಣ ಹೇರೂರ, ಜಾನಪದ ಗೀತೆ ಸೂರ್ಯಕಾಂತ ಬಿದನೂರ, ಸಂಪ್ರದಾಯ ಹಾಡುಗಳು ಗೌರಮ್ಮ ಮಾನೆ, ಪಾರಿಜಾತ ಅಂಬಾರಾಯ ಬಿಲಗುಂದಿ 07 ಕಲಾತಂಡಗಳು ಭಾಗವಹಿಸಿದ್ದವು.

ಸರಕಾರಿ ಮಾಹಾವಿದ್ಯಾಲಯ (ಸ್ವಾಯತ್)ಸಾಂಸ್ಕೃತಿಕಸಂಚಾಲಕರಾದ ಡಾ.ಬಲಭೀಮ ಸಾಂಗ್ಲಿಯವರು ಕಾರ್ಯಕ್ರಮದ ನಿರೂಪಣೆಯನ್ನ ಮಾಡಿದರು.ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಪಕರಾದ ಡಾ.ಬಸಂತ್ ಸಾಗರ್ ಅವರು ವಂದಿಸಿದ್ದರು.

ಕಾರ್ಯಕ್ರಮದಲ್ಲಿ ಕಲಬುರಗಿ ಸರಕಾರಿಮಹಾವಿದ್ಯಾಲಯದ(ಸ್ವಾಯತ್) ಅಭಿವೃದ್ಧಿ ಸಮಿತಿಯ ಸದಸ್ಯರಾದ ವಿಜಕುಮಾರ ಕಟ್ಟಿಮನಿ,ಕಲಬುರಗಿ ಸರಕಾರಿ ಮಹಾವಿದ್ಯಾಲಯದ ವಿಜ್ಞಾನ ವಿಭಾಗದ ಡೀನರಾದ ಡಾ.ದೌಲಪ್ಪ ಬಿ.ಎಸ್ ಕಲಬುರಗಿ ಸರಕಾರಿ ಮಹಾವಿದ್ಯಾಲಯದ ಸಿಬ್ಬಂದಿ ಕಾರ್ಯದರ್ಶಿಯಾದ ಡಾ.ರವಿ ಭಂಡಾರಿಕರ್ ಮತ್ತು ಕಾಲೇಜಿನ ಎಲ್ಲಾ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಕಾಲೇಜಿನ ಸಿಬ್ಬಂಧಿಗಳು ಉಪಸ್ಥಿತರಿದ್ದರು.

# ಸೈಯದ್ ಚಿಂಚೋಳಿಯಲ್ಲಿ ದರ್ಗಾ ಸಾತೋ ಶಹೀದ್ ಉರುಸ್ ಯಶಸ್ವಿ



ಮಲ್ಲಮ್ಮನುಡಿವಾರ್ತೆಕಲಬುರಗಿ:ಸೆ.11: ನಗರದ ಹೊರ ವಲಯದ ಸೈಯದ್ ಚಿಂಚೋಳಿಯಲ್ಲಿರುವ ದರ್ಗಾ ಹಜರತ್ ಸಾತೋ ಶಹೀದ್ ಅವರ ಮೂರು ದಿನಗಳ ಉರುಸ್ ಸೆ. 08/09/2025 ರಿಂದ 10/09/25 ಬುಧವಾರ ಸಮಾರೋಪಗೊಂಡಿತು. ದರ್ಗಾದ ವಂಶಪರಂಪರೆ ಮೂತವಲ್ಲಿ ಹಾಗೂ ಸಜ್ಜದಾ ನಶೀನ್ ಆಶ್ವಾಕ್ ಅಹ್ಮದ್ ಸಿದ್ದೀಖಿ ಅವರ ನೇತೃತ್ವದಲ್ಲಿ ಸಂದಲ್ (ಗಂಧ), ಚಿರಗಾನ್ (ದೀಪ) ಮತ್ತು ಜಿಯಾರತ್,ಮುಸ್ಲಿಂ ಧಾರ್ಮಿಕ ಕಾರ್ಯಕ್ರಮಗಳನ್ನು ನೇರವೇರಿದವು.ದರ್ಗಾದ ಸಜ್ಜದಾ ನಶೀನ್ ಆಶ್ವಾಕ್ ಅಹ್ಮದ್ ಸಿದ್ದೀಖಿ ಅವರು ಅತಿಥಿಗಳಾದ ಚಿತ್ತಾಪುರ ತಾಲ್ಲೂಕಿನ ದರ್ಗಾ ಹಜರತ್ ಚಿತಾಶಾವಲಿಯ ಸಜ್ಜದಾ ನಶೀನ್ ಸೈಯದ್ ಮಿನ್ಹಾಜುದ್ದೀನ್ ಸಾಹೇಬ್, ದರ್ಗಾ ಬೆಣ್ಣೂರ್ ಸೈಯದ್ ಮಕಬುಲ್ ಆಲಿ ಸಾಹೇಬ್, ದರ್ಗಾ ಸಣ್ಣೂರ್ ಮೂತವಲಿ ಸಜ್ಜದಾ ನಶೀನ್ ಅಬ್ದುಲ್ ಸತ್ತಾರ್ ಸಾಹೇಬ್, ದಂಡೋತಿಯ ನಜಿರ್ ದರ್ಗಾ ಸಾಹೇಬ್, ಯಾದಗಿ-ರಿಯ ಸಿರಾಜೋದ್ದಿನ್ ತಿರಅ-ದಾಂಜ್ ಸಾಹೇಬ್ ಬಡಿ ಮಜಿದ್, ಕಲಬುರಗಿಯ ಸೈಯದ್ ಅಬ್ದುಲ್ ರಶಿದ್ ದರ್ಬಾನ್, ಮಹಮ್ಮದ್ ಶಫಿಸಾಹೇಬ್

ಅವರಿಗೆ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧಿಕಾರಿ, ಕೆಇಬಿ ಅಧಿಕಾರಿ, ಪೋಲಿಸ್ ಸಿಬ್ಬಂದಿಗಳಿಗೆ ದರ್ಗಾದ ವಶಪರಂಪರೆ ಮೂತವಲ್ಲಿ ಸಜ್ಜದಾ ನಶೀನ್ ಆಶ್ವಾಕ್ ಅಹ್ಮದ್

ಅವರು ಸನ್ಮಾನಿಸಿದರು.ಗ್ರಾಮಸ್ಥರು ಮತ್ತು ಸಮಸ್ತ ಭಕ್ತರು ದರ್ಗಾ ಹಜರತ್ ಸಾತೋ ಶಹೀದ್ ಅವರ ಮೂರು ದಿನಗಳ ಉರುಸ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರೋತ್ಸಾಹಿಸಿದರು.

# ಅ. 10 ರೊಳಗೆ ರೈತರೊಂದಿಗೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳುವಂತೆ ಕಾರ್ಖಾನೆಗಳಿಗೆ ಡಿ ಸಿ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.11:ಪ್ರಸಕ್ತ 2025-26ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಬೆಳೆಯಲಾದ ಕಬ್ಬು ನವೆಂಬರ್ 1 ರಿಂದ ಕಟಾವು ಪ್ರಕ್ರಿಯೆ ನಡೆಸಲಾಗುತ್ತಿದ್ದು, ರೈತ-ರಿಂದ ಕಬ್ಬು ಖರೀದಿ ಮುನ್ನ ಪ್ರತಿ ಟನ್‌ಗೆ ನೀಡಲಾಗುವ ದರ, ಸಾಗಾಣಿಕೆ ವೆಚ್ಚ ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಅಕ್ಟೋಬರ್ 10 ರೊಳಗೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳುವಂತೆ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಗೆ ಡಿ.ಸಿ.ಬಿ.ಫೌಜಿಯಾ ತರನ್ನುಮ್ ಸೂಚನೆ ನೀಡಿದರು.

ಗುರುವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಅವರು, ಕಬ್ಬು ಬೆಳೆಗಾರರು ಮತ್ತು ರೈತ ಸಂಘದ ಮುಖಂಡರುಗಳ ಅಹವಾಲು ಆಲಿಸಿ ಮಾತನಾಡಿದ ಅವರು, ಎಲ್ಲಾ ರೈತರಿಂದ ಸಾಧ್ಯವಾಗದಿದ್ದರು ಕನಿಷ್ಠ ಪಕ್ಷ ಆಸಕ್ತ ರೈತರಿಂದ ದ್ವಿಪಕ್ಷೀಯ ಒಪ್ಪಂದ ಮಾಡಿಕೊಂಡೆ ರೈತರಿಂದ ಕಬ್ಬು ಖರೀದಿ ಮಾಡಬೇಕೆಂದು ಡಿ.ಸಿ. ಸೂಚನೆ ನೀಡಿದರು.

ದ್ವಿಪಕ್ಷಿಯ ಒಪ್ಪಂದದ ಜೊತೆಗೆ ಸಾಧ್ಯವಾದರೆ ಕಬ್ಬು ತಂತ್ರಾಂಶ ಆಪ್ ಸಹ ಅಳವಡಿಸಿಕೊಳ್ಳಬೇಕು. ಸಕ್ಕರೆ ಕಾರ್ಖಾನೆಗಳು ಕಬ್ಬು ಪಡೆದ ನಂತರ ರೈತರಿಗೆ 15 ದಿನದಲ್ಲೆ ಹಣ ಪಾವತಿಸಬೇಕು. ಯಾವುದೇ ಕಾರಣಕ್ಕು ವಿಳಂಬ ಸಹಿಸುವುದಿಲ್ಲ. ವಿಳಂಬವಾದಲ್ಲಿ ನಿಯಮದಂತೆ ಶೇ.15ರಷ್ಟು ಬಡ್ಡಿ ರೈತರಿಗೆ ಕಾರ್ಖಾನೆ ಪಾವತಿಸಬೇಕಾಗುತ್ತದೆ ಎಂದ ಅವರು ಎಲ್ಲಾ ಕಾರ್ಖಾನೆಗಳು ಕಬ್ಬು ಕಟಾವು ಮತ್ತು ಸಾರಿಗೆ ವೆಚ್ಚವನ್ನು ಒಂದೇ ದರ ನಿಗದಿಪಡಿಸಬೇಕು ಎಂದರು.

ಕಬ್ಬು ಕಾರ್ಖಾನೆಗೆ ತಂದು ಕೂಡಲೆ ಡಿಜಿಟಲ್ ತೂಕದ ಯಂತ್ರದ ಮೂಲಕ ತೂಕ ಮಾಡಿದ ನಂತರವೇ ಕಾರ್ಖಾನೆಯೊಳಗೆ ತೆಗೆದುಕೊಳ್ಳಬೇಕು. ಯಾವುದೇ ಕಾರಣಕ್ಕು ತೂಕದಲ್ಲಿ ರೈತರಿಗೆ ಮೋಸ ಮಾಡಬಾರದು. ಕಬ್ಬು ಕಟಾವಿಗೆ ಮುನ್ನ ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡಿಬೇಕು. ಸಂಪೂರ್ಣ ಬಲಿತ ಕಬ್ಬು ಮಾತ್ರ ಕಟಾವು ಮಾಡಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಗಳು, ಯಾವುದೇ ಕಾರಣಕ್ಕೂ ಮಧ್ಯವರ್ತಿಗಳಿಗೆ ಕಂಪನಿಗಳು ಮಣೆ ಹಾಕಬಾರದೆಂದು ಕಾರ್ಖಾನೆ ಅಧಿಕಾರಿಗಳಿಗೆ ಡಿ.ಸಿ. ಖಡಕ್ ಸೂಚನೆ ನೀಡಿದರು.

ಕಬ್ಬು ತೂಕದಲ್ಲಿ ಕಾರ್ಖಾನೆಯಿಂದ ಮೋಸವಾಗುತ್ತಿದೆ ಎಂಬ ರೈತ ಮುಖಂಡರ ಅಭಿಪ್ರಾಯದ ಹಿನ್ನೆಲೆಯಲ್ಲಿ ಡಿ.ಸಿ. ಮಾತನಾಡಿ, ಕಾನೂನು ಮಾಪನಶಾಸ್ತ್ರ ಇಲಾಖೆಯ ಅಧಿಕಾರಿಗಳು ಆಗಾಗ ಸಕ್ಕರೆ ಕಾರ್ಖಾನೆಗಳಿಗೆ ಹಠಾತ್ ಭೇಟಿ ನೀಡಿ ತಪಾಸಣೆ ಮಾಡಬೇಕು. ಆಹಾರ ಇಲಾಖೆ ಅಧಿಕಾರಿಗಳು ಇಳುವರಿ ಕುರಿತು ಕಾರ್ಖಾನೆವಾರು ನಿಯಮಿತವಾಗಿ ತಪಾಸಣೆ ನಡೆಸಬೇಕು. ಜೆಸ್ಕಾಂನವರು



ವಿದ್ಯುತ್ ಅವಘಡದಿಂದ ಬೆಳೆ ಹಾನಿಯಾಗದಂತೆ ನಿಯಂತ್ರಣ ಕ್ರಮ ವಹಿಸಬೇಕು. ಇನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಕಾರ್ಖಾನೆ ಸುತ್ತ 5 ಕಿ.ಮೀ ಪ್ರದೇಶದಲ್ಲಿ ವಾಯು, ಶಬ್ದ, ನೀರು ಮಾಲಿನ್ಯ ಆಗದಂತೆ ಕಾರ್ಖಾನೆಗಳಿಗೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಲು ಸೂಚಿಸಿಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮೂಲಸೌಕರ್ಯ ಕಲ್ಪಿಸಿ: ಕಬ್ಬು ಮಾರಾಟಕ್ಕೆ ಕೆಲವೊಮ್ಮೆ ರೈತ ತನ್ನ ಮಡದಿ, ಮಕ್ಕಳೊಂದಿಗೆ ಕಬ್ಬು ಕಟಾವು ಮಾಡಿಕೊಂಡು ಕಾರ್ಖಾನೆಗೆ ತೆಗೆದುಕೊಂಡು ಬಂದಾಗ ಅಲ್ಲಿಯೆ 4-5 ಗಂಟೆ, ಕೆಲವೊಮ್ಮೆ ರಾತ್ರಿಯು ಕಳೆಯಬೇಕಾಗುತ್ತದೆ. ಕಾರ್ಖಾನೆಯಲ್ಲಿ ರಾತ್ರಿ ಕಳೆಯಲು ಸೂಕ್ತ ಶೆಡ್, ಕಾರ್ಖಾನೆ ಸಮೀಪ ಲಘು ಉಪಹಾರಕ್ಕಾಗಿ ಕ್ಯಾಂಟಿನ್ ತೆರೆಯಬೇಕು,ಶೌಚಾಲಯ,ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಕಾರ್ಖಾನೆಯ ಜವಾಬ್ದಾರಿಯಾಗಿದೆ ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ತಿಳಿಸಿದರು.

ರೈತರ ಬೇಡಿಕೆಗಳೇನು?: ಕೇಂದ್ರ ಸರ್ಕಾರ ರೂಪಿಸಿರುವ ಎಫ್.ಆರ್.ಪಿ. ದರ ಅವೈಜ್ಞಾನಿಕವಾಗಿದ್ದು, ಇದನ್ನು ಪುನರ್ ಪರಿಶೀಲಿಸಬೇಕು.

ರಾಜ್ಯ ಸರ್ಕಾರ ಹೆಚ್ಚುವರಿಯಾಗಿ ಪ್ರತಿ ಮೆಟ್ರಿಕ್ ಟನ್‌ಗೆ 500 ರೂ. ಪರಿಹಾರ ಘೋಷಿಸಬೇಕು. ಕಾರ್ಖಾನೆಯು 15 ದಿನಗಳಲ್ಲಿ ಕಬ್ಬಿನ ಹಣ ಪಾವತಿ ಮಾಡದಿದ್ದಲ್ಲಿ ಬಡ್ಡಿ ಮೊತ್ತ ನೇರವಾಗಿ ರೈತರ ಖಾತೆಗೆ ಜಮೆಯಾಗುವಂತೆ ಕಾಯ್ದೆಗೆ ತಿದ್ದುಪಡಿ ತರಬೇಕು, ಬಾಕಿ ಹಣ ಕೂಡಲೆ ಪಾವತಿಸಬೇಕು, ಕಬ್ಬು ಕಟಾವಿನಲ್ಲಿ ತಾರತಮ್ಯ ಮಾಡಬಾರದು ಮತ್ತು ನಿಗದಿಯಂತೆ ಸರಿಯಾದ ಸಮಯಕ್ಕೆ ಕಟಾವು ಮಾಡಬೇಕು, ತೂಕದಲ್ಲಿ ಮೋಸ ತಪ್ಪಿಸಲು ಕಾರ್ಖಾನೆ ಗೇಟ್ ಬಳಿ ತೂಕ ಮಾಡಿಯೇ ಕಬ್ಬು ತೆಗೆದುಕೊಳ್ಳಬೇಕು, ಹಣ ಪಾವತಿ ಮತ್ತು ಬಾಕಿ ಕುರಿತು ಎಸ್.ಎಂ.ಎಸ್ ಕಳುಹಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಡಿ.ಸಿ. ಮತ್ತು ಕಾರ್ಖಾನೆ ಪ್ರತಿನಿಧಿಗಳ ಮುಂದೆ ರೈತ ಮುಖಂಡರು ಬೇಡಿಕೆ ಇಟ್ಟರು.

ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಭೀಮರಾವ, ಮಾತನಾಡಿ ಪ್ರಸಕ್ತ 2025-26ನೇ ಸಾಲಿಗೆ ರೈತರಿಂದ ಕಬ್ಬು ಪಡೆಯುವ

ಕಲಬುರಗಿ ಜಿಲ್ಲೆಯ ಕೆ.ಪಿ.ಆರ್ ಶುಗರ್ಸ್ & ಅಪ್ಪಾರೆಲ್ಸ್ ಲಿ. ಕಾರ್ಖಾನೆಯು ಪ್ರತಿ ಮೆ.ಟನ್ ಕಬ್ಬಿಗೆ 3,512 ರೂ., ಎನ್.ಎಸ್.ಎಲ್. ಶುಗರ್ಸ್ ಕಾರ್ಖಾನೆಯು 3,515 ರೂ.,ಶ್ರೀ ರೇಣುಕಾ ಶುಗರ್ಸ್ ಲಿ. ಕಾರ್ಖಾನೆಯು 3,325 ರೂ., ದಿ.ಉಗಾರ್ ಶುಗರ್ ವರ್ಕ್ಸ್ ಲಿ. ಕಾರ್ಖಾನೆಯು 3,291 ರೂ., ಸಿದ್ದಸಿರಿ ಸೌಹಾರ್ದ ಸಹಕಾರಿ ನಿ. ಕಾರ್ಖಾನೆಯು 3,519 ರೂ. ಹಾಗೂ ಯಾದಗಿರಿ

ಜಿಲ್ಲೆಯ ಕೋರ್ ಗ್ರೀನ್ ಶುಗರ್ & ಫ್ಯುಯೆಲ್ಸ್ ಪ್ರೈ.ಲಿ. ಕಾರ್ಖಾನೆಯು 3,436 ರೂ. ರೈತರಿಗೆ ಪಾವತಿಸುವಂತೆ ಸರ್ಕಾರ ಎಫ್.ಆರ್.ಪಿ. ದರ ನಿಗದಿ ಮಾಡಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್,

ಉಪಕೃಷಿನಿರ್ದೇಶಕ ಸೋಮಶೇಖರ ಬಿರಾದರ, ಅಫಜಲಪೂರ ತಹಶೀಲ್ದಾರ ಸಂಜೀವಕುಮಾರ ದಾಸರ್, ಯಡ್ರಾಮಿ

ತಹಶೀಲ್ದಾರ ಯಲ್ಲಪ್ಪ ಸುಬೇದಾರ ಸೇರಿದಂತೆ 6 ಸಕ್ಕರೆ ಕಾರ್ಖಾನೆಯ ಪ್ರತಿನಿಧಿಗಳು, ಅನೇಕ ರೈತ ಮುಖಂಡರು, ವಿವಿಧ ರೈತ ಸಂಘಟನೆಗಳ

ಪದಾಧಿಕಾರಿಗಳು ಚರ್ಚೆಯಲ್ಲಿ ಭಾಗವಹಿಸಿದ್ದರು.



ಕಲಬುರಗಿ:ನಗರದಲ್ಲಿ ಅಘೋಷಿತ ಸ್ಲಂಗಳಾದ ರಾಮ ನಗರ ಭಾಗ-2, ಸಂಜು ನಗರ ಭಾಗ-2 ಮತ್ತು ಯಾದಗಿರಿ ಅಘೋಷಿತ ಸ್ಲಂಗಳಾದ ಮೌನೇಶ್ವರ ನಗರ, ಮದನಪೂರ ಭಾಗ-2, ತಪ್ಪಡಗೇರಾ, ಗಂಗಾನಗರ ಸ್ಲಂಗಳನ್ನು ಸ್ಲಂ ಎಂದು ಘೋಷಣೆ ಮಾಡದೆ ವಿಳಂಬ ನೀತಿ ಅನುಸರಿಸುತ್ತಿರುವ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರುಗಳಾದ ಶ್ರೀಧರ ಸಾರವಾಡ ಮತ್ತು ದೇವಿಂದ್ರ ಇವರನ್ನು ಅಮಾನತ್ತುಗೊಳಿಸಿ ಶೀಘ್ರದಲ್ಲೇ ಸ್ಲಂ ಘೋಷಣೆ ಮಾಡುವಂತೆ ದಂತೆ ಸ್ಲಂ ಜನಾಂದೋಲನ ಕರ್ನಾಟಕ ಜಿಲ್ಲಾ ಘಟಕ ವತಿಯಿಂದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಎದುರು ಎರಡನೇಯ ದಿನಕ್ಕೆ ಕಾಲಿಟ್ಟ ಧರಣಿ ಸತ್ಯಾಗ್ರಹ ನಡೆಸಿದರು. ಗೌರಮ್ಮ ಮಾಕಾ, ರೇಣುಕಾ ಸರಡಗಿ, ಶರಣು ಕಣ್ಣಿ, ಹಣಮಂತ ಶಹಾಪೂರಕರ್ ಸೇರಿದಂತೆ ಇತರರು ಇದ್ದರು.

# ಬಿಜೆಪಿ ಹಿಂದುಳಿದವರಿಗೆ, ದಲಿತರಿಗೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದೆ : ಹಾಲಕಾಯಿ



ಕಲಬುರಗಿ:ಸೆ.11: ಸಚಿವ ಪ್ರಿಯಾಂಕ್ ಖರ್ಗೆಯವರ ಹೇಳಿಕೆಗಳನ್ನು ಗಮನಿಸಿದಾಗ, ನಿಜಕ್ಕೂ ಬಹಳ ಹಾಸ್ಯಾಸ್ಪದ ಅಂತ ಅನಿಸುತ್ತದೆ. ಮದ್ದೂರು ಚಲೋ, ಧರ್ಮಸ್ಥಳ ಚಲೋ-ವಿಚಾರದಲ್ಲೆಲ್ಲ ಹಿಂದುಳಿದವರನ್ನು, ದಲಿತರನ್ನು ಪ್ರೇರೇಪಿಸಿ ಬಿಜೆಪಿ ಹೋರಾಟ ಮಾಡುತ್ತಿದೆ ಎನ್ನುವ ಹೇಳಿಕೆ ನೀಡಿದ್ದಾರೆ. ಎಂದು ಎಂದು ಭಾರತೀಯ ಜನತಾ ಪಕ್ಷ ಕರ್ನಾಟಕ ರಾಜ್ಯ ವಕ್ತಾರರಾದ ಡಾ. ಸುಧಾ ಆರ್. ಹಾಲಕಾಯಿ ಹೇಳಿದರು.

ಆದರೆ ನಿಮಗೆ ತಿಳಿದಿರಲಿ. ಬಿಜೆಪಿ ಹಿಂದುಳಿದವರಿಗೆ, ದಲಿತರಿಗೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದೆ. ಸಾಮಾಜಿಕ ಮುಖ್ಯಪ್ರವಾಹದಲ್ಲಿ ಅವರನ್ನು ಸೇರಿಸಿಕೊಂಡು ಮುನ್ನಡೆಯುವ ಕೆಲಸ ಮಾಡುತ್ತಿದೆ. ಆದರೆ ದಲಿತರ ಹೆಸರಲ್ಲಿ ಬಲಿತವರಾಗಿರುವ ಮಲ್ಲಿಕಾರ್ಜುನ ಖರ್ಗೆ ಕುಟುಂಬವು ದಲಿತರಿಗೆ ಸಿಗಬೇಕಾದ ಸವಲತ್ತುಗಳನ್ನು-ಕೈಗಾರಿಕೆ ಸ್ಥಾಪನೆ ಮಾಡಲು ಒದಗಿಸಲಾಗುವ ನಿವೇಶನಗಳನ್ನು ತಮ್ಮ ಕುಟುಂಬದ ಹೆಸರಿಗೆ ಮಾಡಿಕೊಂಡಿರುವುದು ಇವರ ಸಾಧನೆ.

ದಲಿತರಿಗೆ ನಿಜವಾಗಿ ಅನ್ಯಾಯ ಮಾಡುತ್ತಿರುವವರು ಈ ಬಲಿತ ದಲಿತ ಸಮಾಜದವರು. ಹಿರಿಯರಾದ ಮಲ್ಲಿಕಾರ್ಜುನ ಖರ್ಗೆಯವರು ಹೇಳುತ್ತಾರೆ-ಗುಜರಾತಿಗಳು ಇಡೀ ಭಾರತವನ್ನು ಹಾಳು ಮಾಡುತ್ತಿದ್ದಾರೆ ಎಂದು. ದಲಿತ ನಾಯಕರಾಗಿ ಹಿರಿಯರಾದ ಖರ್ಗೆಯವರು ತಮ್ಮ ಮನಸ್ಸಿನೊಳಗೆ ಯಾವ ಹಂತದ ಅಸ್ಪೃಶ್ಯತೆಯನ್ನು ಆಚರಣೆ ಮಾಡುತ್ತಿದ್ದಾರೆ ಎಂಬುದನ್ನು ಈ ಮೂಲಕ ಬಹಿರಂಗಪಡಿಸಿದ್ದಾರೆ.

ಹಿರಿಯರಾದವರು ಈ ರೀತಿ ಜಾತಿ, ಭಾಷೆ, ರಾಜ್ಯದ ಹೆಸರಿನಲ್ಲಿ ತಾರತಮ್ಯ ಭಾವದ ರಾಜಕೀಯ ಮಾಡುತ್ತಾರೆ ಎಂದರೆ, ಅದು ನಿಜಕ್ಕೂ ಅವರ ವ್ಯಕ್ತಿತ್ವಕ್ಕೆ ಶೋಭೆ ತರುವುದಿಲ್ಲ.

ಮೊನ್ನೆಯಂತೂ ಅವರು ಒಬ್ಬ ರೈತನ ಜತೆ ಮಾತನಾಡಿರುವ ಮಾತು ವಿಷಾದನೀಯ. ಇಷ್ಟು ಸುದೀರ್ಘ ರಾಜಕೀಯ ಜೀವನ ಮಾಡಿರುವಂತಹ ಖರ್ಗೆಯವರ ಬಾಯಿಯಲ್ಲಿ ಈ ಮಟ್ಟದ ಕೀಳು ಮಾತುಗಳು. ರೈತರ ಪರ, ದಲಿತರ ಪರ ನಿಲ್ಲುತ್ತಾರೆ ಎಂಬ ಭಾವನೆಯಿಂದ ಪದೇ ಪದೇ ಜನತೆ ಅವರನ್ನು ಆಯ್ಕೆ ಮಾಡುತ್ತಿದ್ದರು. ಆದರೆ ಖರ್ಗೆ ಕುಟುಂಬದ ರಾಜಕಾರಣವೆಲ್ಲ ನಕಲಿ ಎನ್ನುವುದು ಈಗ ಜನತೆಗೆ ಅರಿವಾಗುತ್ತಿದೆ.

ರೈತರ ಬಗ್ಗೆ, ದಲಿತರ ಬಗ್ಗೆ, ಕಲ್ಯಾಣ ಕರ್ನಾಟಕದ ಬಗ್ಗೆ ಅವರು ಏನೆಲ್ಲ ಹೇಳಿಕೊಂಡು ಬಂದಿದ್ದರೋ ಅವೆಲ್ಲ ಕೇವಲ ಪ್ರಚಾರದ ತಂತ್ರವಲ್ಲದೆ ಬೇರೇನೂ ಅಲ್ಲ ಎಂಬುದು ಸಾಬೀತಾಗಿದೆ. ಇವರು ಸಾರ್ವಜನಿಕರಿಗೆ ಮಂಕುಬೂದಿ ಎರಚುವುದು ಬಿಟ್ಟರೆ ಬೇರೇನೂ ಇಲ್ಲ. ಜನರ ಭಾವನೆಗಳನ್ನು ಅರ್ಥ ಮಾಡಿಕೊಳ್ಳದೆ, ಒಂದು ಕುಟುಂಬದ ಗುಲಾಮಗಿರಿ ಮಾಡುತ್ತ, ಗುಲಾಮತನದ ಪರಮಾವಧಿಯನ್ನು ಮಾಡುತ್ತ, ಬೇರೆ ಎಲ್ಲವನ್ನೂ ದೂಷಿಸುತ್ತ ಭಂಡ ಬಾಳು ನಡೆಸುವುದೇ ಇವರ ಬಂಡವಾಳ.

ದೇಶದ ವಿಭಜನೆಯನ್ನು ಮಾಡಿದ್ದೇ ಕಾಂಗ್ರೆಸ್. ಆದರೆ ಗುಜರಾತಿಗಳಿಂದ ದೇಶದ ವಿಭಜನೆ ಆಗಿದೆ ಎನ್ನುವ ಅಪಹಾಸ್ಯದ ಮಾತನ್ನು ಆಡುತ್ತಿರುವುದು ಅಕ್ಷಮ್ಯ ಅಪರಾಧ. ಬಿಜೆಪಿ ಇದನ್ನು ತೀವ್ರವಾಗಿ ಖಂಡಿಸುತ್ತದೆ.

ರಾಷ್ಟ್ರೀಯ ಪಕ್ಷದ ಅಧ್ಯಕ್ಷರಾಗಿ, ಹಿರಿಯರಾಗಿ ಕಲ್ಯಾಣ ಕರ್ನಾಟಕದ ವಿಕಾಸದ ಹೆಸರಿನಲ್ಲಿ ರಾಜಕಾರಣ ಮಾಡುವವರಾಗಿ ತಾವು ಮತ್ತು ತಮ್ಮ ಮಗ ಮತ್ತಷ್ಟು ಕ್ರಿಯಾಶೀಲರಾದರೆ ಈ ಭಾಗಕ್ಕೆ ಉತ್ತಮ ಎಂದು ಈ ಮೂಲಕ ಹೇಳಬಯಸುತ್ತೇವೆ.

ಇವೆಲ್ಲದರ ಮಧ್ಯೆ ಕೂಡ ಕಲ್ಯಾಣ ಕರ್ನಾಟಕದಲ್ಲಿ ಕಳೆದ 27 ತಿಂಗಳುಗಳಲ್ಲಿ 1272 ಮಹಿಳೆಯರ ಮೇಲೆ ಅತ್ಯಾಚಾರ ಪ್ರಕರಣಗಳು, ಸುಮಾರು 5 ಸಾವಿರ ಮಹಿಳೆಯರ ನಾಪತ್ತೆ ಪ್ರಕರಣಗಳು ನಡೆದಿವೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯಗಳು ನಡೆಯುತ್ತಿದ್ದರೂ ಮಹಿಳಾ ಆಯೋಗ ತನ್ನ ಕರ್ತವ್ಯವನ್ನು ನಿರ್ವಹಿಸದೆ, ಉಸ್ತುವಾರಿ ಮಂತ್ರಿಗಳು ತಮ್ಮ ಕರ್ತವ್ಯ ನಿಭಾಯಿಸದೆ, ಧಮ್ಮಳ ವಿಚಾರದಲ್ಲಿ ಬಹಳ ಆಸಕ್ತಿ ತೋರಿಸುವ ಮಹಿಳಾ ಆಯೋಗಕ್ಕೆ, ಸ್ವತಃ ಕಲಬುರಗಿಯನ್ನು ಪ್ರತಿನಿಧಿಸುತ್ತಿರುವ ಮಹಿಳಾ ಆಯೋಗದ ಅಧ್ಯಕ್ಷೆ, ಹಾಗೂ ಉಸ್ತುವಾರಿ ಮಂತ್ರಿಗಳು ಯಾವುದೇ ದಿಟ್ಟ ಕ್ರಮವನ್ನು ತೆಗೆದುಕೊಳ್ಳದೆ ಕಾನೂನು ಸುವ್ಯವಸ್ಥೆ ಕುಸಿದು ಹೋಗಿದೆ. ಇದು ಇವರ ಆಡಳಿತಕ್ಕೆ ಒಂದು ಕೈಗನ್ನಡಿ ಎಂಬುದನ್ನು ನಾವು ಅರ್ಥ ಮಾಡಿಕೊಳ್ಳಬೇಕಾಗಿದೆ. ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ: ಯು.ನಿಸಾರ್ ಅಹಮದ್



ರಾಯಚೂರು ಸೆ11:ಅಲ್ಪಸಂಖ್ಯಾತರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಹೇಳಿದರು.ಸೆಪ್ಟೆಂಬರ್ 11ರಂದು ಗುರುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ಅಲ್ಪಸಂಖ್ಯಾತರ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧರು, ಸಿಖ್ ಮತ್ತು ಪಾರ್ಸಿ ಸಮುದಾಯದ ಮುಖಂಡರೊಂದಿಗೆ ಸಮಾಲೋಚನೆ ಮತ್ತು ಕುಂದುಕೊರತೆ ಅರ್ಜಿ ಸ್ವೀಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಜ್ಯದಲ್ಲಿನ ಅಲ್ಪಸಂಖ್ಯಾತರ ಮುಸ್ಲಿ ಸಮುದಾಯವರ ಬಹಳಷ್ಟು ಮಕ್ಕಳು ಶಾಲೆಯಿಂದ ಹೊರಗಿದ್ದಾರೆ. ಈ ಬಗ್ಗೆ ಮುಸ್ಲಿಂ ಸಮುದಾಯದ ಮುಖಂಡರು ಯೋಚಿಸಿ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ವಿದ್ಯಾವಂತರನ್ನಾಗಿ ಮಾಡಲು ಶ್ರಮಿಸಬೇಕು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಅನೇಕ ಶಾಲಾ ಕಾಲೇಜು ಪ್ರಾರಂಭಿಲಾಗಿದ್ದು, ಅವುಗಳ ಸದುಪಯೋಗವಾಗಬೇಕು ಎಂದರು.

ರಾಜ್ಯದಲ್ಲಿ ಶೇ.44 ರಷ್ಟು ಅಲ್ಪಸಂಖ್ಯಾತರ ಮಕ್ಕಳು ಅಕ್ಷರದ ಜ್ಞಾನವಿಲ್ಲದವರು ಇದ್ದಾರೆ. ದೇಶದಲ್ಲಿ ಅಲ್ಪಸಂಖ್ಯಾತರಲ್ಲಿ ಜೈನ್, ಕ್ರಿಶ್ಚಿಯನ್ ಮತ್ತು ಕಡಿಮೆ ಜನಸಂಖ್ಯೆ ಇರುವ ಪಾರ್ಸಿ ಸಮುದಾಯದವರು ಹೆಚ್ಚು ಸುಶಿಕ್ಷಿತರಾಗಿದ್ದಾರೆ. ಮುಸ್ಲಿಂ ಸಮುದಾಯದ ಶೇ.50 ರಷ್ಟು ಮಕ್ಕಳು ಶಾಲೆಗೆ ಹೋಗುತ್ತಿಲ್ಲ. ಶಾಲೆ ಬಿಟ್ಟ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿದೆ. ಶೇ.10 ರಷ್ಟು ಮಾತ್ರ ಎಸ್‌ಎಸ್‌ಎಲ್‌ಸಿ ಓದುತ್ತಿದ್ದಾರೆ. ಶೇಕಡಾ 2.7 ಮಾತ್ರ ಪದವೀಧರರಿದ್ದಾರೆ. ಐಎಎಸ್, ಐಪಿಎಸ್ ಮಾಡುವವರ ಸಂ-ಖ್ಯೆಯಂತೂ ತೀರಾ ಕಮ್ಮಿ ಇದೆ.

ಮುಸ್ಲಿಮರು ತಮ್ಮ ತಮ್ಮ ಬಡಾವಣೆಗಳಲ್ಲಿ ಶಿಕ್ಷಣದಿಂದ ವಂಚಿತರಾದವರನ್ನು ಸಮೀಕ್ಷೆ ನಡೆಸಿ ಅವರಿಗೆ ಶಿಕ್ಷಣ ಕೊಡಲು ಮುಂದಾಗಬೇಕು ಎಂದು ಸಲಹೆ ಮಾಡಿದರು. ಪ್ರತಿಯೊಂದು ಮಗುವೂ ಕಡ್ಡಾಯ ಶಿಕ್ಷಣ ಪಡೆಯಬೇಕು ಶಿಕ್ಷಣಕ್ಕಾಗಿ ಸರ್ಕಾರಗಳು ಕೋಟ್ಯಾಂತರ ರೂ. ಅನುದಾನ ನೀಡುತ್ತವೆ. ಇದು ಸದ್ಬಳಕೆ ಆಗಬೇಕು. ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗಬಾರದು. ಬಡ ಮಕ್ಕಳಿದ್ದರೆ ಅವರಿಗೆ ಸರ್ಕಾರಿ ಶಾಲೆಗೆ ಸೇರಿಸಬೇಕು. ಈಗ

ಅಂಗನವಾಡಿಯಿಂದ ಉನ್ನತ ಶಿಕ್ಷಣದವರೆಗೆ ಉಚಿತ ಶಿಕ್ಷಣ ಸಿಗುತ್ತಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಶೈಕ್ಷಣಿಕ ಸೌಲಭ್ಯಗಳನ್ನು ಅಲ್ಪಸಂಖ್ಯಾತರು ಹೆಚ್ಚು ಬಳಸಿಕೊಳ್ಳುತ್ತಿಲ್ಲ ಎನ್ನುವುದು ಕಳವಳಕಾರಿ ಸಂಗತಿ ಎಂದರು.

# ರಾಯಚೂರು ಸಿಟಿ, ಗ್ರಾಮೀಣ ಪ್ರದೇಶದಲ್ಲಿ ಹಠಾತ್ ದಾಳಿ: ಕೆಲ ಆಸ್ಪತ್ರೆಗಳಿಗೆ ಬೀಗ




ರಾಯಚೂರು ಸೆ11:ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಜಿಲ್ಲಾಡಳಿತ ರಾಯಚೂರು ಮತ್ತು ಆರೋಗ್ಯ ಇಲಾಖೆಯಿಂದ ಸೆ.10ರಂದು ನಡೆದ ಜಂಟಿ ಕಾರ್ಯಾಚರಣೆಯಲ್ಲಿ ಕೆಲ ಆಸ್ಪತ್ರೆಗಳನ್ನು ಸೀಜ್ ಮಾಡಲಾಗಿದೆ.

ರಾಯಚೂರ ನಗರ ಮತ್ತು ರಾಯಚೂರು ಗ್ರಾಮಾಂತರದಲ್ಲಿ ಕೆಪಿಎಂಇ ನೋಂದಣಿ ಇಲ್ಲದಿರುವ ಹಾಗೂ ನಕಲಿ ವೈದ್ಯರ ವಿರುದ್ಧ ದಾಳಿ ಮಾಡಲಾಯಿತು.

ಸಹಾಯಕ ಆಯುಕ್ತರ ನೇತೃತ್ವದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಆಯುಷ್ ಅಧಿಕಾರಿಗಳು ಮತ್ತು ಭಾರತೀಯ ವೈದ್ಯಕೀಯ ಸಂಘದ

ಸದಸ್ಯಕಾರ್ಯದರ್ಶಿ ಅವರನ್ನೊಳಗೊಂಡ ಒಂದು ತಂಡವು ರಾಯಚೂರು ನಗರದ ಅಗವಾರಲ್ ಪಾಲಿಕ್ಲಿನಿಕ್ ರಾಯಚೂರು, ಸನ್ನಿಧಿ ಕ್ಲಿನಿಕ್ ರಾಯಚೂರು, ಮಾಣಿಕರಾವ್ ಕ್ಲಿನಿಕ್ ರಾಯಚೂರು, ಅಲ್ ಸಲಾಮ್ ಕ್ಲಿನಿಕ್, ಸೇವಾ ಕ್ಲಿನಿಕ್ ರಾಯಚೂರು ಮತ್ತು ಅಜಮ್ ಕ್ಲೀನಿಕ್ ಗೆ ಭೇಟಿ ನೀಡಿ ಕಾಯ್ದೆಯಡಿಯಲ್ಲಿ ಸೀಜ್ ಮಾಡಿದರು. ಮತ್ತು ಈ ಕ್ಲಿನಿಕ್ ಗಳಿಗೆ ನಿಯಮದಡಿ ದಂಡವಿಧಿಸುವ ಎಚ್ಚರಿಕೆ ನೀಡಿದರು.

ನ್ಯೂ ಲೈಫ್ ಲೈನ್ ಆಸ್ಪತ್ರೆ ರಾಯಚೂರು, ನಬಿ.ಕುಮಾರ್ ರಾಯಚೂರು, ಫಾರ್ಚುನ್ ಆಸ್ಪತ್ರೆ ರಾಯಚೂರು, ಗಾರಲದಿನ್ನಿ ಕ್ಲಿನಿಕ್ ರಾಯಚೂರು, ಜನತಾ ಆಸ್ಪತ್ರೆ ರಾಯಚೂರು ಈ ಆಸ್ಪತ್ರೆಗಳಿಗೆ ಭೇಟಿ ನೀಡಿ ಕೆಪಿಎಂಇ ಕಾಯ್ದೆ ಅಡಿಯಲ್ಲಿ ನೋಂದಣಿ ಆಗಿರುವ ಬಗ್ಗೆ ಪರಿಶೀಲಿಸಿದರು.

ಕೆಪಿಎಂಇ ಕಾಯ್ದೆಯ ನಿಯಮಗಳನ್ನು ಪಾಲಿಸಲು ತಂಡದ ಸದಸ್ಯರು ಸೂಚನೆ ನೀಡಿದರು.

ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿಗಳು, ತಾಲೂಕು ಆರೋಗ್ಯ ಅಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳ ಕಾರ್ಯಾಲಯದ ರಿಜಿಸ್ಟರ್ ಅವರನ್ನೊಳಗೊಂಡ ಎರಡನೇ ತಂಡವು ಯರಗೇರಾದ ಗಫೂರು ಕ್ಲಿನಿಕ್ ಗೆ ಭೇಟಿ ಮಾಡಿ ಸಿಜ್ ಮಾಡಿತು. ಬಳಿಕ ರಾಯಚೂರಿನ ಮೆಡಿಕೇರ್ ಕ್ಲಿನಿಕ್, ಪೂಜಾರಿ ಕ್ಲಿನಿಕ್, ವಕ್ಫ ಆಸ್ಪತ್ರೆಗೆ ಭೇಟಿ ನೀಡಿ ಕೆಪಿಎಂಇ ಕಾಯ್ದೆಯಡಿ ನೋದಣಿ ಮಾಡಿದ ಬಗ್ಗೆ ಪರಿಶೀಲಿಸಿದರು.

ಕೆಪಿಎಂಇ ಕಾಯ್ದೆಯ ನಿಯಮಗಳನ್ನು ಪಾಲಿಸಲು ತಂಡದ ಸದಸ್ಯರು ಸೂಚನೆ ನೀಡಿದರು.

ಕೆಪಿಎಂಇ ಕಾಯ್ದೆಯಡಿ ಯಾರು ನೊಂದಣಿ ಮಾಡಿಲ್ಲವೋ

ಅಂತಹವರ ವಿರುದ್ಧ ಕೆಪಿಎಂಇ ಕಾಯ್ದೆ ಅಡಿಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. ಮತ್ತು ಯಾವುದೇ ವೈದ್ಯಕೀಯ ಅರ್ಹತೆ ಇಲ್ಲದೇ ಆಸ್ಪತ್ರೆ ನಡೆಸಿದಲ್ಲಿ ಅಂತಹ ನಕಲಿ ವೈದ್ಯರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

# ರೈತರು ಮೆಣಸಿನಕಾಯಿ ಬೆಳೆಯಲ್ಲಿ ರೋಗ, ಕೀಟಬಾಧೆ ಕಂಡುಬಂದಲ್ಲಿ ಸೂಕ್ತ ನಿರ್ವಹಣೆ ಕ್ರಮ ಅನುಸರಿಸಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.11–ಜಿಲ್ಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಅಧಿಕ ಮಳೆಯಾಗುತ್ತಿದ್ದು, ಮೋಡ ಕವಿದ ವಾತವರಣ ಹಾಗೂ ತಾಪಮಾನ ಏರುಪೇರಿನಿಂದ ಮೆಣಸಿನಕಾಯಿ ಬೆಳೆಯಲ್ಲಿ ರೋಗ ಮತ್ತು ಕೀಟಬಾಧೆಯಿಂದ ಇಳುವರಿ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದ್ದು,ಹಾಗಾಗಿ ರೈತರು ಸೂಕ್ತ ನಿರ್ವಹಣೆಯ ಕ್ರಮ ಅನುಸರಿಸಬೇಕು ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಾಡ್ರ ಶಂಕರಪ್ಪ ಅವರು ತಿಳಿಸಿದ್ದಾರೆ.

ಪ್ರಸಕ್ತವರ್ಷ ಬಳ್ಳಾರಿ,ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕುಗಳಲ್ಲಿ 17,800 ಹೆಕ್ಟೇರ್ ಗಿಂತ ಹೆಚ್ಚು ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯಲಾಗಿದೆ.ಕಳೆದವರ್ಷಗಳಲ್ಲಿ ಮೆಣಸಿನಕಾಯಿ ಬೆಳೆಯನ್ನು ಬಾಧಿಸಿದ್ದ ಹೊಸ ಥ್ರಿಪ್ಸ್ ನುಸಿ (ಥ್ರಿಪ್ಸ್ ಪಾರ್ವಿಸ್ಪಿನಸ್) ಕೀಟ, ಎಲೆ ಮುಟುರು ರೋಗ, ಬೂದಿ ರೋಗ, ಹಣ್ಣು ಕೊಳೆ ರೋಗದ ನಿರ್ವಹಣೆಗೆ ರೈತರು ಸೂಕ್ತ ಕ್ರಮಗಳನ್ನು ಅನುಸರಿಸಬೇಕಿದೆ ಎಂದಿದ್ದಾರೆ.

*ಥ್ರಿಪ್ಸ್ ನುಸಿ:*

ಪ್ರೌಢ ಕೀಟಗಳು ಗುಂಪು ಗುಂಪಾಗಿ ಎಲೆಗಳ ಕೆಳಭಾಗ, ಹೂಗಳ ಒಳಗೆ ಮತ್ತು ಹೊರಗೆ ಕಂಡುಬರುತ್ತವೆ. ಮರಿ ಹಂತದ ನುಸಿಗಳು ಎಲೆಗಳ ಕೆಳಭಾಗದಲ್ಲಿ ಕೇಂದ್ರೀಕೃತವಾಗಿರುತ್ತವೆ. ಕೀಟಗಳು ಸಸ್ಯದ ಬಹುಭಾಗಗಳಿಂದ ರಸವನ್ನು ಹೀರುವುದರಿಂದ ಸಸ್ಯದ ಬೆಳವಣಿಗೆ ಕುಂಠಿತಗೊಳ್ಳುತ್ತದೆ.

ಎಲೆಗಳ ಅಂಚು ಮೇಲ್ಮುಖವಾಗಿ ಮುದುಡುವುದು, ಹೂಗಳು ಉದುರುವುದು ಮತ್ತು ಬೆಳವಣಿಗೆ ಹಂತದಲ್ಲಿರುವ ಚಿಗುರುಗಳು ಗುಂಪಾಗಿ ಹೂಬಿಡದೆ ಒಣಗುವುದು ಸಾಮಾನ್ಯವಾಗಿ ಕಂಡುಬರುವ ಹಾನಿಯ ಲಕ್ಷಣಗಳಾಗಿವೆ. ಕಾಲ ಕ್ರಮೇಣ, ಕಾಯಿಗಳ ಸಂಖ್ಯೆ ಕಡಿಮೆಯಾಗಿ ಇಳುವರಿಯು ಗಣನೀಯ ಪ್ರಮಾಣದಲ್ಲಿ ಕುಂಠಿತಗೊಳ್ಳುತ್ತದೆ.

*ನಿರ್ವಹಣಾ ಕ್ರಮಗಳು:*

ಹೊಲದ ಸುತ್ತಲೂ 2–3 ಸಾಲು ಜೋಳ, ಮೆಕ್ಕೆಜೋಳ, ಸಜ್ಜೆಯನ್ನು ಬೇಲಿ ಬೆಳೆಯಾಗಿ ದಟ್ಟವಾಗಿ ಬಿತ್ತುವುದರಿಂದ ಕೀಟಗಳ ಪ್ರಸಾರವನ್ನು ನಿಯಂತ್ರಿಸಬಹುದು. ಹೊಲ ಮತ್ತು ಬದುಗಳ ಸ್ವಚ್ಛತೆಯಿಂದ ಥ್ರೀಪ್ಸ್ ನುಸಿಗಳಿಗೆ ಆಸರೆ ನೀಡುವ ಕಳೆಗಳ ನಿರ್ಮೂಲನೆ ಮಾಡಬಹುದು. ಸೂಕ್ತ ಅಂತರ (90*30 ಸೆಂ.ಮಿ., 60*45 ಸೆಂ.ಮಿ.) ಕಾಪಾಡಬೇಕು. ಚೆನ್ನಾಗಿ ಕೊಳೆತ ಕೊಟ್ಟಿಗೆ ಗೊಬ್ಬರದೊಡನೆ ಮೆಟಾರೈಜಿಯಮ್ ಅನಿಸೋಪ್ಲಿಯೆ ಎಂಬ ಶಿಲೀಂಧ್ರ ಕೀಟನಾಶಕದಿಂದ (2–3 ಕೆ.ಜಿ/ಟನ್) ಮೌಲ್ಯವರ್ಧನೆಗೊಳಿಸಿ ಹೊಲಗಳಿಗೆ ಹಾಕಬೇಕು.

ಬೇವಿನಹಿಂಡಿ(200ಕೆ.ಜಿ/ಎಕರೆಗೆ) ಮತ್ತು ಎರೆಹುಳು ಗೊಬ್ಬರವನ್ನು (500 ಕೆ.ಜಿ/ಎಕರೆಗೆ) ಮಣ್ಣಿನಲ್ಲಿ ಬೆರೆಸುವುದರಿಂದ ನಿರೋಧಕ ಶಕ್ತಿ ವೃದ್ಧಿಗೊಳ್ಳುತ್ತದೆ. ಶಿಫಾರಸ್ಸು ಪ್ರಮಾಣದ ರಸಗೊಬ್ಬರದೊಂದಿಗೆ ಪೊಟ್ಯಾಶ್‌ನ ಬಳಕೆ ವೃದ್ಧಿಸುವುದರಿಂದ ಕೀಟ ನಿರೋಧಕ ಶಕ್ತಿ ಹೆಚ್ಚುತ್ತದೆ.

ನೀಲಿ ಅಂಟಿನ ಬಲೆಗಳನ್ನು @25–30/ಎಕರೆಗೆ ಬೆಳೆಯ ಎತ್ತರಕ್ಕೆ ಅಳವಡಿಸಬೇಕು. ಕಾಲಾನುಸಾರ ಕುಂಟೆಯೊಡೆಯುವುದರಿಂದ ಕೋಶಾವಸ್ಥೆಯಲ್ಲಿರುವ ಥ್ರಿಪ್ಸ್ ನುಸಿಯನ್ನು ನಾಶಪಡಿಸಬಹುದು. ಸಾಧ್ಯವಾದಲ್ಲಿ ಕಾಲುವೆ ಮೂಲಕ ನೀರುಣಿಸುವ ಬದಲು ತುಂತುರು ನೀರಾವರಿ ಅಥವಾ ಹನಿ ನೀರಾವರಿ ಪದ್ಧತಿ ಅಳವಡಿಸಬೇಕು.

ಸಿಲ್ವರ್ ಬಣ್ಣದ ಪ್ಲಾಸ್ಟಿಕ್ ಶೀಟ್ (25–30 ಮೈಕ್ರಾನ್) ನಿಂದ ಮಲ್ಚಿಂಗ್ ಮಾಡುವುದರಿಂದ ಮಣ್ಣಿನಲ್ಲಿ ಕೋಶಾವಸ್ಥೆಗೆ ಹೋಗುವುದನ್ನು ತಡೆಯಬಹುದು. ತೀವ್ರಬಾಧೆಗೊಳಗಾದ ಗಿಡಗಳನ್ನು ಕಿತ್ತುಗುಂಡಿಯಲ್ಲಿ ಮುಚ್ಚಬೇಕು ಅಥವಾ ಸುಡಬೇಕು. ಪರಭಕ್ಷಕ, ಮಿತ್ರಕೀಟಗಳ ವೃದ್ಧಿಗಾಗಿ ಹೆಚ್ಚಿನ ಪ್ರಮಾಣದಲ್ಲಿ ರಾಸಾಯನಿಕ ಕೀಟನಾಶಕಗಳ ಬದಲು ಪರಿಸರ ಸ್ನೇಹಿ ಕೀಟನಾಶಕಗಳಾದ ಶೇ.5ರ ಬೇವಿನಬೀಜದ ಕಷಾಯ, ಬೇವಿನ ಎಣ್ಣೆ(3000 ಪಿ.ಪಿ.ಯಂ)@ 2 ಮಿ.ಲೀ/ಲೀ, ಹೊಂಗೆ ಎಣ್ಣೆ@ 3 ಮಿ.ಲೀ/ಲೀ ನೀರಿಗೆ ಬೆರೆಸಿ ಸಿಂಪಡಿಸಬೇಕು.

ಶಿಲೀಂಧ್ರ ಕೀಟನಾಶಕಗಳಾದ ಬಿವೇರಿಯಾ ಬಸ್ಸಿಯಾನ ಅಥವಾ ಲೆಕ್ಯಾನಿಸಿಲಿಯಂ ಲೆಕ್ಯಾನಿ ಅಥವಾ ಮೆಟಾರೈಜಿಯಮ್ ಅನಿಸೋಪ್ಲಿಯೇಯನ್ನು @ 4 ಗ್ರಾಂ/ಲೀ ನೀರಿಗೆ ಬೆರೆಸಿ ಸಿಂಪಡಿಸಬೇಕು.ಅವಶ್ಯಕತೆಗನುಸಾರವಾಗಿ ಶಿಫಾರಸ್ಸು ಮಾಡಿರುವ ರಾಸಾಯನಿಕ ಕೀಟನಾಶಕಗಳದ 0.3 ಮಿ.ಲೀ. ಇಮಿಡಾಕ್ಲೋಪ್ರಿಡ್ 17.8 ಎಸ್.ಎಲ್ ಅಥವಾ 0.2 ಗ್ರಾಂ ಥಯೋಮೆಥಾಕ್ಸಾಮ್ 25 ಡಬ್ಲ್ಯೂಜಿ ಅಥವಾ 1.0 ಮಿ.ಲೀ ಫಿಪ್ರೋನಿಲ್ 5 ಎಸ್.ಸಿ ಅಥವಾ 1.0 ಗ್ರಾಂ ಡಯಾಫೆನ್‌ಥಯೂರಾನ್ 50 ಡಬ್ಲ್ಯೂಜಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು.

*ಎಲೆ ಮುಟುರು ರೋಗ:*

ಈ ರೋಗವನ್ನು ಹಳದಿ ಮಿಶ್ರಿತ ಹಸಿರು ಭಾಗವನ್ನು ಎಲೆಯಲ್ಲಿ ಕಾಣಬಹುದು. ಎಲೆಗಳು ವಕ್ರಾಕಾರದ ಅಥವಾ ಮುಟುರು ಎಲೆಗಳನ್ನು ಕಾಣಬಹುದು. ಆ ಮೇಲೆ ಗಿಡಗಳ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಮುಟುರು ರೋಗದ ಬಾಧೆ ತಡೆಗಟ್ಟಲು ಶೇ.0.5ರ ಬೆಳ್ಳೊಳ್ಳಿ, ಹಸಿ ಮೆಣಸಿನಕಾಯಿ, ಸೀಮೆ ಎಣ್ಣೆ ಕಷಾಯವನ್ನು ಬೇವು ಜನ್ಯ ಕೀಟನಾಶಕದೊಂದಿಗೆ (2.5 ಮಿ.ಲೀ. ಪ್ರತಿ ಲೀಟರ್ ನೀರಿಗೆ) ಬೆರೆಸಿ ಅವಶ್ಯವಿದ್ದಾಗ ಸಿಂಪರಣೆ ಮಾಡಬೇಕು.

ಪ್ರಮುಖವಾಗಿ ಮೆಣಸಿನಕಾಯಿಯಲ್ಲಿ ಬೆಳೆಯಲ್ಲಿ ಬರುವ ಥಿಪ್ಸ್, ಮೈಟ್ಸ್, ಬಿಳಿ ನೊಣ ಹಾಗೂ ರಸಹಿರುವ ಕೀಟಗಳ ನಿರ್ವಹಣೆ ಮಾಡುವುದು ಎಲೆ ಮುಟುರು ರೋಗದ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಕೀಟನಾಶಕಗಲಾದ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 17.8 ಎಸ್.ಎಲ್ ಅಥವಾ 0.2 ಗ್ರಾಂ ಥಯೋಮೆಥಾಕ್ಸಾಮ್ 25 ಡಬ್ಲ್ಯೂಜಿ ಅಥವಾ 1.0 ಮಿ.ಲೀ ಫಿಪ್ರೋನಿಲ್ 5 ಎಸ್.ಸಿ ಅಥವಾ 1.0 ಗ್ರಾಂ ಡಯಾಫೆನ್‌ಥಯೂರಾನ್ 50 ಡಬ್ಲ್ಯೂ.ಪಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು.

*ಬೂದಿ ರೋಗ:*

ಈ ರೋಗವನ್ನು ಬೂದಿ ಬಣ್ಣದ ಮಚ್ಚೆಗಳನ್ನು ಎಲೆಯಲ್ಲಿ ಕಾಣಬಹುದು. ರೋಗ ಕಂಡುಬಂದಲ್ಲಿ 1 ಗ್ರಾಂ ಕಾರ್ಬಂಡೈಜಿಮ್ ಅಥವಾ 3 ಗ್ರಾಂ ನೀರಿನಲ್ಲಿ ಕರಗುವ ಗಂಧಕ ಒಂದು ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು. ರೋಗಲಕ್ಷಣಗಳು ಕಡಿಮೆಯಾಗದ್ದಿದಲ್ಲಿ ಇದೇ ಸಿಂಪರಣೆಯನ್ನು 15 ದಿನಗಳ ಹಂತರದಲ್ಲಿ ಇನ್ನೂ ಎರಡು ಬಾರಿ ಕೈಗೊಳ್ಳಬಹುದು ಅಥವಾ 1 ಗ್ರಾಂ ಅಜೋಕ್ಸಿಸ್ಟರೋಬಿನ್ ಶೇ.23 ಎಸ್‌ಟಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದಾಗಿದೆ. ಇಲ್ಲವೇ ಹೆಕ್ಸಾಕೊನಜೋಲ್ ಶೇ.2 ಎಸ್‌ಸಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬಹುದು.

ಹಣ್ಣು ಕೊಳೆ ರೋಗ:

ಈ ರೋಗವನ್ನು ಹಣ್ಣುಗಳ ಮೇಲೆ ವೃತ್ತಾಕಾರದ ತಗ್ಗಾದ ಕಪ್ಪನೆಯ ಚುಕ್ಕೆಗಳು ಕಾಣಿಸಿಕೊಳ್ಳುತ್ತವೆ. ಒಳಗಿನ ಬಣ್ಣವು ಗುಲಾಬಿ ವರ್ಣದಿಂದ ಕೂಡಿರುತ್ತದೆ. ಆ ಮೇಲೆ ಕಪ್ಪಾಗುತ್ತವೆ. ಮೆಣಸಿನಕಾಯಿ ಬೆಳೆಗೆ ತುದಿ ಸಾಯುವ ರೋಗ, ಹಣ್ಣು ಕೊಳೆಯುವ ರೋಗ ಹಾಗೂ ಬೂದಿ ರೋಗಗಳು ಕಂಡು ಬಂದಾಗ 1 ಗ್ರಾಂ ಕಾರ್ಬಂಡೈಜಿಮ್ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ 15 ದಿನಗಳ ಅಂತರದಲ್ಲಿ ನಾಲ್ಕು ಬಾರಿ ಸಿಂಪಡಿಸಬೇಕು.

1 ಗ್ರಾಂ ಅಜೋಕ್ಸಿಸ್ಟರೋಬಿನ್ ಶೇ.23 ಎಸ್‌ಟಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದಾಗಿದೆ. ಇಲ್ಲವೇ ಹೆಕ್ಸಾಕೊನಜೋಲ್ ಶೇ.2 ಎಸ್‌ಸಿ ರೋಗ ನಾಷಕವನ್ನು ಪ್ರತಿ ಲೀಟರ್ ನೀರಿಗೆ ಬೇರಸಿ ಸಿಂಪಡಿಸಬಹುದು.

ಈ ಮೇಲ್ಕಂಡ ಎಲ್ಲಾ ಅಗತ್ಯವಿರುವ ನಿರ್ವಹಣಾ ಕ್ರಮಗಳನ್ನು ಅನುಸರಿಸುವ ಮೂಲಕ ರೈತರು ಸಕಾಲದಲ್ಲಿ ಮೆಣಸಿನಕಾಯಿ ಬೆಳೆಗೆ ಔಷಧಿಗಳನ್ನು ಸೂಕ್ತ ರೀತಿಯಲ್ಲಿ ಸಿಂಪಡಿಸಿ ಉತ್ತಮ ಗುಣಮಟ್ಟದ ಇಳುವರಿ ಪಡೆಯಬಹುದಾಗಿದೆ.

ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರಿಚಿತ ಮೃತನ ವಾರಸುದಾರರ ಪತ್ತೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 11–2025ರ ಸೆಪ್ಟೆಂಬರ್ 4 ರಂದು ಒಬ್ಬ ಅಪರಿಚಿತ ಪುರುಷು ಸುಮಾರು 50 ವರ್ಷ ಯಾವುದೇ ರೈಲು ಗಾಡಿಗೆ ಆಯಾತಪ್ಪಿ ಆತ್ಮಹತ್ಯೆ ಮಾಡಿಕೊಂಡು ಮೃತಪಟ್ಟ ಹಿನ್ನೆಲೆ ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಯು.ಡಿ.ಆರ್ ಬಿ.ಎನ್.ಎಸ್.ಎಸ್ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿದಿದೆ ಎಂದು ರಾಯಚೂರು ರೈಲ್ವೆ ಪೊಲೀಸ್ ಠಾಣೆ ಠಾಣಾಧಿಕಾರಿ ಅವರು ತಿಳಿಸಿದ್ದಾರೆ.

ಮೃತನ ಚಹರೆ ಪಟ್ಟಿಯ ವಿವರ : ಅಪರಿಚಿತ ಪುರುಷ ಸುಮಾರು 50 ವರ್ಷ, ಎತ್ತರ ಸುಮಾರು 5 ಫೀಟ್ 6 ಇಂಚು, ಗೋಧಿ, ಮೈ ಬಣ್ಣ, ಕೋಲು ಮುಖ, ಉದ್ದನೆಯ ಮೂಗು, ಸಣ್ಣ ಕಿವಿಗಳು, ತಲೆಯಲ್ಲಿ ಸುಮಾರು ಎರಡು ಇಂಚು ಕಪ್ಪು ಕೂದಲು, ಕಪ್ಪು, ಬಿಳಿ ಮಿಶ್ರಿತ ಗಡ್ಡ, ಮೀಸೆ ಹೊಂದಿರುತ್ತಾನೆ. ಬಟ್ಟೆಬರೆಗಳು ಒಂದು ಬಿಳಿ ಗೆರೆಯುಳ್ಳ, ಕೇಸರಿ ಬಣ್ಣದ ಚಕ್ಸ್ ಶರ್ಟ್, ಒಂದು ನೀಲಿ ಮತ್ತು ಬಿಳಿ ಬಣ್ಣದ ಪಟ್ಟಿಯುಳ್ಳ, ಕೆಂಪು ಬಣ್ಣದ ಬನಿಯಾನ್, ಒಂದು ನೀಲಿ ಗೆರೆಯುಳ್ಳ, ಕೆಂಪು ಬಣ್ಣದ ಲುಂಗಿ, ಒಂದು ಹಳದಿ ಬಣ್ಣದ ಚಡ್ಡಿ ಇರುತ್ತದೆ. ಮೃತದೇಹ ದೋರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ, ಮೃತನ ವಾರಸುದಾರರ ಪತ್ತೆ, ಪಿ.ಎಂ.ಇ ಸಲುವಾಗಿ ಮೃತದೇಹಗಳನ್ನು ಸರಕಾರಿ ರಿಮ್ಸ್ ಆಸ್ಪತ್ರೆಯ ಶೀತಲಶವಗಾರದಲ್ಲಿಟ್ಟಿರುತ್ತದೆ. ಅಪರಿಚಿತ ಮೃತರ ವಾರಸುದಾರರ ಈ ಮೃತ ಅಪರಿಚಿತ ಗಂಡಸಿನ ವಾರಸುದಾರರ ಪತ್ತೆಯ ಕುರಿತು ಸಾರ್ವಜನಿಕರಲ್ಲಿ ಸಮೂಹ ಮಾಧ್ಯಮಗಳಲ್ಲಿ, ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಿಗೆ ಕೋರಿದ್ದು, ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥವಾ ಈ ಮೃತನ ಹೋಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂ.ನಂ.08532, 231716 ಅಥವಾ ಮೊ.ನಂ.9480802111, ರೈಲ್ವೇ ಪೊಲೀಸ್ ಕಂಟ್ರೋಲ್ ರೂ.ಸಂ.080 22871291ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೈಕಲ್ ಜಾಥಾ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 11–2025ರ ಸೆಪ್ಟೆಂಬರ್ 15 ರಂದು ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಜಿಲ್ಲೆಗಳಲ್ಲಿ ಸೈಕಲ್ ಜಾಥಾ ಆಯೋಜಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಚನ್ನಬಸಪ್ಪ ಅವರು ತಿಳಿಸಿದ್ದಾರೆ.

2025ರ ಸೆಪ್ಟೆಂಬರ್ 15 ರಂದು ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಯಾದಗಿರಿ ಜಿಲ್ಲೆಯಲ್ಲಿ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದ್ದು, ಈ ಸೈಕಲ್ ಜಾಥಾದಲ್ಲಿ ಆಸಕ್ತ ಇರುವವರು 2025ರ ಸೆಪ್ಟೆಂಬರ್ 12 ರಂದು ಸಂಜೆ 5 ಗಂಟೆಯ ಒಳಗೆ ಹೆಸರನ್ನು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಯಾದಗಿರಿ, ಸುರಪುರ, ಶಹಾಪೂರ, ಕಛೇರಿಯಲ್ಲಿ ಹೆಸರನ್ನು ನೋಂದಾವಣಿ ಮಾಡಿಕೊಳ್ಳಬೇಕು. 2025ರ ಸೆಪ್ಟೆಂಬರ್ 15 ರಂದು ಬೆಳಿಗ್ಗೆ 8 ಗಂಟೆಗೆ ಸೈಕಲ್ ಜಾಥಾ ಕಾರ್ಯಕ್ರಮದಲ್ಲಿ ಸಂಘ, ಸಂಸ್ಥೆಗಳು, ಶಾಲಾ, ಕಾಲೇಜು, ವಿದ್ಯಾರ್ಥಿಗಳು, ಅಧಿಕಾರಿಗಳು, ಯಾದಗಿರಿ ಜಿಲ್ಲಾಡಳಿತ ಭವನದಿಂದ ಪ್ರಾರಂಭಿಸಿ ಯಾದಗಿರಿ ನಗರದ ಪ್ರಮುಖ ವೃತ್ತದಿಂದ ಸಂಚರಿಸಿ ಜಿಲ್ಲಾಡಳಿತ ಭವನ ಮುಕ್ತಾಯಗೊಳಿಸಿ ತದನಂತರ ಜಿಲ್ಲಾಡಳಿತ ಭವನದಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕರು ದೇಶದ ಆಸ್ತಿ ಅಶೋಕ ಘನತೆ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ನಗರದ ಭವಾನಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ಆಚರಿಸಲಾಯಿತು ಸಂಸ್ಥೆಯ ಅಧ್ಯಕ್ಷರಾದ ಅಶೋಕ ಘನಾತೆ ಮಾತನಾಡಿ ದೇಶದ ಭವಿಷ್ಯ ಶಿಕ್ಷಕರ ಕೈಯಲ್ಲಿದೆ ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ನೀಡಿ ಮಕ್ಕಳ ಭವಿಷ್ಯ ರೂಪಿಸಬೇಕು ಶಿಕ್ಷಕರು ಮಕ್ಕಳ ಏಳಿಗೆಗಾಗಿ ಸದಾ ಶ್ರಮಿಸಬೇಕು ಸರ್ವಪಲ್ಲಿ ರಾಧಾಕೃಷ್ಣ ಅವರ ಜೀವನ ಆದರ್ಶವನ್ನು ಮಕ್ಕಳಿಗೆ ತಿಳಿಸಿ ಶಿಸ್ತು ಬದ್ಧ ಶಿಕ್ಷಣಕ್ಕೆ ಬುನಾದಿ ಹಾಕಬೇಕು ಶಿಕ್ಷಕರು ನಮ್ಮ ದೇಶದ ಆಸ್ತಿ ಇದ್ದಂತೆ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು ಎಂದು ನುಡಿದರು ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಜ್ಯೋತಿ ಘನಾತೆ ಶಿಕ್ಷಕಿಯರಾದ ಭವಾನಿ ಪೊಲೀಸ್ ಪಾಟೀಲ ಕೋಮಲ ಬಾಸುತ್ಕರ ಐಶ್ವರ್ಯ ಬಾಸುತ್ಕರ್ ಸುಮೈಯಾ ಅಮೃತಾ ಬಾಳ0ಕರ್ ಇದ್ದರು ನಂತರ ಶಾಲೆ ಇಲ್ಲ ಶಿಕ್ಷಕಿಯರಿಗೆ ಕ್ರೀಡೆಯನ್ನು ಏರ್ಪಡಿಸಲಾಯಿತು ಮಕ್ಕಳಿಂದ ಸಂಸ್ಕೃತಿಕ ಕಾರ್ಯಕ್ರಮ ನೆರವೇರಿತು ಕಾರ್ಯಕ್ರಮದ ನಿರೂಪಣೆಯನ್ನು ಕಾವ್ಯ ಮತ್ತು ವೀಣಾ ನಿರ್ವಹಿಸಿದರು ಸಹನಾ ಯಾಳಗಿ ಪ್ರಾರ್ಥಿಸಿದರು ಸ್ವಾತಿ ವಂದಿಸಿದರು.

# ಆತ್ಮಹತ್ಯೆ ಸಮಸ್ಯೆಗೆ ಪರಿಹಾರ ಅಲ್ಲಾ ಸಮಸ್ಯೆಗಳನ್ನು ಧೈರ್ಯದಿಂದ ಎದುರಿಸಿ ಪರಿಹಾರ ಕಂಡುಕೊಳ್ಳಬೇಕು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 11–ಪ್ರತಿ ವರ್ಷ ಜಗತ್ತಿನಾದ್ಯಂತ ಲಕ್ಷಾಂತರ ಜನರು ಆತ್ಮ ಹತ್ಯೆ ಮಾಡಿಕೊಳ್ಳುತ್ತಿದ್ದಾರೆ, ಇದು ಕುಟುಂಬ ಸೇರಿ ಸಮೂದಾಯದ ಮೇಲೆ ತೀವ್ರ ಪರಿಣಾಮ ಬೀರುತ್ತದೆ, ಇದರ ತಡೆಗಟ್ಟುವಿಕೆ ಬೆಂಬಲ ಮತ್ತು ವ್ಯವಸ್ಥಿತ ಬದಲಾವಣೆಯ ಅವಶ್ಯಕತೆ ಇದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ ಬಿರಾದಾರ ಅವರು ಹೇಳಿದರು.



ಯಾದಗಿರಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ಐ.ಇ.ಸಿ ವಿಭಾಗ ಸಹಯೋಗದಲ್ಲಿ ವಿಶ್ವ ಆತ್ಮಹತ್ಯೆ ತಡೆ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷ ಸೆಪ್ಟೆಂಬರ್ 10 ರಂದು ಸಮೂದಾಯದಲ್ಲಿ ಜಾಗೃತಿ ಮೂಡಿಸಲು ವಿಶ್ವ ಆತ್ಮಹತ್ಯೆ ತಡೆ ದಿನವನ್ನಾಗಿ ಆಚರಿಸಲಾಗುತ್ತದೆ. ಯುವ ಜನತೆ ಹೆಚ್ಚಾಗಿ ಮಾನಸಿಕ ಖಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಆತ್ಮ ಹತ್ಯೆಗೆ ಯತ್ನಿಸುವವರ ವರ್ತನೆಗಳಲ್ಲಿ ವಿಪರೀತ ಹತಾಶೆ ಭಾವನೆ, ಊಟ, ನಿದ್ರೆ, ಔಷಧ ಬಿಡುವುದು. ತಮ್ಮನ್ನು ತಾವೇ ನಿಂದಿಸುವುದು ಹಾಗೂ ದ್ವೇಷಿಸುವುದು. ಕುಟುಂಬ ಮತ್ತು ಸ್ನೇಹಿತರಿಂದು ದೂರವಿರುವುದು. ಜೀವನವೇ ಸಾಕಾಗಿದೆ ಬದುಕಲು ಇಷ್ಟವಿಲ್ಲಾ ಎಂಬ ಹೇಳಿಕೆ ನೀಡುವುದು, ಅಸಹಾಯಕತೆ, ಬದುಕು ಶೂನ್ಯ. ಆಸಕ್ತಿ ಇಲ್ಲಾ, ಎಂದು ಪದೇ ಪದೇ ಹೇಳುವುದು.

ಇನ್ನಿತರೆ ವರ್ತನೆಗಳು ಕಂಡುಬರುತ್ತವೆ. ಇದಕ್ಕೆ ಮಾನಸಿಕ ಖಿನ್ನತೆ, ಪರಿಕ್ಷೆಯಲ್ಲಿ ಸೋಲು, ನಿರುದ್ಯೋಗ, ಹಣಕಾಸಿನ ತೊಂದರೆ, ಕೌಟುಂಬಿಕ ದೌರ್ಜನ್ಯ, ವೈವಾಹಿಕ ಸಮಸ್ಯೆ, ಬಡತನ, ಕೆಲಸದ ಒತ್ತಡ, ಧೀರ್ಘಕಾಲ ಆರೋಗ್ಯ ಸಮಸ್ಯೆ, ಹತಾಶೆ, ಜಿಗುಪ್ಸೆ, ಒಂಟಿತನ, ಪ್ರೀತಿ ಪಾತ್ರರನ್ನು ಕಳೆದುಕೊಳ್ಳುವಿಕೆ, ಭಯ, ಆತಂಕ, ಕಷ್ಟ ನಷ್ಟಗಳು ಹೀಗೆ ಹಲವಾರು ಕಾರಣಗಳಿವೆ ಎಂದು ತಿಳಿಸಿದರು.

ಮಾನಸಿಕ ಅನಾರೋಗ್ಯ ಸಮಸ್ಯಗಳಿಂದ ದೂರವಿರಬೇಕು. ಆತ್ಮ ಹತ್ಯೆಗೆ ಯತ್ನಿಸುವ ವ್ಯಕ್ತಿಗಳ ವರ್ತನೆಗಳನ್ನು ಗುರುತಿಸಿ ಚಿಕಿತ್ಸೆ ಕೊಡಿಸಬೇಕು ಒಂಟಿಯಾಗಿ ಬಿಡದೇ ಜೊತೆಯಲ್ಲಿರಬೇಕು. ಸಂತೋಷವಾಗಿ ನೋಡಿಕೊಳ್ಳಬೇಕು. ಅವರ ಜೊತೆ ಹೆಚ್ಚು ಸಮಯ ಕಳೆಯಬೇಕು. ಮನಸ್ಥಿತಿ ಅರ್ಥ ಮಾಡಿಕೊಳ್ಳಬೇಕು. ಮಾನಸಿಕ ಆರೋಗ್ಯ ಸಹಾಯವಾಣಿಗಳಾದ ಓನ್ ಲೈಫ, ಟೆಲಿ ಮನಸ್‌ಗಳನ್ನು ಸಂಪರ್ಕಿಸಿ ಉಚಿತ ಸಲಹೆ ಮತ್ತು ಸೇವೆಗಳನ್ನು ಪಡೆಯಬಹುದು. ಆಪ್ತ ಸಮಾಲೋಚನಾ ಕೇಂದ್ರಗಳಿಗೆ ಭೇಟಿ–ಕೊಟ್ಟು, ಪರಿಹಾರ ಕಂಡಕೊಳ್ಳಬಹುದು. ಆತ್ಮಹತ್ಯೆ ಸಮಸ್ಯೆಗೆ ಪರಿಹಾರ ಅಲ್ಲಾ ಸಮಸ್ಯೆಗಳನ್ನು ಧೈರ್ಯದಿಂದ ಎದುರಿಸಿ ಪರಿಹಾರ ಕಂಡುಕೊಳ್ಳಬೇಕು.

ಆತ್ಮಹತ್ಯೆ ತಡೆಗಟ್ಟಲು ಸಮೂದಾಯದಲ್ಲಿ ಹೆಚ್ಚು ಹೆಚ್ಚಾಗಿ ಮಾನಸಿಕ ಆರೋಗ್ಯದ ಕುರಿತು ಅರಿವು ಮೂಡಿಸುವದು ಅಗತ್ಯವಾಗಿದೆ ಎಂದು ಹೇಳಿದರು. ನಂತರ ವಿಶ್ವ ಆತ್ಮಹತ್ಯೆ ತಡೆ ದಿನದ ಕುರಿತು ಪ್ರತಿಜ್ಞಾವಿಧಿ ಸ್ವಿಕರಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕ ಆರೋಗ್ಯ ಅಧಿಕಾರಿಗಳಾದ ಡಾ.ಹನಮಂತ ರೆಡ್ಡಿ, ಮನೋ ತಜ್ಞರಾದ ಡಾ.ಅಮಿತ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಲಕ್ಷ್ಮೀ ಮುಂಡಾಸ, ವೈದ್ಯಾಧಿಕಾರಿಗಳು, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಉಪಸ್ಥಿತರಿದ್ದರು. ಯಾದಗಿರಿ ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀ ತುಳಸಿರಾಮ ಚವ್ಹಾಣ ಕಾರ್ಯಕ್ರಮವನ್ನು ನಿರೂಪಿಸಿದರು, ಸ್ವಾಗತ, ವಂದನಾರ್ಪಣೆ ನೆರವೇರಿಸಿದರು.

# ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರ ಹೆಸರು ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೆಪ್ಟೆಂಬರ್ 11–2025–26ನೇ ಸಾಲಿನ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ವಿಜೇತರ ಹೆಸರು ಪ್ರಕಟಿಸಲಾಗಿದೆ ಎಂದು ಯಾದಗಿರಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರು ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ವತಿಯಿಂದ ಸೂಚಿಸಿದ ಜಿಲ್ಲಾ ಮಟ್ಟದಲ್ಲಿ "ಜಿಲ್ಲಾ ಅತ್ಯುತ್ತಮ ಶಿಕ್ಷಕರ" ಆಯ್ಕೆಗಾಗಿ ಬಂದ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಶಿಕ್ಷಕರ ಪ್ರಸ್ತಾವನೆಗಳನ್ನು 2025ರ ಸೆಪ್ಟೆಂಬರ್ 3 ರಂದು ನಡೆಸಿದ ಆಯ್ಕೆ ಸಮಿತಿಯ ಎಲ್ಲಾ ಸದಸ್ಯರು ಪರಿಶೀಲಿಸಲಾಯಿತು. ಅಂತಿಮವಾಗಿ ಆಯ್ಕೆ ಸಮಿತಿಯ ಅಧ್ಯಕ್ಷರು, ಸದಸ್ಯರ ಒಮ್ಮತದ ತೀರ್ಮಾನಂತೆ ಶಿಕ್ಷಕರನ್ನು ಆಯ್ಕೆ ಮಾಡಲಾಗಿದೆ.

ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರ ಹೆಸರುಗಳನ್ನು ಪ್ರಕಟ, ಕಿರಿಯ ಪ್ರಾಥಮಿಕ ವಿಭಾಗ, ಶಹಾಪೂರ ತಾಲೂಕಿನ ಹೊಸಕೇರಾ ತಾಂಡದಲ್ಲಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀಮತಿ ಶಾರದಾ ಮೊ.ನಂ.9845426242, ಸುರಪುರ ತಾಲೂಕಿನ ಉಪ್ಪಲದಿನ್ನಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀ ಬಸಪ್ಪ ದೊರೆ ಮೊ.ನಂ.9901089479, ಯಾದಗಿರಿ ತಾಲೂಕಿನ ಲಕ್ಷ್ಮೀನಗರ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀಮತಿ ಸುವರ್ಣ ಮೊ.ನಂ.7022620308, ಯಾದಗಿರಿ ತಾಲೂಕಿನ ರಾಚನಹಳ್ಳಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀ ಶರಣಬಸವ ಮೊ.ನಂ.9480781093, ಶಿಕ್ಷಕ ಪ್ರಶಸ್ತಿ ವಿಜೇತರಾಗಿದ್ದಾರೆ.

ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರ ಹೆಸರುಗಳನ್ನು ಪ್ರಕಟ, ಹಿರಿಯ ಪ್ರಾಥಮಿಕ ಶಾಲಾ ವಿಭಾಗ, ಶಹಾಪೂರ ತಾಲೂಕಿನ ಮಲಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀ ಗೋವರ್ಧನ ಮೊ.ನಂ.8792787504, ಸುರಪುರ ತಾಲೂಕಿನ ಬಲಶೆಟ್ಟಿಹಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀಮತಿ ಸುವರ್ಣ ಮೊ.ನಂ.9972854617, ಸುರಪುರ ತಾಲೂಕಿನ ಕೆಂಭಾವಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀಮತಿ ನೀಲಮ್ಮ ಬಿ.ಮಲ್ಲೆ ಮೊ.ನಂ.9731043740, ಯಾದಗಿರಿ ತಾಲೂಕಿನ ಗುರುಮಠಕಲ್ ಮಾ.ಪ್ರಾಥಮಿಕ ಶಾಲೆ ಸ.ಶಿಕ್ಷಕ ಶ್ರೀಮತಿ ಸುನೀತಾ ಮೊ.ನಂ.9141781134, ಶಿಕ್ಷಕ ಪ್ರಶಸ್ತಿ ವಿಜೇತರಾಗಿದ್ದಾರೆ.

ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರ ಹೆಸರುಗಳನ್ನು ಪ್ರಕಟ, ಪ್ರೌಢ ಶಾಲಾ ವಿಭಾಗ, ಶಹಾಪೂರ ತಾಲೂಕಿನ ನಾಗನಟಗಿ, ಸರಕಾರಿ ಪ್ರೌಢ ಶಾಲೆ ಸ.ಶಿಕ್ಷಕ ಶ್ರೀ ಮಲ್ಲಿಕಾರ್ಜುನ ಮೊ.ನಂ.9481411744, ಚಟ್ನಳ್ಳಿ ಸರಕಾರಿ ಪ್ರೌಢ ಶಾಲೆ ಸ.ಶಿಕ್ಷಕ ಶ್ರೀ ವಿಶ್ವರಾಧ್ಯ ಮೊ.ನಂ.8792506255, ಸುರಪುರ ತಾಲೂಕಿನ ದೇವರಗೋನಾಳ ಸರಕಾರಿ ಪ್ರೌಢ ಶಾಲೆ ದೈಹಿಕ ಶಿಕ್ಷಕ ಶ್ರೀ ಭೀಮರಾಯ ಮೊ.ನಂ.9901571301, ಯಾದಗಿರಿ ತಾಲೂಕಿನ ಸ್ಟೇಷನ್ ಲಿಂಗೇರಿ ಸರಕಾರಿ ಪ್ರೌಢ ಶಾಲೆ ಸ.ಶಿಕ್ಷಕ ಶ್ರೀ ಭೀಮರಾಯ ಮೊ.ನಂ.9663963570, ಅರಕೇರಾ.ಕೆ ಸರಕಾರಿ ಪ್ರೌಢ ಶಾಲೆ ದೈಹಿಕ ಶಿಕ್ಷಕ ಶ್ರೀ ಸಂತೋಷಕುಮಾರ ಮೊ.ನಂ.9986670431 ಶಿಕ್ಷಕ ಪ್ರಶಸ್ತಿ ವಿಜೇತರಾಗಿದ್ದಾರೆ.

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಅಯ್ಯಾಚಾರ

ಮಲ್ಲಮ್ಮ ನುಡಿವಾರ್ತೆ



ಕೊಪ್ಪಳ :14ರಂದು ರವಿವಾರ ಜಿಲ್ಲೆಯ ವೀರಮಹೇಶ್ವರ ಸೇಮಾಭಿವೃದ್ಧಿ ಸಂಘ ಮತ್ತು ವೀರಮಹೇಶ್ವರ ಪತ್ತಿನ ಸಹಕಾರ ಸಂಘ ಇವುಗಳ ವಾರ್ಷಿಕ ಮಹಾಸಭೆಯನ್ನು ಶ್ರೀ ರೇಣುಕಾಚಾರ್ಯ ಮಂದಿರ ಕೊಪ್ಪಳದಲ್ಲಿ ಸಪ್ಟಂಬರ್ 14ರಂದು ಬೆಳಗ್ಗೆ 10 ಗಂಟೆಗೆ ಜರಗುವುದು ಇದರ ಅಂಗವಾಗಿ ಬ್ರಾಹ್ಮಿ ಮುಹೂರ್ತದಲ್ಲಿ ಬೆಳಿಗ್ಗೆ ಜಂಗಮ ವಟುಗಳಿಗೆ ಅಯ್ಯಾಚಾರ ಕಾರ್ಯಕ್ರಮ ನೆರವೇರಿಸಲಾಗುತ್ತದೆ. ಅದಾದ ನಂತರ ಮಹಾಸಭೆಯಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ವಿಭಾಗದಲ್ಲಿ ಹೆಚ್ಚಿನ ಅಂಕ ಪಡೆದ ಜಂಗಮ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದು ಎಂದು ಶ್ರೀ ಮಹೇಶ್ವರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಚಂದ್ರಶೇಖರಯ್ಯ ಸೊಪ್ಪಿಮಠ ಹಾಗು ಶ್ರೀ ವೀರ ಮಹೇಶ್ವರ ಕ್ಷೇಮಾಭಿವೃದ್ಧಿ ಸಂಘ ಜಂಗಮ ಸಮಾಜದ ಜಿಲ್ಲಾ ಅಧ್ಯಕ್ಷರಾದ ಹಂಪಯ್ಯ ಬನ್ನಿಮಠ ಅವರು ವರದಿಗಾರರಿಗೆ ತಿಳಿಸಿದ್ದಾರೆ.

# ನರೇಗಾ ಯೋಜನೆಯ ಕೂಲಿಕಾರರು ಕಡ್ಡಾಯವಾಗಿ e-KYC ಮಾಡಿಸಿ : ಯಂಕಪ್ಪ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ:–ನರೇಗಾ ಯೋಜನೆಯ ಎಲ್ಲಾ ಕೂಲಿಕಾರರು ಇದೇ ಸಪ್ಟಂಬರ್–30 ರೊಳಗಾಗಿ ಜ–ಏಜಆ ಮಾಡಿಸುವುದು ಕಡ್ಡಾಯ ಎಂದು ಕೊಪ್ಪಳ ತಾಲೂಕ ಪಂಚಾಯತ ಸಹಾಯಕ ನಿರ್ದೇಶಕ ಯಂಕಪ್ಪ ಕರೆ ನೀಡಿದರು. ಓಜನಹಳ್ಳಿ ಗ್ರಾಮ ಪಂಚಾಯತಿ ಆವರಣದಲ್ಲಿ ಆಯೋಜಿಸಿದ್ದ ನರೇಗಾ ಯೋಜನೆಯ ಕೂಲಿಕಾರರು ಜ–ಏಜಆ ಹೊಂದುವ ಕುರಿತು ಕಾರ್ಯಕ್ರಮದಲ್ಲಿ ಮಾಹಿತಿ ನೀಡಿದರು. 1ನೇ ಹಂತದಲ್ಲಿ ಪ್ರಾಯೋಗಿಕವಾಗಿ ಹಾವೇರಿ, ಕೋಲಾರ, ಹಾಸನ, ಕೊಪ್ಪಳ, ತುಮಕೂರು ಜಿಲ್ಲೆಗಳನ್ನು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಆಯ್ಕೆ ಮಾಡಿಕೊಳ್ಳಲಾಗಿದ್ದು ದಿನಾಂಕ:30–09–2025ರರೊಳಗಾಗಿ NMMS e-KYC ಹೊಂದುವದು ಕಡ್ಡಾಯಗೊಳಿಸಿರುವದರಿಂದ ಎಲ್ಲಾ ಕೂಲಿಕಾರರು ಜ–ಏಜಆ ಹೊಂದುವಂತೆ ತಿಳಿಸಿದರು. ಪ್ರಸ್ತುತ ಸಮುದಾಯ ಕಾಮಗಾರಿಗಳಲ್ಲಿ ಕೂಲಿಕಾರರು ಕೆಲಸ ನಿರ್ವಹಿಸಲು ಪ್ರತಿಯೊಬ್ಬರ ತಲೆಯ ಎಣಿಕೆ ಮೂಲಕ ಓಒಒಖನಲ್ಲಿ ಹಾಜರಾತಿ ಸಂಖ್ಯೆ ಆನ್‌ಲೈನ್ ತೆಗೆದುಕೊಳ್ಳುತ್ತಿತ್ತು. ಅಕ್ಟೋಬರ್–01 ರಿಂದ ಮುಖ ಆಧಾರಿಸಿ ಓಒಒಖನಲ್ಲಿ ಹಾಜರಾತಿ ಸೆರೆಹಿಡಿಯುವದನ್ನು ಸಾಫ್ಟವೇರ್ ಅಭಿವೃದ್ದಿಪಡಿಸಲಾಗಿದ್ದು ಜ–ಏಜಆ ಹೊಂದಿರುವವರು ಅವರ ಹಾಜರಾತಿ ತೆಗೆದುಕೊಳ್ಳುವಾಗ ಅವರ ಆಧಾರ ನಂಬರ್ ಮತ್ತು ಸ್ಥಳದಲ್ಲಿ ಹಾಜರಿದ್ದವರ ಮುಖ ಹೊಂದಾಣಿಕೆಯಾದಲ್ಲಿ ಮಾತ್ರ ಅವರ ಹಾಜರಾತಿ NMMSನಲ್ಲಿ ಪರಿಗಣಿಸಲಾಗುತ್ತದೆ ಎಂದರು. ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಕೇವಲ ಸಾಮುದಾಯಿಕ ಕಾಮಗಾರಿ ಮಾತ್ರವಲ್ಲದೇ ವೈಯಕ್ತಿಕ ಕಾಮಗಾರಿಗಳನ್ನು ಮಾಡಿಕೊಳ್ಳಲು ಅವಕಾಶವಿರುತ್ತದೆ. ಒಂದು ಆರ್ಥಿಕ ವರ್ಷದಲ್ಲಿ ಒಂದು ಕುಟುಂಬಕ್ಕೆ 100 ದಿನಗಳ ಕೆಲಸವನ್ನು ನೀಡಲಾಗುತ್ತದೆ. ವೈಯಕ್ತಿಕ ಹಾಗು ಸಾಮುದಾಯಿಕ ಕಾಮಗಾರಿಗಳಲ್ಲಿ ಕೂಲಿ ಕೆಲಸ ನೀಡುವ ಉದ್ದೇಶ ನೆರವೇರುತ್ತಿರುವದು ಖುಷಿ ಸಂಗತಿಯಾಗಿದೆ. ತ್ತೀಚಿನ ದಿನಗಳಲ್ಲಿ ಯೋಜನೆಯ ಮೂಲ ಉದ್ದೇಶ ಈಡೇರುತ್ತಿರುವದು ಕೂಲಿಕಾರರಲ್ಲಿ ಸಂತಸ ಮೂಡಿಸಿದೆ ಎಂದರು. ಯೋಜನೆಯಿಂದ ಬಡಕುಟುಂಬಗಳು ಸಾಕಷ್ಟು ಪ್ರಯೋಜನೆ ಪಡೆದಿವೆ. ಇದರಿಂದ ಗ್ರಾಮೀಣ ಭಾಗದಲ್ಲಿ ಬಡತನ ನಿವಾರಣೆಯತ್ತ ಹೆಜ್ಜೆ ಇಟ್ಟಿದೆ ಎಂದರು. ತಾಲೂಕ ಐಇಸಿ ಸಂಯೋಜ–ಕ ದೇವರಾಜ ಪತ್ತಾರ ಮಾತನಾಡುತ್ತಾ ನರೇಗಾ ಯೋಜನೆಯಡಿ ಅವಕಾಶವಿರುವ ಕಾಮಗಾರಿಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಉಡಚಪ್ಪ ಭೋವಿ, ಗ್ರಾಮ ಪಂಚಾಯತ ಕಾರ್ಯದರ್ಶಿ ಆದಯ್ಯಸ್ವಾಮಿ, ಗ್ರಾಮ ಕಾಯಕ ಮಿತ್ರ ಮೆಹಬೂಬಿ ದೊಡ್ಡಮನಿ, ಡಿಇಓ ಬಸವರಾಜ ಸಮಗಂಡಿ, ನರೇಗಾ ಕೂಲಿಕಾರರು, ಕಾಯಕ ಬಂಧುಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಸೆ.12 ರಂದು 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ' ಅಂಗವಾಗಿ ಜಾಗೃತಿ ಜಾಥ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಜಿಲ್ಲಾ ಕೇಂದ್ರದಲ್ಲಿ 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ'ಅಂಗವಾಗಿ "ಆತ್ಮಹತ್ಯೆ ನಿರೂಪಣೆಯನ್ನುಬದಲಾಯಿಸುವುದು" ಎಂಬ ಘೋಷಣೆಯೊಂದಿಗೆ ಸೆ.12 ರಂದು ಬೆಳಿಗ್ಗೆ 09 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಕಚೇರಿಆವರಣದಲ್ಲಿ ಜಾಗೃತಿ ಜಾಥ ಏರ್ಪಡಿಸಲಾಗಿದೆ.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಜಾಥಾ ಗೆ ಚಾಲನೆ ನೀಡುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗು ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ರೋಹವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಹಾಗೂ ಇತರರು ಭಾಗವಹಿಸುವರು.

ಜಿಲ್ಲಾಮಾನಸಿಕಆರೋಗ್ಯಕಾರ್ಯಕ್ರಮ ಅನುಷ್ಠಾನಾಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರಕುಮಾರ್.ಕೆ.ಜಿಅವರು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ ಅವರು ಸ್ವಾಗತ ಹಾಗೂ ಕಾರ್ಯಕ್ರಮ ನಿರೂಪಿಸುವರು ಎಂದು ಪ್ರಕಟಣೆ ತಿಳಿಸಿದೆ.

# ದೀವಾನ್ ಎ ಮಸ್ತಾನ್ ದರ್ಗಾ(ಸುನ್ನಿ) ವಕ್ಫ್ ಸಂಸ್ಥೆಯ ಸಾಮಾನ್ಯ ಸದಸ್ಯರ ನೋಂದಣಿ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಬಳ್ಳಾರಿ ನಗರದ ಕೌಲ್ ಬಜಾರ್ ವ್ಯಾಪ್ತಿಯಲ್ಲಿರುವ ದೀವಾನ್ ಎ ಮಸ್ತಾನ್ ದರ್ಗಾ(ಸುನ್ನಿ) ವಕ್ಫ್ ಸಂಸ್ಥೆಯ ಸಾಮಾನ್ಯ ಸದಸ್ಯರ ನೋಂದಣಿ ಇದೇ ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 16 ರವರೆಗೆ ನಡೆಯಲಿದೆ ಎಂದು ವಕ್ಫ್ ಸಂಸ್ಥೆಯ ನೋಂದಣಿಅಧಿಕಾರಿಗಳು ತಿಳಿಸಿದ್ದಾರೆ.

ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 04 ರವರೆಗೆ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 02.30 ರ ಅವಧಿಯಲ್ಲಿ ಸದಸ್ಯರ ದಾಖಲಾತಿಗಾಗಿ ಅರ್ಜಿ ನಮೂನೆ ವಿತರಣೆ ಮಾಡಲಾಗುತ್ತದೆ.

ಭರ್ತಿ ಮಾಡಿದ ಅರ್ಜಿ ನಮೂನೆಗಳೊಂದಿಗೆ ಇತ್ತೀಚಿನ 3 ಭಾವಚಿತ್ರಗಳು ಹಾಗೂ ರೂ.400 ಶುಲ್ಕ ಹಾಗೂ ಅಧಿಕೃತ ವಿಳಾಸದ 02 ಗುರುತಿನ ಚೀಟಿಗಳೊಂದಿಗೆ ಅಕ್ಟೋಬರ್ 04 ಮಧ್ಯಾಹ್ನ 02.30 ರೊಳಗೆ ಜಿಲ್ಲಾ ವಕ್ಫ್ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನೋಂದಣಿ ಅಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ದಾಖಲಾದ ಸದಸ್ಯರ ಕರಡು ಪಟ್ಟಿಯನ್ನು ಅಕ್ಟೋಬರ್ 09 ರಂದು ಪ್ರಕಟಿಸಲಾಗುತ್ತದೆ. ಕರಡು ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಹಾಗೂ ಸಲಹೆ–ಸೂಚನೆಗಳಿದ್ದಲ್ಲಿ ಅಕ್ಟೋಬರ್ 10 ರಿಂದ ಅಕ್ಟೋಬರ್ 13 ರೊಳಗೆ ಬೆಳಿಗ್ಗೆ 11 ರಿಂದ ಸಂಜೆ 5.30 ರೊಳಗೆ ಸಲ್ಲಿಸಬಹುದು. ಆಕ್ಷೇಪಣೆಗಳ ವಿಚಾರಣೆ ಅಕ್ಟೋಬರ್ 14 ರಂದು ಬೆಳಿಗ್ಗೆ 11 ಗಂಟೆಗೆ ನಡೆಸಲಾಗುತ್ತದೆ. ದಾಖಲಾದ ಸಾಮಾನ್ಯ ಸದಸ್ಯರ ಅಂತಿಮ ಪಟ್ಟಿಯನ್ನು ಅಕ್ಟೋಬರ್ 16 ರಂದು ದೀವಾನ್ ಎ ಮಸ್ತಾನ್ ದರ್ಗಾ(ಸುನ್ನಿ) ಮತ್ತು ಜಿಲ್ಲಾ ವಕ್ಫ್ ಕಚೇರಿಯಲ್ಲಿ ಪ್ರಕಟಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ಮಹಿಳೆಯರ ಜೀವನೋಪಾಯ ಸುಧಾರಣೆಗೆ ಒತ್ತು: ಜಿಪಂ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ಮಹಿಳಾ ರೈತರ ಸಬಲೀಕರಣ, ಶಾಶ್ವತ ಕೃಷಿ ಪದ್ಧತಿಗಳ ಬಲವರ್ಧನೆ ಮತ್ತು ಗ್ರಾಮೀಣ ಜೀವನೋಪಾಯ ಸುಧಾರಣೆಗೆ ಒತ್ತು ನೀಡಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಹೇಳಿದರು.

ಗುರುವಾರದಂದು, ಬಳ್ಳಾರಿ ತಾಲ್ಲೂಕಿನ ಮೋಕಾ ಗ್ರಾಮದ ಪಾಂಡುರಂಗ ದೇವಸ್ಥಾನದ ಆವರಣದಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಸಂಜೀವಿನಿ–ಬೆಂಗಳೂರು ಹಾಗೂ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಬಳ್ಳಾರಿ ಮತ್ತು ಮೋಕಾ ಗ್ರಾಮ ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಮುದ್ದು ಮಲ್ಲೇಶ್ವರ ಸಂಜೀವಿನಿ ಮಹಿಳಾ ಕಿಸಾನ್ ಪ್ರೊಡ್ಯೂಸರ್ ಕಂಪನಿಯ 2ನೇ ವರ್ಷದ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮುದ್ದು ಮಲ್ಲೇಶ್ವರ ಸಂಜೀವಿನಿ ಮಹಿಳಾ ಕಿಸಾನ್ ಪ್ರೊಡ್ಯೂಸರ್ ಕಂಪನಿಯಲ್ಲಿ ಒಟ್ಟು 6 ಗ್ರಾಮ ಪಂಚಾಯಿತಿಯ 1000 ಜನ ಮಹಿಳೆಯರು ಷೇರುದಾರರಾಗಿದ್ದು, 10 ಜನ ನಿರ್ದೇಶಕರನ್ನು ಒಳಗೊಂಡಿದೆ. ಕಂಪನಿಯು ಮುಖ್ಯ ಕಚೇರಿಯ ಮೋಕಾ ಗ್ರಾಮ ಪಂಚಾಯಿತಿಯಲ್ಲಿ ಸ್ಥಾಪಿತವಾಗಿದೆ. ಪ್ರತಿಯೊಬ್ಬ ಷೇರುದಾರರು ತಲಾ ರೂ.1500 ಬಂಡವಾಳ ಹೂಡಿದ್ದು, ಒಟ್ಟು 15 ಲಕ್ಷ ರೂ. ಷೇರು ಬಂಡವಾಳ ಕಂಪನಿಯು ಹೊಂದಿದೆ. ಕಂಪನಿಯ ಎಲ್ಲಾ ಮಹಿಳೆಯರು ಮಾಲೀಕರಿದ್ದಂತೆ. ಕಂಪನಿ ಅಭಿವೃದ್ಧಿ ಹೊಂದಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಸಂಜೀವಿನಿ ಮಾಸಿಕ ಸಂತೆ ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮೋಕಾ ಗ್ರಾಪಂ ಅಧ್ಯಕ್ಷರಾದ ಈರಾಳು ಫಕೀರಮ್ಮ, ಜಿಪಂ ಸಹಾಯಕ ಆಡಳಿತ ಅಧಿಕಾರಿ ಬಸವರಾಜ ಹೀರೆಮಠ, ಬಳ್ಳಾರಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಐ ಬಾರಿಕರ್, ಮೋಕಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಸರೋಜ, ಮೋಕಾ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಜ್ಯೋತಿ.ಐ., ಮೋಕಾ ಗ್ರಾಪಂ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೆಂಕಟಮ್ಮ, ಎನ್‌ಆರ್‌ಎಲ್‌ಎಂ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ.ಎಂ., ಜಿಲ್ಲಾ ವ್ಯವಸ್ಥಾಪಕರಾದ ವಿಜಯ ಕುಮಾರ್.ಪಿ., ರಘುವರ್ಮ, ಅಪೂರ್ವ ಕಾಂತರಾಜು ಕೆ.ಕೆ., ಬಳ್ಳಾರಿ ತಾಪಂ ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕ ವಿ.ಗಂಗಾಧರ, ಎಂಕೆಪಿಸಿ ಸಿಇಓ ಬಸವರಾಜ, ಕಂಪನಿಯ ಅಧ್ಯಕ್ಷೆ ರಾಜೇಶ್ವರಿ, ಕಂಪನಿಯ ನಿರ್ದೇಶಕ ಮಂಡಳಿಯ ಸದಸ್ಯರು, ತಾಲ್ಲೂಕು ಮಟ್ಟದ ಎನ್‌ಆರ್‌ಎಲ್‌ಎಂ ನ ಸಿಬ್ಬಂದಿಗಳು ಸೇರಿದಂತೆ ಕಾರೇಕಲ್ಲು, ಯರಗುಡಿ, ವೇಣಿನೂರು, ಬಸರ–ಕೋಡು ಹಾಗೂ ಬಿಡಿ ಹಳ್ಳಿ ಗ್ರಾಮ ಪಂಚಾಯತಿಗಳ ಒಕ್ಕೂಟದ ಎಲ್ಲಾ ಸಿಬ್ಬಂದಿಗಳು ಮತ್ತು ಎಂಕೆಪಿಸಿ ಕಂಪನಿಯ ಎಲ್ಲಾ ಶೇರುದಾರರು ಭಾಗವಹಿಸಿದ್ದರು.

# ಲಂಬಾಣಿ ವಡ್ಡರ ಜಾತಿಗಳು ಎಸ್,ಸಿ, ಪಟ್ಟಿಯಿಂದ ಕೈಬಿಡಲು ಆಗ್ರಹ,

**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ:ಸುಪ್ರೀಂ ಕೋರ್ಟ ಆದೇಶದಂತೆ ಪ,ಜಾ, ಅಸ್ಪೃಶ್ಯ ಸಮುದಾಯಗಳ ಪಟ್ಟಿಯಲ್ಲಿ ಅನಧಿಕೃತವಾಗಿ ಸೆರ್ಪಡೆಗೊಂಡ ಲಂಬಾಣಿ, ವಡ್ಡರ ಸೇರಿದಂತೆ ಇತರೆ ಸ್ಪೃಶ್ಯ ಜಾತಿ ಸಮುದಾಯಗಳನ್ನು ಎಸ್,ಸಿ, ಪಟ್ಟಿಯಿಂದ ತೆಗೆದು ಹಾಕಿ ನ್ಯಾಯದೊರಕಿಸಿಕೊಡಬೇಕು ಎಂದು ಸಾಮಾಜಿಕ ನ್ಯಾಯಾಕ್ಕಾಗಿ ಒಳ ಮೀಸಲಾತಿ ಹೋರಾಟ ಸಮಿತಿ ಸಂಚಾಲಕರಾದ ವೆಂಕಟೇಶ ಆಲೂರವರು ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಮನವಿ ಮಾಡಿಕೊಂಡಿದ್ದಾರೆ, ಈ ಕುರಿತು ಹೆಳಿಕೆಯೊಂದನ್ನು ನೀಡಿದ ಅವರು, ನ್ಯಾ, ನಾಗಮೋಹನದಾಸ್ ರವರ ವರದಿಯಂತೆ ಸಾಮಾಜಿಕ ನ್ಯಾಯದಡಿಯಲ್ಲಿ ಲಂಬಾಣಿ ಕೊರಚ, ಕೊರಮ, ವಡ್ಡರ, ಸೇರಿದಂತೆ ಇತರೆ ಜಾತಿಗಳು ಸೇ. 5%ರಷ್ಟು ಮೀಸಲಾತಿ ಕಲ್ಪಿಸಲಾಗಿದೆ, ಇವರಿಂದ ಇನ್ನೂ ಅಸ್ಪೃಶ್ಯ ಜಾತಿಗಳಿಗೆ ಬರಬೇಕಾದ ಮೀಸಲಾತಿ ಪಾಲು ಹಂಚಿ ಹೋಗಿದೆ, ಅಲ್ಲದೆ ಇದನ್ನೆ ಬಂಡವಾಳ ಮಾಡಿಕೊಂಡು ಸ್ಪರ್ಶ ಜಾತಿಗಳಿದ್ದರೂ ತಮಗೆ ಬಹುಪಾಲು ಅಂದರೆ ಶೇ.7% ಮೀಸಲಾತಿ ನೀಡಬೇಕು ಎಂದು ಒಳ ಮೀಸಲಾತಿ ವಿರುದ್ಧ ಹೋರಾಟ ಮಾಡುವದು ಅವೈಜ್ಞಾನಿಕ ಸಂಗತಿಯಾಗಿದೆ, ಕಾರಣ ಮಾನ್ಯ ಘನ ನ್ಯಾಯಾಲಯ ಸುಪ್ರೀಂ ಕೋರ್ಟ ನೀಡಿದ ತಿರ್ಪುನ್ನು ಪರಿಗಣಿಸಿ ವಡ್ಡರ, ಲಂಬಾಣಿ, ಜಾತಿಗಳನ್ನು ಎಸ್,ಸಿ, ಪಟ್ಟಿಯಿಂದ ಕೈ ಬಿಡಬೇಕು ಎಂದು ಅವರು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ, ಈ ಕುರಿತು ಸರ್ಕಾರ ಪರೀಶೀಲನೆ ಮಾಡದೆ ಇದ್ದಲ್ಲಿ ರಾಜ್ಯಾದ್ಯಾಂತ ಸ್ಪೃಶ್ಯ ಜಾತಿಗಳ ಕೈ ಬಿಡುವಂತೆ ಜನಾಂದೋಲ ಮಾಡಬೇಕಾಗುತ್ತದೆ ಎಂದು ಅವರು ಪತ್ರಿಕೆ ಪ್ರಕಟಣೆ–ಯ ಮುಖಾಂತರ ವಿವರಣೆ ನೀಡಿದ್ದಾರೆ, ಈ ಸಂಧರ್ಭದಲ್ಲಿ ಮುಖಂಡರಾದ ಶಾಂತಪ್ಪಗುತ್ತೆದಾರ, ರುದ್ರಪ್ಪ ಹುಲಿಮನಿ, ಸೋಪಣ್ಣ ದರಿಯಾಪುರ, ವಾಸುದೇವ ಕಟ್ಟಿಮನಿ ವಕೀಲರು, ಭೀಮರಾಯ ಕಾಂಗ್ರೆಸ್, ಬಸವರಾಜ ಪೂಜಾರಿ, ಹಯ್ಯಾಳಪ್ಪ ದೋರನಳ್ಳಿ ಸೇರಿದಂತೆ ಅನೇಕ ಗಣ್ಯರು ಮನವಿಯಲ್ಲಿ ಆಗ್ರಹ ಮಾಡಿದ್ದಾರೆ.

# ಸೆ.25 ರಂದು ಬಳ್ಳಾರಿ ಹಾಪ್ ಕಾಮ್ಸ್ 56ನೇ ಸರ್ವ ಸದಸ್ಯರ ವಾರ್ಷಿಕ ಮಹಾಜನ ಸಭೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಜಿಲ್ಲಾ ತೋಟಗಾರಿಕೆ ಉತ್ಪನ್ನ ಬೆಳೆಗಾರರ ಸಹಕಾರಿ ಮಾರುಕಟ್ಟೆ ಮತ್ತು ಕೃಷಿ ಸಂಸ್ಕರಣ ಸಂಘ ಬಳ್ಳಾರಿ ಹಾಪ್ ಕಾಮ್ಸ್ ನ 56ನೇ ಸರ್ವ ಸದಸ್ಯರ ಮಹಾಜನ ಸಭೆಯನ್ನು ಸೆ.25ರಂದು ಬೆಳಿಗ್ಗೆ 11.30 ಕ್ಕೆ ನಗರದ ಅನಂತಪುರ ರಸ್ತೆಯ ಅಲ್ಲಂ ಭವನ ಎದುರುಗಡೆ–ಯ ಬಿ.ಗೋನಾಳ್ ಕ್ಷೇತ್ರದಲ್ಲಿನ ಸಂಗ್ರಹಣ ಕೇಂದ್ರ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಬಳ್ಳಾರಿ ಜಿಲ್ಲಾ ಹಾಪ್ ಕಾಮ್ಸ್ ನ ಅಧ್ಯಕ್ಷರಾದ ಸುವರ್ಣಮ್ಮ ಅವರು ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಹಾಪ್ ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಸ್ಜೀದ್ ಎ ಅಬುಬಕ್ಕರ್ ಸಿದ್ದೀಖ್(ಸುನ್ನಿ) ವಕ್ಫ್ ಸಂಸ್ಥೆಯ ಸಾಮಾನ್ಯ ಸದಸ್ಯರ ನೋಂದಣಿ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಬಳ್ಳಾರಿ ನಗರದ ಕೌಲ್ ಬಜಾರ್ ವ್ಯಾಪ್ತಿಯಲ್ಲಿರುವ ಮಸ್ಜಿದ್ ಎ ಅಬುಬಕ್ಕರ್ ಸಿದ್ದೀಖ್(ಸುನ್ನಿ) ವಕ್ಫ್ ಸಂಸ್ಥೆಯ ಸಾಮಾನ್ಯ ಸದಸ್ಯರ ನೋಂದಣಿ ಇದೇ ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 16 ರವರೆಗೆ ನಡೆಯಲಿದೆ ಎಂದು ನೋಂದಣಿ ಅಧಿಕಾರಿಗಳು ತಿಳಿಸಿದ್ದಾರೆ.

ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 04 ರವರೆಗೆ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 02.30 ಗಂಟೆ ಅವಧಿಯಲ್ಲಿ ಸದಸ್ಯರ ದಾಖಲಾತಿಗಾಗಿ ಅರ್ಜಿ ನಮೂನೆ ವಿತರಣೆ ಮಾಡಲಾಗುತ್ತದೆ.

ಭರ್ತಿ ಮಾಡಿದ ಅರ್ಜಿ ನಮೂನೆಗಳೊಂದಿಗೆ ಇತ್ತೀಚಿನ 3 ಭಾವಚಿತ್ರ ಹಾಗೂ ರೂ.400 ಶುಲ್ಕ ಹಾಗೂ ಅಧಿಕೃತ ವಿಳಾಸದ 02 ಗುರುತಿನ ಚೀಟಿಗಳೊಂದಿಗೆ ಅಕ್ಟೋಬರ್ 04 ರ ಮಧ್ಯಾಹ್ನ 02.30 ರೊಳಗೆ ಜಿಲ್ಲಾ ವಕ್ಫ್ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನೋಂದಣಿ ಅಧಿಕಾರಿಗಳ ಕಚೇರಿಗೆ ಸಲ್ಲಿಸಬಹುದು.

ದಾಖಲಾದ ಸದಸ್ಯರ ಕರಡು ಪಟ್ಟಿಯನ್ನು ಅಕ್ಟೋಬರ್ 09 ರಂದು ಪ್ರಕಟಿಸಲಾಗುತ್ತದೆ. ಕರಡು ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಹಾಗೂ ಸಲಹೆ–ಸೂಚನೆಗಳಿದ್ದಲ್ಲಿ ಅಕ್ಟೋಬರ್ 10 ರಿಂದ 13 ರೊಳಗೆ ಬೆಳಿಗ್ಗೆ 11 ಗಂಟೆಯಿಂದ ಸಂಜೆ 5.30 ರೊಳಗೆ ಸಲ್ಲಿಸಬಹುದು.

ಆಕ್ಷೇಪಣೆಗಳ ವಿಚಾರಣೆ ಅಕ್ಟೋಬರ್ 14 ರಂದು ಮಧ್ಯಾಹ್ನ 12.30 ಕ್ಕೆ ನಡೆಸಲಾಗುತ್ತದೆ. ದಾಖಲಾದ ಸಾಮಾನ್ಯ ಸದಸ್ಯರ ಅಂತಿಮ ಪಟ್ಟಿಯನ್ನು ಅಕ್ಟೋಬರ್ 16 ರಂದು ಮಸ್ಜೀದ್ ಎ ಅಬುಬಕ್ಕರ್ ಸಿದ್ದೀಖ್(ಸುನ್ನಿ) ಮತ್ತು ಜಿಲ್ಲಾ ವಕ್ಫ್ ಕಚೇರಿಯಲ್ಲಿ ಪ್ರಕಟಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಯಿ ಕಚ್ಚಿದಲ್ಲಿ ಕೂಡಲೇ ರೇಬಿಸ್ ಲಸಿಕೆ ಹಾಕಿಸಿರಿ: ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಸಾಕಿದ ಅಥವಾ ಬೀದಿ ನಾಯಿ ಕಚ್ಚಿದಲ್ಲಿ, ಉಗುರಿನಿಂದ ಗಿರಿದರೆ, ನಮ್ಮ ಮೈಮೇಲೆ ಈಗಾಗಲೇ ಇರುವ ಗಾಯವನ್ನು ನಾಲಿಗೆಯಿಂದ ನೆಕ್ಕಿದರೆ ಏನೂ ಆಗುವುದಿಲ್ಲವೆಂದು ನಿರ್ಲಕ್ಷ್ಯ ವಹಿಸದೇ ನಾಯಿ ಕಚಿ–ಚ್ಚದ ಜಾಗವನ್ನು ಸೋಪು ಮತ್ತು ನೀರಿನಿಂದ ತೊಳೆದು, ಕೂಡಲೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ತೆರಳಿ ವೈದ್ಯರ ಸಲಹೆಯಂತೆ ಮಾರಣಾಂತಿಕವಾದ ರೇಬಿಸ್ ರೋಗ ತಡೆಗಟ್ಟುವ ಲಸಿಕೆ ಪಡೆಯಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಕೌಲ್‌ಬಜಾರ್ ಇವರ ಸಂಯುಕ್ತಾಶ್ರಯದಲ್ಲಿ ಕೌಲ್‌ಬಜಾರ್ ನ ಆರೋಗ್ಯ ಕೇಂದ್ರದಲ್ಲಿ ನಾಯಿ ಕಡಿತ ಹಾಗೂ ಹಾವು ಕಡಿತ ಕುರಿತು ಬುಧವಾರ ಏರ್ಪಡಿಸಿದ್ದ ಜನಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರೇಬೀಸ್ ಸೋಂಕುಳ್ಳ ನಾಯಿ ಕಚ್ಚಿದಾಗ ರೇಬೀಸ್ ನಿರೋಧಕ ಚುಚ್ಚುಮದ್ದು ಪಡೆಯದಿದ್ದರೆ ಅಂತಹ ವ್ಯಕ್ತಿಯು ರೇಬೀಸ್ ಕಾಯಿಲೆಯ ಸೋಂಕಿಗೆ ಒಳಗಾಗಿ ರೋಗ ದೀರ್ಘವಾದಾಗ ಮರಣ ಸಂಭವಿಸಬಹುದು ಎಂದು ತಿಳಿಸಿದರು.

ಆರೋಗಿಯು ಬಹುತೇಕ ಕ್ರಮೇಣ ನೀರು ಕುಡಿಯುವುದಿಲ್ಲ, ಗಾಳಿ ಬಿಸಿದರೆ ಹೆದರುತ್ತಾರೆ, ಬೆಳಕು ಕಂಡರೆ ಭಯ ಪಡುತ್ತಾರೆ, ಅಲ್ಲದೆ ನಾಯಿ ಕಡಿತ ಮೆದುಳಿಗೆ (ತಲೆಗೆ) ಹತ್ತಿರವಾಗಿದ್ದಲ್ಲಿ ಅಪಾಯ ಹೆಚ್ಚು. ಈ ನಿಟ್ಟಿನಲ್ಲಿ ಮಾರಣಾಂತಿಕ ರೇಬೀಸ್ ಕಾಯಿಲೆ ತಡೆಗಟ್ಟಲು, ವೈದ್ಯರ ಸಲಹೆಯಂತೆ ರೇಬಿಸ್ ಚುಚ್ಚುಮದ್ದನ್ನು ಕಚ್ಚಿದ ಮೊದಲ ದಿನ, 3ನೇ ದಿನ, 7ನೇ ದಿನ, 28ನೇ ದಿನ ತಪ್ಪದೇ ಲಸಿಕೆ ಪಡೆಯಬೇಕು ಹಾಗೂ ಸಾಕು ನಾಯಿಗಳಿಗೆ ತಪ್ಪದೇ ಚುಚ್ಚುಮದ್ದನ್ನು ಹಾಕಿಸಬೇಕು ಎಂದು ಕೋರಿದರು.

*ಹಾವು ಕಡಿತ ಜಾಗೃತಿ:*

ಹಾವು ಕಡಿತ ಜಾಗೃತಿ ಕುರಿತು ಮಾತನಾಡಿದ ಡಾ.ಮರಿಯಂಬಿ ವಿ.ಕೆ ಅವರು, ಹಾವು ಕಚ್ಚಿದಾಗ ಗಾಬರಿಯಾಗುವುದು ಸಾಮಾನ್ಯ. ಆ ಸಂದರ್ಭದಲ್ಲಿ ಸಮಾಧಾನದಿಂದ ಕಚ್ಚಿರುವ ಭಾಗ ಹೃದಯದ ಕೆಳಗೆ ಬರುವ ರೀತಿಯಲ್ಲಿ ನಿಗಾವಹಿಸಿ, ಆ ವ್ಯಕ್ತಿಯನ್ನು ಯಾವುದೇ ವಾಹನ ಅಥವಾ 108 ಅಂಬುಲೇನ್ಸ್ ಮೂಲಕ ಹತ್ತಿರದ ಆಸ್ಪತ್ರೆಗೆ ಕರೆದುಕೊಂಡು ಹೋಗಬೇಕು ಎಂದು ಹೇಳಿದರು.

ಹಾವು ಕಚ್ಚಿದಾಗ ಕಚ್ಚಿದ ಜಾಗದ ಪಕ್ಕದಲ್ಲಿ ಬಟ್ಟೆಯನ್ನು ಕಟ್ಟುವುದು, ಬ್ಲೇಡ್ ಅಥವಾ ಚಾಕುವಿನಿಂದ ಗಾಯ ಮಾಡುವುದು, ಗಾಯವನ್ನು ಸುಡುವುದು, ನಾಟಿ ಔಷಧಿಗಳನ್ನು

# ಡಾ, ಅಂಬೇಡ್ಕರ ವೃತ್ತದ ಅಭಿವೃದ್ದಿಗೆ 2,26 ಎಕರೆ ಭೂ,ಮಂಜೂರಿಗೆ ಆಗ್ರಹ,



**ಮಲ್ಲಮ್ಮ ನುಡಿ ವಾರ್ತೆ**

ಶಹಾಪುರ:ಕಳೆದ 40 ವರ್ಷಗಳ ಕಾಲ ಸಂವಿಧಾನ ಶಿಲ್ಪಿ ಡಾ, ಬಿ,ಆರ್,ಅಂಬೇಡ್ಕರವರ ವೃತ್ತವಿದ್ದು, ಇಂದಿನವರೆಗೂ ಅಭಿಚವೃದ್ದಿಗೆ ಸ್ಥಳಿಯ ವ್ಯವಸ್ಥೆಗಳು ಅವಕಾಶ ಮಾಡಿರುವದಿಲ್ಲ, ಮುಂದಿನ ದಿನಮಾನಗಳಲ್ಲಿ ವೇಗವಾಗಿ ಬೆಳೆಯುತ್ತಿರುವ ಸುರುಪುರ ನಗರದಲ್ಲಿ ಡಾ,ಬಾಬಾಸಾಹೇಬರ ಪ್ರತಿಮೆ ಅಕ್ಕಪಕ್ಕದ ಅಂದರೆ ಸರ್ವೆ ನಂ, 71ರಲ್ಲಿ ಖಾರೀಜ ಖಾತಾ ಭೂಮಿಯಲ್ಲಿ ಡಾ, ಅಂಬೇಡ್ಕರ ವೃತ್ತ ಅಭಿವೃದ್ದಿಗೆ 2,ಎಕರೆ, 26 ಗುಂಟೆ ಜಮೀನು ಮಂಜೂರಿ ಮಾಡಬೇಕು ಎಂದು ಒತ್ತಾಯಿಸಿ ಕ,ರಾ, ದ,ಸಂ,ಸ ಯಾದಗಿರಿ ಜಿಲ್ಲಾ ಸಮಿತಿ ಸಂಚಾಲಕರಾದ ಶಿವುಪುತ್ರ ಜವಳಿಯವರ ನೇತೃತ್ವದಲ್ಲಿ ತಹಿಸಲ್ದಾರ ಸಿದ್ದಾರೂಡ ಬನ್ನಿಕೊಪ್ಪರವರಿಗೆ ಮನವಿ ಪತ್ರ ಸಲ್ಲಿಸಲಾಯಿತು, ಈ ಸಮಯದಲ್ಲಿ ದಲಿತ ಮುಖಂಡರಾದ ಶ್ರೀಶೈಲ್ ಹೋಸಮನಿ, ಸಂ, ಸಂಚಾಲಕರಾದ ಶಿವುಕುಮಾರ ತಳವಾರ, ಮರೆಪ್ಪ ಕ್ರಾಂತಿ, ವಿಶ್ವ ನಾಟೇಕಾರ, ಶರಣು ದೋರನಳ್ಳಿ, ಶರಬಣ್ಣ ದೊರನಳ್ಳಿ, ಮಲ್ಲಿಕಾರ್ಜುನ ಹೋಸಮನಿ, ವಾಸು ಕೋಗಿಲಕರ್, ಸಂತೋಷ ಗುಂಡಳ್ಳಿ, ನಗರಾಜ ಡಿ.ಕೆ. ದೊಡ್ಡಪ್ಪ ಕಾಡಮಗೇರಾ, ಜೈಭೀಮ ಸಿಂಗನಳ್ಳಿ, ಭೀಮಶಂಕರ್ ಗುಂಡಳ್ಳಿ, ಪರಶು ಸಿಂಗನಳ್ಳಿ, ಸಿದ್ದಪ್ಪ ಕೊಡಮನಳ್ಳಿ, ನಾಗರಾಜ ಬಬಲಾದಿ, ನಾಗರಾಜ ರಸ್ತಾಪುರ, ಮಲ್ಲಪ್ಪ ಕುರಿ, ಉಮೇಶ ಬಿದರಾಣಿ, ಸೇರಿದಂತೆ ಅನೇಕರು ಹಾಜರಿದ್ದರು,

# ಅ.19 ರಂದು ಮಾಜಿ ಸೈನಿಕರಿಗೆ ಸಂಪರ್ಕ ಶಿಬಿರ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಬೆಳಗಾವಿಯ ರಕ್ಷಣಾ ಇಲಾಖೆಯ ಮರಾಠಾ ಲೈಟ ಇನ್‌ಫಂಟ್ರಿ ಸೆಂಟರ್ ವತಿಯಿಂದ ಅಕ್ಟೋಬರ್ 19 ರಂದು ಬೆಳಿಗ್ಗೆ 8.30 ರಿಂದ ಸಂಜೆ 04 ಗಂಟೆಯವರೆಗೆ ಬೆಳಗಾವಿ ನಗರದ ಶಿವಾಜಿ ಸ್ಟೇಡಿಯಂನಲ್ಲಿ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗಾಗಿ ಸಂಪರ್ಕ ಶಿಬಿರ ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, ಸ್ಪರ್ಶ್ (SPARSH) ಮತ್ತು ಇಸಿಹೆಚ್‌ಎಸ್ ಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಕುಂದು–ಕೊರತೆ ಕುರಿತು ವಿವರಗಳನ್ನು ನೋಂದಾಯಿಸಿಕೊಂಡು, ನೋಂದಣಿ ಸಂಖ್ಯೆ ಪಡೆಯಬೇಕು.

ನೋಂದಣಿ ಮಾಡಿಸುವ ಫಲಾನುಭವಿಗಳು ತಮ್ಮ ಕುಂದು ಕೊರತೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584, ದೂ.0831–2402821 ಮತ್ತು ಇಮೇಲ್ ರಡಿಜಚಣಂರಂಡಿಟಟಚಿ@ಟುಥಿ. ಛಿಟ ಗಳ ಮೂಲಕ ಅಪ್‌ಲೋಡ್ ಮಾಡಲು ಅವಕಾಶ ಇರುತ್ತದೆ.

ಹಾಗಾಗಿ ಶಿಬಿರದಲ್ಲಿ ಬಳ್ಳಾರಿ ಜಿಲ್ಲೆಯ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬಹುದು ಎಂದು ಎಂಎಲ್‌ಐಆರ್‌ಸಿ ಅಭಿಲೇಖಾಧಿಕಾರಿ ತಿಳಿಸಿದ್ದಾರೆ.

# ಮೀನುಮರಿ ವಿತರಣೆ; ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಮೀನುಗಾರಿಕೆ ಇಲಾಖೆ ವತಿಯಿಂದ 2025–26 ನೇ ಸಾಲಿನ ಕೃಷಿಹೊಂಡ ಮತ್ತು ಸ್ವಂತ ಕೊಳಗಳಿರುವ ರೈತರಿಗೆ ಮೀನು ಕೃಷಿ ಕೈಗೊಳ್ಳಲು ಉಚಿತವಾಗಿ ಮೀನುಮರಿಗಳನ್ನು ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಗರಿಷ್ಠ 500 ಸಂಖ್ಯೆಯ ಭಾರತೀಯ ಗೆಂಡೆ ಮೀನು, ಸಾಮಾನ್ಯ ಗೆಂಡೆ ಮೀನು ಹಾಗೂ ಬಲಿತ ಮೀನುಮರಿ ತಳಿಯ ಮೀನುಗಳನ್ನು ಉಚಿತವಾಗಿ ನೀಡಲಾಗುವುದು.

**ಬೇಕಾದದಾಖಲೆ:**ಆಧಾರ್ ಕಾರ್ಡ್, ಪಹಣಿಯ ಪ್ರತಿ ಮತ್ತು ಪಾಸ್ ಪೋರ್ಟ್ ಸೈಜ್‌ನ ಪೋಟೋ ಜೊತೆಗೆ ಇನ್ನಿತರೆ ದಾಖಲೆಗಳನ್ನು ಬಳ್ಳಾರಿ ಅಥವಾ ಸಂಡೂರು ತಾಲ್ಲೂಕು ಮೀನುಗಾರಿಕೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ಮತ್ತು ಕುರುಗೋಡು ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ.7406508971 ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ.7204911897 ಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜ ಕಲ್ಯಾಣ ಇಲಾಖೆ: ಕಾನೂನು ವೃತ್ತಿ ತರಬೇತಿಗಾಗಿ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಗೆ ಕಾನೂನು ಆಡಳಿತ ನ್ಯಾಯಾಧೀಕರಣದಲ್ಲಿ 02 ವರ್ಷಗಳ ವೃತ್ತಿ ತರಬೇತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಗೆ 2024–25 ನೇ ಸಾಲಿನಲ್ಲಿ ತಾಂತ್ರಿಕ ದೋಷದಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗದವರಿಗೆ ಮತ್ತೊಮ್ಮೆ 2024–25 ಮತ್ತು 2025–26 ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಅರ್ಹ ಪದವೀಧರರು ಸೆಪ್ಟೆಂಬರ್ 30 ರ ಒಳಗಾಗಿ ಇಲಾಖೆಯ ವೆಬ್‌ಸೈಟ್ ತಿತಿತಿ.ತಿ.ಇಚಿಡಿ.ಟುಥಿ.ಛಿಟ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಕೋಟೆ ಪ್ರದೇಶದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ ಅಥವಾ ದೂ:08392267932 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.13 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಯ 110/11 ಕೆವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಲಿಂಕ್–ಲೈನ್ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಸೆ.13 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಎಫ್–23, ಎಫ್–24 ಮತ್ತು ಎಫ್–25 ಫೀಡರ್ ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಗಳು:* ನಗರದ ಹೆಚ್.ಆರ್. ಗವಿಯಪ್ಪ ವೃತ್ತ, ತೇರು ಬೀದಿ, ಜೈನ್ ಮಾರ್ಕೆಟ್, ಕಾಳಮ್ಮ ಸ್ಟ್ರೀಟ್, ಲಾರಿ ಟರ್ಮಿನಲ್, ರಂಗಮಂದಿರ, ಹೊಸ ಬಸ್ ನಿಲ್ದಾಣ, ಬಂಡಿಮೋಟ್, ಗೊಲ್ಲರಹಟ್ಟಿ, ಮಾರುತಿ ಕಾಲೋನಿ, ಬೆಂಗಳೂರು ರಸ್ತೆ, ಬಾಪೂಜಿ ನಗರ, ಕುರಿಕಮೇಲ, ಕಮೇಲ ರಸ್ತೆ, ಆರ್ ಕೆ ಮಿಲ್ ರೋಡ್, ಬಾಪೂಜಿ ನಗರ ಸರ್ಕಲ್, ರಾಣಿತೋಟ, ಕಣೆಕಲ್ ಬಸ್ ಸ್ಟ್ಯಾಂಡ್, ದೊಡ್ಡ ಮಾರ್ಕೆಟ್, ಸಣ್ಣ ಮಾರ್ಕೆಟ್, ಕಾರ್ಕಳ ತೆ–ೂೕಟ, ಸಾಯಿ ಕಾಲೋನಿ, ಆರ್. ಆರ್ ಲೇಔಟ್, ಮರಿಸ್ವಾಮಿ ಮಠ ಹಾಗೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ನೂರ್ ಜಾನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.14 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.11–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಬ್ಯಾಂಕ್–2ನ ಫೀಡರ್ ನ ಎಫ್–34 ನ ಲಿಂಕ್–ಲೈನ್ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಸೆ.14 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜುನಲ್ಲಿ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯವಾಗುವ ಪ್ರದೇಶಗಳು:* ಎಫ್–34 ವ್ಯಾಪ್ತಿಯ ರೈಲ್ವೆ ಫಸ್ಟ್ ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೆರೆ, ಟೈಲರ್ ಸ್ಟೀಟ್, ವಡ್ಡೆ ನಾಗಪ್ಪ ಕಾಲೋನಿ, ತಿಲಕ್ ನಗರ, ವಿನಾಯಕ ನಗರ, ಐಶ್ವರ್ಯ ಕಾಲೋನಿ, ಐಟಿಐ ಕಾಲೇಜು, ರೇಡಿಯೋ ಪಾರ್ಕ್, ಕೌಲ್ ಬಜಾರ್ ಮೇನ್ ರೋಡ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.15 ಇಂಜಿನೀಯರ ಮ್ಯಾರಥಾನ್-2025

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ಭಾರತರತ್ನ ಸರ್ ಎಂ.ವಿಶ್ವೇಶ್ವರಯ್ಯನವರ ಜನ್ಮ ದಿನಾಚರಣೆ ಅಂಗವಾಗಿ ಅಭಿಯಂತರರ ದಿನಾಚರಣೆ ಪ್ರಯುಕ್ತ ಸೆಪ್ಟೆಂಬರ 15 ರಂದು ಬೆಳಿಗ್ಗೆ 6 ಗಂಟೆಗೆ ಇಂಜಿನೀಯರ ಮ್ಯಾರಥಾನ್-2025 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರರ ಪ್ರಾಯೋಜಕತ್ವದಲ್ಲಿ ಮ್ಯಾರಥಾನ್ ನಡೆಸಲಾಗುತ್ತಿದ್ದು, ಅಂದು ಬೆಳಿಗ್ಗೆ 6 ಗಂಟೆಗೆ ನವನಗರದ ಕಾಳಿದಾಸ ಹೈಸ್ಕೂಲ್ ಮೈದಾನದಿಂದ ಪ್ರಾರಂಭವಾಗಿ ವಿದ್ಯಾಗಿರಿ ಸರ್ಕಲ್ ರೋಡ ನಂ.19 ಮಾರ್ಗವಾಗಿ ಬಿಟಿಡಿಎ ವರೆಗೆ ಮ್ಯಾರಥಾನ್ ನಡೆಯಲಿದೆ. ನಂತರ ಬಿಟಿಡಿಎ ಆವರಣದಲ್ಲಿರುವ ಸರ್ ಎಂ.ವಿಶ್ವೇಶ್ವರಯ್ಯನವರ ಪುತ್ಥಳಿಗೆ ಮಾಲಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಬಿಟಿಡಿಎ ಮುಖ್ಯ ಅಭಿಯಂತರ ಚಂದ್ರಹಾಸ ಬಂಡಿ, ಆಲಮಟ್ಟಿ ಕೆಬಿಜೆಎನ್‌ಎಲ್ ಮುಖ್ಯ ಅಭಿಯಂತರ ಡಿ.ಬಸವರಾಜ, ಕೆ.ಪಿ.ಟಿ.ಸಿ.ಎಲ್ ಮುಖ್ಯ ಅಭಿಯಂತರ ಕಾಶೀನಾಥ ಹಿರೇಮಠ, ವಿಶೇಷ ಆಹ್ವಾನಿತರಾಗಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ , ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಸೇರಿದಂತೆ ಇತರರು ಆಗಮಿಸಲಿದ್ದಾರೆ.

# ನ್ಯಾಯಬೆಲೆ ಅಂಗಡಿ ಮಂಜೂರಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ಬೀಳಗಿ ತಾಲೂಕಿನ ಜಾನಮಟ್ಟಿ, ಜಮಖಂಡಿ ತಾಲೂಕಿನ ತೊದಲಬಾಗಿ, ಮುಧೋಳ ತಾಲೂಕಿನ ಮಂಟೂರ, ತಿಮ್ಮಾಪೂರ ಗ್ರಾಮಗಳಿಗೆ ಹೊಸದಾಗಿ ನ್ಯಾಯಬೆಲೆ ಪ್ರಾರಂಭಿಸಲು ಮಂಜೂರಾತಿ ನೀಡುವ ಸಲುವಾಗಿ ಅರ್ಹ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಸಹಕಾರಿ ಸಂಘವು ಕನಿಷ್ಠ ಮೂರು ವರ್ಷಗಳಿಂದ ಚಾಲನೆಯಲ್ಲಿದ್ದು, ಹಿಂದಿನ ಎರಡು ವರ್ಷಗಳಲ್ಲಿ ಕನಿಷ್ಟ 2 ಲಕ್ಷ ರೂ.ಗಳ ನಿರಂತರ ಬ್ಯಾಂಕ್ ಬ್ಯಾಲೆನ್ಸ್ ಹೊಂದಿರಬೇಕು. ವಿಕಲಚೇತನ ಹಾಗೂ ತೃತೀಯ ಲಿಂಗದ ವ್ಯಕ್ತಿಗಳನ್ನು ಹೊರತುಪಡಿಸಿ ಖಾಸಗಿ ವ್ಯಕ್ತಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವದಿಲ್ಲ.

ಕನಿಷ್ಟ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರಬೇಕು. ಈ ಪ್ರಕಟಣೆಯನ್ನು ಯಾವುದೇ ಮುನ್ಸೂಚನೆ ನೀಡದೇ ರದ್ದುಪಡಿಸುವ ಅಧಿಕಾರವನ್ನು ಸಕ್ಷಮ ಪ್ರಾಧಿಕಾರ ಹೊಂದಿರುತ್ತದೆ. ಅರ್ಜಿ ನಮೂನೆ ಹಾಗೂ ಇತರೆ ಮಾಹಿತಿಗಾಗಿ ಆಯಾ ತಹಶೀಲ್ದಾರ ಕಚೇರಿ ಸಂಪರ್ಕಿಸಿ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿ ನಮೂನೆಯ ಜೊತೆಗೆ ದಾಖಲಾತಿಗಳೊಂದಿಗೆ ಅಕ್ಟೋಬರ 8 ರಂದು ಸಂಜೆ 5.30 ರೊಳಗಾಗಿ ಸಲ್ಲಿಸುವಂತೆ ಆಹಾರ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.13 ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ಜಿಲ್ಲೆಯ ಬಾಗಲಕೋಟೆ, ಬಾದಾಮಿ, ಗುಳೇದಗುಡ್ಡ ಹಾಗೂ ಹುನಗುಂದ ತಾಲೂಕು ವ್ಯಾಪ್ತಿಯ 11 ಕೆವಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 2ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಕೈಗೊಳ್ಳುವ ಪ್ರಯುಕ್ತ ಸೆಪ್ಟೆಂಬರ 13 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಬಾಗಲಕೋಟೆ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

110 ಕೆವಿ ಬಾಗಲಕೋಟೆ ವಿದ್ಯುತ್ ವಿತರಣಾ ಕೇಂದ್ರ, 110 ಕೆವಿ ನವನಗರ, ಕೇಂದ್ರ, 110 ಕೆವಿ ನವನಗರ-1 ಯುನಿಟ್-2, 110 ಕೆವಿ ನವನಗರ 2 ಯುನಿಟ್-2, 110 ಕೆವಿ ಬಾದಾಮಿ, 110 ಕೆವಿ ಹೆಬ್ಬಳ್ಳಿ, 110 ಕೆವಿ ಗುಳೇದಗುಡ್ಡ, 110 ಕೆವಿ ನಾಗರಾಳ ಎಸ್.ಸಿ, 110 ಕೆವಿ ಬೆನಕಟ್ಟಿ, 110 ಕೆವಿ ಶೀಗಿಕೇರಿ, 110 ಕೆವಿ ನೀರಬೂದಿಹಾಳ, 110 ಕೆವಿ ಕಲಾದಗಿ, 110 ಕೆವಿ ಊದಗಟ್ಟಿ, ಶಾರದಾಳ, 110 ಕೆವಿ ಕುಳಗೇರಿ ಕ್ರಾಸ್, 110 ಕೆವಿ ಕೈನಕಟ್ಟಿ, 110 ಕೆವಿ ನಾಗರಾಳ, 33 ಕೆವಿ ಶಿರೂರ, 33 ಕೆವಿ ಕಮಗತಿ ಹಾಗೂ ಐಪಿಪಿ, ಇಎಚ್‌ಟಿ, ಗ್ರಾಹಕರಾದ 110 ಕೆವಿ ಬಾದಾಮಿ ಶುಗರ್ಸ, ದೊಡ್ಡಣ್ಣವರ ಎ.ಎಚ್.ಟಿ. ಮೆಲ್ ಬ್ರೊ ಶುಗರ್ಸ, ಕೇದಾರನಾಥ ಶುಗರ್ಸ, ಹೆರಕಲ್ ಎಲ್.ಐ.ಎಸ್, ಎಂ.ಎನ್.ಆರ್ ಕೇನ್ ಪ್ರೈ.ಲಿ, 33 ಕೆವಿ ಅಕೆಮಿ ಸೋಲಾರ ಐಪಿಪಿ ಮತ್ತು 33 ಕೆವಿ ಕಾಟವಾ ವಿದ್ಯುತ್ ಕೇಂದ್ರಗಳಿಂದ ಸರಬರಾಜು ಆಗುವ ಎಲ್ಲ 11 ಕೆವಿ ವಿದ್ಯುತ್ ಮಾರ್ಗಗಳ ಪೂರೈಕೆಯಲ್ಲಿ ವ್ಯತ್ಯಯವಾಗಿದೆ ಎಂದು ತಿಳಿಸಿದ್ದಾರೆ.

# ಪೈಪೋಟಿ ಎದುರಿಸಲು ಜ್ಞಾನ ಸಂಪತ್ತು ಅವಶ್ಯ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ಕಲಿಕೆ ನಿರಂತರ ಪ್ರಕ್ರಿಯೆ ಎಂಬ ಅಂಶವನ್ನು ಗಮನದಲ್ಲಿಟ್ಟುಕೊಂಡು ಜ್ಞಾನ ಸಂಪತ್ತನ್ನು ಹೆಚ್ಚಿಸಿಕೊಂಡಲ್ಲಿ ಪೈಪೋಟಿಯನ್ನು ಆತ್ಮವಿಶ್ವಾಸದಿಂದ ಎದುರಿಸಬಹುದು ಎಂದು ಬಾಗಲಕೋಟ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಆನಂದ ದೇಶಪಾಂಡೆ ಹೇಳಿದರು. ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ಪ್ರಸಕ್ತ ಸಾಲಿನ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ, ಪ್ರತಿಭಾ ಪುರಸ್ಕಾರ ಮತ್ತು ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿಜ್ಞಾನ ಹಾಗೂ ತಂತ್ರಜ್ಞಾನ ಕ್ಷೇತ್ರದಲ್ಲಿ ಹಲವು ಬದಲಾವಣೆಗಳಾಗುತ್ತಿವೆ. ಮಾಹಿತಿ ಮತ್ತು ತಂತ್ರಜ್ಞಾನ ಸಾಧನಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದರ ಮೂಲಕ ಅವುಗಳನ್ನು ಕರಗತಗೊಳಿಸಿಕೊಳ್ಳಬಹುದು. ಮೊಬೈಲ್‌ದಲ್ಲಿ ಜ್ಞಾನವರ್ಧನೆಗೆ ಸಾಕಷ್ಟು ಅಪ್ಲಿಕೇಶನ್ನಗಳಿದ್ದು ಅವುಗಳ ಪ್ರಯೋಜನ ಪಡೆಯಬೇಕು ಎಂದರು.

ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ವಿದ್ಯಾರ್ಥಿಗಳಿಗೆ ಉತ್ತಮ ಆರೋಗ್ಯವನ್ನು ನೀಡುತ್ತವೆ. ಸೃಜನಶೀಲ, ನಾಯಕತ್ವಗುಣ, ಸಂವಹನ ಮತ್ತು ಲೇಖನ ಕಲೆಗಳನ್ನು ಬೆಳೆಸಲು ಸಹಕಾರಿಯಾಗಿವೆ. ಅವುಗಳಲ್ಲಿ ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸಬೇಕು ಎಂದು ಆನಂದ ದೇಶಪಾಂಡೆ ಹೇಳಿದರು. ಸೇವಾ ನಿವೃತ್ತಿ ಹೊಂದಿದ ಪ್ರಾಧ್ಯಾಪಕ ಎಚ್.ಎಸ್.ಗಿಡಗಂಟಿ, ಪಿಎಚ್‌ಡಿ ಪದವಿ ಪಡೆದ ಹಳೆಯ ವಿದ್ಯಾರ್ಥಿಗಳಾದ ಪಿ.ವಿ.ಮನಗೂಳಿ, ಶ್ರೀಮತಿ ಸುರೇಖಾ ಕೊರ್ಲಹಳ್ಳಿ, ಎ.ಎಂ.ಗೊರಚಿಕ್ಕನವರ, ಶ್ರೀಮತಿ ಎಸ್.ಪಿ.ದೇಶಪಾಂಡೆ ಹಾಗೂ ಯುಜಿಸಿ ಕೆ-ಸೆಟ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಸ್.ಎಸ್.ಕುಲಕರ್ಣಿ, ಎನ್.ಎಂ.ನಾಯಕ, ಕೆ.ಬಿ.ನಾವಿ ಅವರನ್ನು ಕುಲಪತಿಗಳು ಸನ್ಮಾನಿಸಿದರು.

ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರೇರಣೆ ಸಿಗಲಿ ಎಂಬ ಕಾರಣಕ್ಕಾಗಿ ಸಾಧಕ ಹಳೆಯ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುತ್ತಿದೆ. ವಿದ್ಯಾರ್ಥಿಗಳ ವ್ಯಕ್ತಿತ್ವದ ವಿಕಾಸಕ್ಕೆ ಆಯೋಜಿಸುವ ವಿವಿಧ ಕಾರ್ಯಕ್ರಮಗಳಲ್ಲಿ ಆಸಕ್ತಿಯಿಂದ ಭಾಗವಹಿಸಬೇಕು ಎಂದರು.

ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ್, ಎಚ್.ಎಸ್.ಗಿಡಗಂಟಿ, ಡಾ.ಪಿ.ವಿ. ಮನಗೂಳಿ, ಡಾ.ಎ.ಎಂಗೊರಚಿಕ್ಕನವರ ಮಾತನಾಡಿದರು. ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ ಅಧ್ಯಕ್ಷತೆ ವಹಿಸಿದ್ದರು. ಕಾಲೇಜು ಉಪವಿಭಾಗದ ಅಧ್ಯಕ್ಷ ಡಾ.ಪಿ.ಆರ್.ಜೋಶಿ ವೇದಿಕೆಯಲ್ಲಿದ್ದರು.

ವಿದ್ಯಾರ್ಥಿಗಳು ನಾಡಗೀತೆ ಹಾಡಿದರು. ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಪರಿಚಯಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ದಿಲ್‌ಶಾದ ನದಾಫ ವಂದಿಸಿದರು. ಉಪನ್ಯಾಸಕಿ ಕೀರ್ತಿದಾಸರ ನಿರೂಪಿಸಿದರು.

ಉಪಾಧ್ಯಕ್ಷ ಜಿ.ಎನ್‌ಕುಲಕರ್ಣಿ, ಜಂಟೀ ಕಾರ್ಯದರ್ಶಿ ಎಸ್.ಬಿ.ಪರ್ವತಿಕರ, ಸದಸ್ಯರಾದ ಎಸ್.ಕೆ.ಕುಲಕರ್ಣಿ, ಡಾ.ಆರ್.ವಿ.ಜೋಶಿ, ಡಾ.ಸಂದೀಪ ಹುಯಿಲಗೋಳ, ನಿವೃತ್ತ ಪ್ರಾಧ್ಯಾಪಕ ಎಂ.ವಿ.ಮಹಾಡೀಕರ, ಡಾ.ಪಿ.ಎಸ್‌ಹುಯಿಲಗೋಳ, ಡಾ.ಎಸ್.ಜಿ.ನಾವಲಗಿ, ಜಿ.ಜೆ.ಮೊರಬ, ಪ್ರಾಚಾರ್ಯ ಅಶೋಕ ಕಂದಗಲ್, ಬಿ.ಎಚ್.ಲಮಾಣಿ, ಪ್ರಮೋದ ಅಂಬೇಕರ, ಸಿ.ಎಲ್.ಹೂಗಾರ ಮತ್ತಿತರರು ಪಾಲ್ಗೊಂಡಿದ್ದರು.

## ಹಳ್ಳೂರಿನಲ್ಲಿ ಪೋಷಣ್ ಮಾಸಾಚರಣೆ

# ಅಪೌಷ್ಠಿಕತೆ ನಿವಾರಣೆಗೆ ಪೌಷ್ಠಿಕ ಆಹಾರ ಅಗತ್ಯ-ನ್ಯಾ.ಚಂದ್ರಶೇಖರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ತಾಯಂದಿರಲ್ಲಿ ರಕ್ತಹೀನತೆ ಹೋಗಲಾಡಿಸಲು ಮತ್ತು ಮಕ್ಕಳಲ್ಲಿ ಕಂಡು ಬರುವ ಅಪೌಷ್ಠಿಕತೆ ನಿವಾರಣೆಗೆ ಪೋಷಕಾಂಶವುಳ್ಳ ಆಹಾರ ಸೇವನೆ ಅಗತ್ಯವಾಗಿದೆ ಎಂದು ಹಿರಿಯ ದಿವಾನಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾಗಿರುವ ಚಂದ್ರಶೇಖರ ದಿಡ್ಡಿ ಹೇಳಿದರು.

ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ ಸಮೀಪದ ಹಳ್ಳೂರ ಗ್ರಾಮದಲ್ಲಿ ಬುಧವಾರ ಜರುಗಿದ ತಾಲ್ಲೂಕು ಮಟ್ಟದ ಪೋಷಣ್ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈಚಿನ ದಿನಗಳಲ್ಲಿ 5 ವರ್ಷದೊಳಗಿನ ಮಕ್ಕಳಲ್ಲಿ ಅಪೌಷ್ಠಿಕತೆ ಹೆಚ್ಚಿನ ಪ್ರಮಾಣದಲ್ಲಿ ಕಂಡು ಬರುತ್ತಿದ್ದು, ಇದನ್ನು ನಿವಾರಿಸುವ ಉದ್ದೇಶದಿಂದ ಪೋಷಣ್ ಅಭಿಯಾನ ಜಾರಿಗೊಳಿಸಲಾಗಿದೆ ಎಂದರು.

ಗರ್ಭಿಣಿಯರು, ತಾಯಂದಿರು ತಾವು ಮೊದಲು ಪೌಷ್ಠಿಕಾಂಶವುಳ್ಳ ಆಹಾರ ಸೇವನೆ ಮಾಡಬೇಕು. ಅಂದಾಗ ಆರೋಗ್ಯವಂತ ಮಕ್ಕಳು ಜನಿಸಲು ಸಾಧ್ಯವಾಗುತ್ತದೆ ಎಂದ ಚಂದ್ರಶೇಖರ ದಿಡ್ಡಿ, ಜವಾರಿ ಊಟ ಮಾಡಿ ಗಟ್ಟಿಮುಟ್ಟಿಯಾಗಿರಬೇಕು. ಅಂದರೆ ಮಕ್ಕಳು ಸಹ ಆರೋಗ್ಯಪೂರ್ಣರಾಗುತ್ತಾರೆ. ಮಕ್ಕಳ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕು ಎಂದು ಹೇಳಿದರು.

ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಮೇಶ ಸೂಳಿಕೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ತಾಯಿ ಹಾಗೂ ಶಿಶು ಮರಣ ಸಂಖ್ಯೆ ತಗ್ಗಿಸುವಲ್ಲಿ ಪೋಷಣ್ ಅಭಿಯಾನ ಯೋಜನೆ ಸಹಕಾರಿಯಾಗಿದೆ. ಗರ್ಭಿಣಿ ಮಹಿಳೆಯರು ಪೌಷ್ಠಿಕ ಆಹಾರ ಸೇವನೆ ಮಾಡಬೇಕು. ತಾಯಂದಿರು ಮಕ್ಕಳ ಬಗ್ಗೆ ಕಾಳಜಿ ವಹಿಸಿ ಪೋಷಕಾಂಶವುಳ್ಳ ಆಹಾರವನ್ನು ನೀಡಬೇಕು ಎಂದರು.

ಅಧ್ಯಕ್ಷತೆಯನ್ನು ಹಳ್ಳೂರ ಗ್ರಾಪಂ ಅಧ್ಯಕ್ಷೆ ಮಲ್ಲಮ್ಮ ಮಾದರ ವಹಿಸಿದ್ದರು. ಉಪಾಧ್ಯಕ್ಷ ಸುರೇಶ ಕುರಿ, ಆರೋಗ್ಯ ಇಲಾಖೆಯ ಸಿಬ್ಬಂದಿ ಇದ್ದರು. ಕಾರ್ಯಕ್ರಮದಲ್ಲಿ ಗರ್ಭಿಣಿ ಮಹಿಳೆಯರಿಗೆ ಸೀಮಂತ ಕಾರ್ಯ ನೆರವೇರಿಸಲಾಯಿತು. ಸೆಪ್ಟಂಬರ್ ತಿಂಗಳಲ್ಲಿ ಜನಿಸಿದ ಅಂಗನವಾಡಿ ಮಕ್ಕಳ ಜನ್ಮ ದಿನಾಚರಣೆ ಆಚರಿಸಲಾಯಿತಲ್ಲದೇ, 6 ತಿಂಗಳ ಪೂರ್ಣಗೊಳಿಸಿದ ಮಕ್ಕಳಿಗೆ ಅನ್ನಪ್ರಾಶನ ಮಾಡಿಸಲಾಯಿತು.

ಸರೋಜಾ ತುರಡಗಿ ಸ್ವಾಗತಿಸಿದರು. ಬೇವೂರ ವಲಯದ ಅಂಗನವಾಡಿ ಮೇಲ್ವಿಚಾರಕಿ ಸವಿತಾ ಮಾಚಾ ನಿರೂಪಿಸಿದರು. ಶಂಕ್ರಮ್ಮ ಬಸವನಾಳ ವಂದಿಸಿದರು. ಬೇವೂರು, ಹಳ್ಳೂರ, ಭಗವತಿ, ಸಂಗಾಪೂರ, ಬೋಡನಾಯಕದಿನ್ನಿ, ಚೌಡಾಪೂರ, ಭೈರಮಟ್ಟಿ ಗ್ರಾಮಗಳ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರು, ತಾಯಂದಿರು, ಮಕ್ಕಳು ಪಾಲ್ಗೊಂಡಿದ್ದರು.

## ಸೇವಾ ಪಾಕ್ಷಿಕ ಅಭಿಯಾನ ಯಶಸ್ವಿಗೊಳಿಸಿ:

# ಜಗದೀಶ ಹೀರೆಮನಿ ಹೇಳಿಕೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಪ್ರಧಾನಮಂತ್ರಿ ನರೇಂದ್ರ ಮೋದಿ ಜನ್ಮದಿನ ಸೆ.17ರಿಂದ ಅಕ್ಟೋಬರ್ 2 ಮಹಾತ್ಮ ಗಾಂಧಿ ಜನ್ಮ ದಿನದವರೆಗೆ ದೇಶದಾದ್ಯಂತ ಸೇವಾ ಪಾಕ್ಷಿಕ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ. ಪಕ್ಷದ ಕಾರ್ಯಕರ್ತರು, ಸಾರ್ವಜನಿಕರು ಭಾಗಿವಹಿಸಿ ಯಶಸ್ವಿಗೊಳಿಸಬೇಕು ಬಿಜೆಪಿ ರಾಜ್ಯ ಮಾಜಿ ಕಾರ್ಯದರ್ಶಿ ಜಗದೀಶ ಹೀರೆಮನಿ ಎಂದು ಹೇಳಿದರು.

ನಗರದ ಬಿಜೆಪಿ ಕಚೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸೇವಾ ಪಾಕ್ಷಿಕ್ ಅಭಿಯಾನ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸೇವಾ ಪಾಕ್ಷಿಕ ಅಭಿಯಾನದ ಅವಧಿಯಲ್ಲಿ ವಿವಿಧ ಸೇವಾ ಚಟುವಟಿಗಳ ಮೂಲಕ ದೇಶದ ಕಟ್ಟ ಕಡೆಯ ವ್ಯಕ್ತಿಗೂ ತಲುಪುವುದು ನಮ್ಮ ಉದ್ದೇಶವಾಗಿದೆ. ಕಳೆದ ವರ್ಷದ ರೀತಿಯಲ್ಲಿಯೇ ಈ ವರ್ಷವೂ ಅಭಿಯಾನವನ್ನು ಅರ್ಥಪೂರ್ಣವಾಗಿ ನಡೆಸಬೇಕು ಎಂದು ತಿಳಿಸಿದರು.

ದೇಶದ್ಯಾದ್ಯಂತ ಏಕಕಾಲದಲ್ಲಿ ಆರಂಭವಾಗುವ ಅಭಿಯಾನದಲ್ಲಿ ಕೇಂದ್ರ ಸಚಿವರು, ಸಂಸದರು, ಪಕ್ಷದ ಶಾಸಕರು, ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಭಾಗವಹಿಸಲಿದ್ದಾರೆ. ನಗರ ಮತ್ತು ಗ್ರಾಮೀಣ ಭಾಗದಲ್ಲಿ ಅಧಿಕ ಸಂಖ್ಯೆಯಲ್ಲಿ ಜನರು ಅಭಿಯಾನದಲ್ಲಿ ಭಾಗವಹಿಸುವ ರೀತಿಯಲ್ಲಿ ಕಾರ್ಯಕ್ರಮ ರೂಪಿಸಬೇಕು ಎಂದರು..

ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಮಾತನಾಡಿದ ಅವರು ಕೇಂದ್ರ ಸರ್ಕಾರದ ಯೋಜನೆಗಳ ಮಾಹಿತಿಯನ್ನು ಮನೆಮನೆಗೆ ತಲುಪಿಸುವ ಜೊತೆಗೆ ಪಕ್ಷದ ಸಂಘಟನಾತ್ಮಕ ಕೆಲಸ ಕಾರ್ಯಗಳಲ್ಲಿ ಎಲ್ಲರೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ, ಹಿರಿಯ ಮುಖಂಡೆ ನಾಗರತ್ನ ಕುಪ್ಪಿ, ಸಿದ್ದಣ್ಣ ಗೌಡ ಕಾಡನೊಂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ ಮತ್ತು ಪರುಶುರಾಮ ಕುರಕುಂದಿ ಹಾಗೂ ಮೆಲಪ್ಪಗುಳಗಿ, ರಾಜುಗೌಡ ಉಕ್ಕನಾಳ, ಜಿಲ್ಲಾ ಕಾರ್ಯದರ್ಶಿ ಮಲ್ಲಿಕಾರ್ಜುನ ಹೊನಿಗೆರ, ನಗರಸಭೆ ಮಾಜಿ ಅಧ್ಯಕ್ಷ ಸುರೇಶ್ ಅಂಬಿಗೇರ, ಗೋವಿಂದಪ್ಪ ಖಾನಾಪುರ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು..

## ನಮ್ಮೂರ ತಿಳಿಯೋಣ ಬಾರಾ ಕಾರ್ಯಕ್ರಮ

# ಹಳ್ಳಿಗಳೇ ಇತಿಹಾಸ, ಸಂಸ್ಕೃತಿಯ ಮೂಲ ಕೇಂದ್ರಗಳು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ನಾಡಿನ ಸಂಸ್ಕೃತಿಕ ಪರಂಪರೆ ಹಳ್ಳಿಗಳಲ್ಲಿ ಅಡಗಿದೆ. ಈ ಸಾಂಸ್ಕೃತಿಕ ಪರಂಪರೆಗೆ ಸಾಕ್ಷಿಯಾಗಿ ಇತಿಹಾಸದಲ್ಲಿ ಸಿಗುವ ಮೂಲ ಆಕರಗಳು ಅದಕ್ಕೆ ಪೂರಕ ಸಾಧನೆಗಳಾಗಿವೆ ಎಂದು ಹಿರಿಯ ಸಾಹಿತಿ ಡಾ.ವಿಜಯಕುಮಾರ ಕಟಗಿಹಳ್ಳಿಮಠ ಹೇಳಿದರು.

ಸೀಮಿಕೇರಿ ಗ್ರಾಮದಲ್ಲಿ ಹಂಪೆ ಕಟ್ಟಿ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕೂಟ ಹಮ್ಮಿಕೊಂಡಿದ್ದ ನಮ್ಮೂರ ತಿಳಿಯೋಣ ಬಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾಗರಿಕತೆಗಳು ಅರಳಿದ್ದು ನದಿಗಳ ತೀರದಲ್ಲಿ. ಅನಂತರ ಕಾಲಾನುಕ್ರಮದಲ್ಲಿ ಪ್ರಗತಿಯ ಸೋಗಿನಲ್ಲಿ ಹಾಗೂ ಆಧುನಿಕತೆಯ ಭರಾಟೆಯಲ್ಲಿ ನಮ್ಮತನವನ್ನು ನಾವು ಕಳೆದುಕೊಳ್ಳುತ್ತಿದ್ದೇವೆ. ಅದಕ್ಕೆ ನಾವು ಈಗ ಆಧುನಿಕತೆಯೊಂದಿಗೆ ಮೂಲ ಪರಿಕಲ್ಪನೆಯನ್ನು ಅರಿತುಕೊಂಡು ನಡೆಯಬೇಕಾಗಿದೆ ಎಂದರು.

ಮುಖ್ಯ ಅತಿಥಿ ಅಶೋಕ ಕಂದಗಲ್ಲ ಮಾತನಾಡಿ, ಸಣ್ಣ ಸಣ್ಣ ಸ್ಥಾನಿಕ ಸಂಗತಿಗಳು ಇತಿಹಾಸಕ್ಕೆ ಪುಷ್ಟಿಯನ್ನು ನೀಡಿ ಮೌಲ್ಯವರ್ಧನೆಗೆ ಪೂರಕ ಐತಿಹಾಸಿಕ ವಾತಾವರಣವನ್ನು ನಿರ್ಮಿಸಲು ಸಹಕಾರಿಯಾಗಿದೆ. ಗ್ರಾಮಗಳಲ್ಲಿ ಸಿಗುವ ಐತಿಹಾಸಿಕ ಕುರುಹುಗಳಿಂದ ಇತಿಹಾಸ ರಚಿಸಲು ತುಂಬಾ ಸಹಕಾರಿಯಾಗಿದೆ. ವೀರಗಲ್ಲುಗಳು ಮಾಸ್ತಿ ಗಲ್ಲುಗಳು ತಿಳಿಸುವ ವಿಚಾರಗಳು ನಾಡಿನ ಜನರ ಶೌರ್ಯ ಪರಾಕ್ರಮಗಳನ್ನು ವಿಶ್ಲೇಷಿಸಲು ತುಂಬಾ ಸಹಾಯಕಾರಿಯಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಹದೇವಪ್ಪ ತಳವಾರ, ಹಂಪೆಕಟ್ಟೆ ಸಾಹಿತ್ಯ ಹಾಗೂ ಸಾಂಸ್ಕೃತಿಕ ಕೂಟ ಹಾಗೂ ಗ್ರಾಮದಲ್ಲಿರುವ ಸಾಂಸ್ಕೃತಿಕ ಘಟಕಗಳನ್ನು ಸಂರಕ್ಷಿಸುವ ಕೆಲಸವನ್ನು ಗ್ರಾಮ ಪಂಚಾಯಿತಿಯಿಂದ ಮಾಡಲಾಗುವದೆಂದು ಹೇಳಿದರು.

ಹನುಮಂತರಾವ ದೇಸಾಯಿ, ಮಲ್ಲಿಕಾರ್ಜುನ ತಳವಾರ ಪ್ರಕಾಶ ಖಾಡೆ, ಶಿವಣ್ಣ ಅವರಾದಿ, ಬಸಪ್ಪ ಚಿನ್ನಾಪುರ, ರಾಮನ್ನ ಸುನಗದ, ಮಲ್ಲಪ್ಪ ಕಪಲಿ ಉಪಸ್ಥಿತರಿದ್ದರು.

ನಂತರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಎಚ್.ಐ.ನಾಯಕ, ಕಲ್ಲಪ್ಪ ಸಿರಬಡಗಿ, ರಮೇಶ ತಳವಾರ, ಶಂಕ್ರಪ್ಪ ಅಗಸರ, ಕೆಂಚಪ್ಪ ತೆಗ್ಗಿ, ಈರಣ್ಣ ಶಿ.ನಾಯಕ, ಬಸವರಾಜ ಕುಂಬಾರ, ಈರಪ್ಪ ಜಂಗನ್ನವರ, ಬಾಲಪ್ಪ ಜಮ್ಮನಕಟ್ಟಿ, ರಮೇಶ ತೆಗ್ಗಿ ಭಾಗವಹಿಸಿದ್ದರು.

ಗುರುನಾಥ ತಳವಾರ ಗುರುತಿಸಿರುವ ವೀರಗಲ್ಲು ಕಾರ್ಯಕ್ರಮದ ಕೇಂದ್ರ ಬಿಂದುವಾಗಿತ್ತು. ವಿಠ್ಠಲ ತಳವಾರ ಪ್ರಾರ್ಥಿಸಿದರು. ವಿರುಪಾಕ್ಷಿ ಗಂಗೂರ ಸ್ವಾಗತಿಸಿದರು. ಮುತ್ತಣ್ಣ ಇಂಗಳಗಿ ಪರಿಚಯಿಸಿದರು. ಬಸವರಾಜ ನಾಯಕ ನಿರೂಪಿಸಿದರು. ಮಲ್ಲಿಕಾರ್ಜುನ ತಳವಾರ ವಂದಿಸಿದರು.

# ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಹವ್ಯಾಸ ಬೆಳೆಸುವುದು ಅಗತ್ಯ-ಡಾ.ಭುವನೇಶ್ವರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11-ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಮಾತ್ರ ಸೀಮಿತವಾಗದೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವುದಕ್ಕೆ ಆದ್ಯತೆ ನೀಡಬೇಕು ಎಂದು ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಹೇಳಿದರು.

ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಫಿಜಿಯೋಥೆರಪಿ ಕಾಲೇಜಿನಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ವ್ಯಕ್ತಿತ್ವದ ಸರ್ವಾಂಗೀಣ ಬೆಳವಣಿಗೆ ಎನ್ನುವುದು ಶೈಕ್ಷಣಿಕ ಪ್ರಗತಿಯ ಜೊತೆಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಹವ್ಯಾಸಗಳ ಬೆಳವಣಿಗೆಗೂ ಸಂಬಂಧಿಸಿದೆ. ಈ ದಿಸೆಯಲ್ಲಿ ಶಾಲೆ ಮತ್ತು ಕಾಲೇಜುಗಳಲ್ಲಿ ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಹವ್ಯಾಸ ಬೆಳೆಸುವುದು ಶಿಕ್ಷಣದ ಭಾಗವಾಗಿದೆ ಎಂದರು. ಸಧ್ಯದ ಸಂದರ್ಭದಲ್ಲಿ ವಿದ್ಯಾರ್ಥಿಗಳು ಸಾಮಾಜಿಕ ಮಾಧ್ಯಮಗಳನ್ನು ಅತಿಯಾಗಿ ಉಪಯೋಗಿಸುತ್ತಿರುವುದು ಬಹುಮುಖ್ಯ ಸಮಸ್ಯೆಯಾಗಿದೆ. ಇದು ಅವರ ಮಾನಸಿಕ ಬೆಳವಣಿಗೆಯ ಮೇಲೆ ಪ್ರಭಾವ ಬೀರುತ್ತಿದೆ. ವಿದ್ಯಾರ್ಥಿಗಳನ್ನು ಸಾಮಾಜಿಕ ಮಾಧ್ಯಮಗಳ ಅತಿಯಾದ ಬಳಕೆಯಿಂದ ಹೊರತರಲು ಸಂಗೀತ, ನೃತ್ಯ, ಕಲೆ ಇತ್ಯಾದಿ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಅವರು ಪಾಲ್ಗೊಳ್ಳುವಂತೆ ಮಾಡುವುದು ಅಗತ್ಯವಾಗಿದೆ. ಸಾಂಸ್ಕೃತಿಕ ಹವ್ಯಾಸಗಳು ಮಾನಸಿಕ ನೆಮ್ಮದಿ ಒದಗಿಸಿ ಆ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಕಾರಣವಾಗುತ್ತದೆ ಎಂದು ಡಾ.ಭುವನೇಶ್ವರಿ ಹೇಳಿದರು.

ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಹಾಡು, ನೃತ್ಯ, ರಂಗೋಲಿ ಬಿಡಿಸುವುದು ಇತ್ಯಾದಿ ಕಲೆಗಳನ್ನು ವಿದ್ಯಾರ್ಥಿಗಳು ವೇದಿಕೆಯ ಮೇಲೆ ಪ್ರದರ್ಶಿಸಿದರು.

ಡಾ.ಸಂಜೀವ ಕೊಳಗಿ, ಡಾ.ದಿಲೀಪ ನಾಟೇಕರ್, ಡಾ.ಹರ್ಷಾ, ಡಾ.ಪಾತೋಳಿ, ಡಾ.ನಂದಿಕೋಲಮಠ, ಡಾ.ಸುಚಿತ್ರಾ ಡಾ.ಮಹಾಂತೇಶ ಬಿರಡಿ, ಡಾ.ಕೊಟಬಾಗಿ, ಡಾ.ಎಮ್‌ಕೆ.ಪಾಟೀಲ, ಫಿಜಿಯೋಥೆರಪಿ ಕಾಲೇಜಿನ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ: ಸೆ.15ರಂದು ಸೈಕಲ್ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 11- ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಿಮತ್ತ, ನನ್ನ ಮತ ನನ್ನ ಹಕ್ಕು ಎಂಬ ಧ್ಯೇಯವಾಕ್ಯದೊಂದಿಗೆ ಸೆ.15ರಂದು ಸೈಕಲ್ ಜಾಥಾ ಆಯೋಜಿಸಲಾಗಿದೆ.

ನಗರದ ಯುವಸಮೂಹವು ಸೈಕಲ್ ಜಾಥಾದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಅಂದು ಬೆಳಗ್ಗೆ 6:30 ಗಂಟೆಗೆ ನಗರದ ಮಹಾತ್ಮಗಾಂಧೀ ಮೈದಾನದಿಂದ ಸೈಕಲ್ ಜಾಥಾ ನಡೆಯಲಿದೆ. ಜಾಥಾದಲ್ಲಿ 14 ವರ್ಷ ಮೇಲ್ಪಟ್ಟ ಪುರುಷರು, ಮಹಿಳೆಯರು, ಲಿಂಗತ್ವ ಅಲ್ಪಸಂಖ್ಯಾತರು, ಸಾರ್ವಜನಿಕರು, ವಿದ್ಯಾರ್ಥಿಗಳು, ಸರ್ಕಾರಿ ನೌಕರರು, ಅಧಿಕಾರಿಗಳು, ಸಂಘ ಸಂಸ್ಥೆಯ ಮುಖಂಡರು ಸೇರಿದಂತೆ ಇನ್ನಿತರರು ಭಾಗವಹಿಸಲು ಸೆ.14ರ ಸಂಜೆ 5ಗಂಟೆಯೊಳಗೆ ಹೆಸರನ್ನು https://docs.google.com/forms/d/e/1FAIpQLSenhrptGtVtdQU9vn6cu7qAlbBFdQ-ZW1cH5clBrCmYVtUQCw/viewform?usp=header ಲಿಂಕ್ ಮೂಲಕ ನೋಂದಾಯಿಸಿಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.13 ರಂದು ರಾಷ್ಟ್ರೀಯ ಲೋಕ ಅದಾಲತ್: ನ್ಯಾ. ಹೆಚ್.ಎ.ಸಾತ್ವಿಕ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 11 - ವ್ಯಾಜ್ಯ ಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳನ್ನು ತಕ್ಷಣ ಇತ್ಯರ್ಥಪಡಿಸುವ ಸಲುವಾಗಿ ಇಡೀ ಜಿಲ್ಲೆಗೆ ಸಂಬಂಧಿಸಿದಂತೆ ಸೆ.13 ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ತಿಳಿಸಿದ್ದಾರೆ.

ಅಂದು ಬೆಳಿಗ್ಗೆ 10 ಗಂ-ಟೆಗೆ ಜಿಲ್ಲಾ ನ್ಯಾಯಾಲಯದಲ್ಲಿ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ನಿಗದಿಪಡಿಸಲಾಗಿದ್ದು, ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಸಿವಿಲ್ ಮತ್ತು ಕ್ರೀಮಿನಲ್ (ರಾಜಿಯಾಗುವಂತಹ) ಮೊಕ್ಕದಮ್ಮೆಗಳನ್ನು, ಅಲ್ಲದೇ ಮೋಟಾರ ವಾಹನ ಕಾಯ್ದೆ, ಕುಟುಂಬ ನ್ಯಾಯಾಲಯದ ಪ್ರಕರಣಗಳು ಮತ್ತು ಎಲ್ಲಾ ಬಗೆಯ ಪ್ರಕರಣಗಳನ್ನು ಲೋಕ ಅದಾಲತ್ ಮುಖಾಂತರ ಇತ್ಯರ್ಥಗೊಳಿಸಲಾಗುವುದು.

ವಕೀಲರು, ಕಕ್ಷಿದಾರರು, ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಸದಾವಕಾಶವನ್ನು ಒದಗಿಸಲಾಗಿದ್ದು, ಎಲ್ಲಾ ವಕೀಲರು, ಕಕ್ಷಿದಾರರು, ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯಪೂರ್ವ ಎಲ್ಲಾ ಬಗೆಯ ಕೇಸುಗಳನ್ನು ಲೋಕ ಅದಾಲತ್ ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಇತ್ಯರ್ಥಪಡಿಸಿಕೊಳ್ಳುವಂತೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ-ರಿಂದ ಚರ್ಚ್ ಕಾಮಗಾರಿ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಸೆಪ್ಟೆಂಬರ್ 11-ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ರಾಯಚೂರ ಜಿಲ್ಲಾ ಪ್ರವಾಸದ ವೇಳೆಯಲ್ಲಿ ನಗರದ ರೈಲ್ವೆ ನಿಲ್ದಾಣದ ಪಕ್ಕದಲ್ಲಿರುವ ಮೆಥೋಡಿಸ್ಟ್ ಚರ್ಚಗೆ ಸೆಪ್ಟೆಂಬರ್ 11ರಂದು ಭೇಟಿ ನೀಡಿ ಕಾಮಗಾರಿ ವೀಕ್ಷಣೆ ಮಾಡಿದರು.ಈ ವೇಳೆ ಮಾತನಾಡಿದ ಅವರು 50 ಲಕ್ಷ ರೂ.ಗಳ ಅನುದಾನದಲ್ಲಿ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಹಾಗೂ ಗುಣಮಟ್ಟದಿಂದ ಪೂರ್ಣಗೊಳಿಸಬೇಕೆಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು.ರಾಯಚೂರು ತಾಲೂಕಿನ, ಉಡಮಗಾಲ ಖಾನಾಪೂರ ಗ್ರಾಮದ ಯೆಹೋವನ ಯುವಕ ಮಂಡಳಿ ಚರ್ಚ್ ದುರಸ್ತಿ ಮತ್ತು ನವೀಕರಣಕ್ಕಾಗಿ ಸಹಾಯಾನುದಾನ ಮಂಜೂರು ಮಾಡಬೇಕು. ಹಾಗೂ ತಾಲೂಕಿನ ತುಂಗಭದ್ರ ಕ್ಯಾಂಪ್ ಮೆಥೋಡಿಸ್ಟ್ ಚರ್ಚ್ ಕಾಂಪೌಂಡ್ ನಿರ್ಮಾಣಕ್ಕೆ ಅನುದಾನ ಬಿಡುಗಡೆಗೆ ಮಾಡುವಂತೆ ಈ ವೇಳೆ ಕ್ರೈಸ್ತ ಧರ್ಮದ ಮುಖಂಡರು ಮನವಿ ಮಾಡಿದರು.

# ಶ್ರೀಗಳು, ಜನಪ್ರತಿನಿಧಿಗಳು, ಗಣ್ಯರ ನಮನ
## ಸರ್ಕಾರಿ ಗೌರವದೊಂದಿಗೆ ಯೋಧ ರಮೇಶ ಅಂತ್ಯ ಸಂಸ್ಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.11–ಜಮ್ಮು–ಕಾಶ್ಮೀರದಶ್ರೀನಗರದಲ್ಲಿ ಸೋಮವಾರ ನಿಧನರಾಗಿದ್ದ ತಾಲೂಕಿನ ಶಿರೂರ ಪಟ್ಟಣದ ಯೋಧ ರಮೇಶ ನಾಗಪ್ಪ ಬದಾಮಿ ಅವರ ಪಾರ್ಥಿವ ಶರೀರದ ಅಂತ್ಯಸಂಸ್ಕಾರ ಹುಟ್ಟೂರು ಶಿರೂರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಗುರುವಾರ ನೆರವೇರಿತು.

ಶ್ರೀನಗರದಿಂದ ಬುಧವಾರ ಬೆಳಿಗ್ಗೆ ಬೆಂಗಳೂರಿಗೆ ವಿಶೇಷ ವಿಮಾನದಲ್ಲಿ ತರಲಾಗಿದ್ದ ರಮೇಶ ಮೃತದೇಹವನ್ನು ಬೆಂಗಳೂರಿನ ಬಿಎಸ್‌ಎಫ್ ಸೆಂಟರ್‌ನಲ್ಲಿರಿಸಿ ಗೌರವಾರ್ಪಣೆ ಸಲ್ಲಿಸಿದ ನಂತರ ಮಿಲಿಟರಿ ವಾಹನದಲ್ಲಿ ಸಂಜೆ ಬಾಗಲಕೋಟೆಗೆ ತರಲಾಗಿತ್ತು.

ಗುರುವಾರ ಬೆಳಿಗ್ಗೆ ಮಿಲಿಟರಿ ವಾಹನದಲ್ಲಿಯೇ ಮೃತದೇಹವನ್ನು ಶಿರೂರಿಗೆತರಲಾಯಿತು. ಸಂಗಮಕ್ರಾಸ್‌ನಿಂದ ಮಾಜಿ ಸೈನಿಕರು, ಪಟ್ಟಣದ ಯುವಕರು ಬೈಕ್ ರ್‍ಯಾಲಿಯ ಮೂಲಕ ಸಿದ್ದೇಶ್ವರ ಪ್ರೌಢಶಾಲೆಯ ಮೈದಾನಕ್ಕೆ ತಂದ ರಮೇಶ ಬದಾಮಿ ಅವರ ಪಾರ್ಥಿವಶರೀರವನ್ನು ಸಾರ್ವಜನಿಕರ ದರ್ಶನಕ್ಕೆ ಇಡಲಾಗಿತ್ತು.

ಜಿಲ್ಲಾಡಳಿತದ ಪರವಾಗಿ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ,ತಹಸೀಲ್ದಾರ ವಾಸುದೇವ ಸ್ವಾಮಿ ರಮೇಶ ಪಾರ್ಥಿವ ಶರೀರಕ್ಕೆ ಪುಷ್ಪಗುಚ್ಛವಿರಿಸಿ ಗೌರವ ನಮನ ಸಲ್ಲಿಸಿದರು. ಕೂಡಲಸಂಗಮದ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಶ್ರೀಗಳು, ಸಂಸದ ಪಿ.ಸಿ.ಗದ್ದಿಗೌಡರ, ಶಾಸಕ ಎಚ್.ವಾಯ್.ಮೇಟಿ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಮಾಜಿ ಶಾಸಕ ವೀರಣ್ಣ ಚರಂತಿಮಠ, ಸಿದ್ದೇಶ್ವರ ವಿದ್ಯಾವರ್ಧಕ ಸಂಸ್ಥೆಯ ಉಪಾಧ್ಯಕ್ಷ ಸಿದ್ದಪ್ಪ ಬಿಲ್ಲಾರ, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ಸೇರಿದಂತೆ ಅನೇಕ ಗಣ್ಯರು, ಮಾಜಿ ಸೈನಿಕರ ಸಂಘಟನೆಗಳ ಪದಾಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಪುಷ್ಪಗುಚ್ಛವಿರಿಸಿ ಅಂತಿಮ ನಮನ ಸಲ್ಲಿಸಿದರು.

ರಮೇಶ ಬದಾಮಿ ಅವರ ತಾಯಿ ಶಾಂತವ್ವ, ತಂದೆ ನಾಗಪ್ಪ, ಪತ್ನಿ ಕಮಲಾ, ಪುತ್ರ ವೀರೇಶ ಹಾಗೂ ಕುಟುಂಬಸ್ಥರು ಪಾರ್ಥಿವ ಶರೀರಕ್ಕೆ ಪುಷ್ಪ ಸಮರ್ಪಿಸಿ ಅಶ್ರುತರ್ಪಣದ ಮೂಲಕ ಅಂತಿಮ ನಮನ ಸಲ್ಲಿಸಿದರು. ನಂತರ ಜಿಲ್ಲಾ ಅರೆಸೇನಾ ಪಡೆಯ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಸಿದ್ಧಲಿಂಗಯ್ಯ ವಸ್ತ್ರದ, ಪಟ್ಟಣದ ಪ್ರಮುಖರಾದ ರಂಗಪ್ಪ ಮಳ್ಳಿ, ಮಳಿಯಪ್ಪ ಗಾಣಿಗೇರ, ಪಟ್ಟಣ ಪಂಚಾಯತಿ ನಾಮನಿರ್ದೇಶನ ಸದಸ್ಯರಾದ ಹನಮಂತ ಆಡಿನ, ಸಿದ್ದಪ್ಪ ಗಾಳಿ, ಜಗದೀಶ ದೇಸಾನಿ, ಎಸ್.ಬಿ.ನಡುವಿನಮನಿ ಸೇರಿದಂತೆ ಅಪಾರ ಸಂಖ್ಯೆಯ ಜನ ಸರದಿ ಸಾಲಿನಲ್ಲಿ ಬಂದು ಅಂತಿಮ ನಮನ ಸಲ್ಲಿಸಿದರು.

**ಹೆತ್ತವರ ಆಕ್ರಂಧನ**

ರಮೇಶ ಬದಾಮಿ ಅವರ ಪ್ರಾರ್ಥಿವ ಶರೀರವನ್ನು ಪ್ರೌಢಶಾಲೆಯ ಮೈದಾನಕ್ಕೆ ತರುತ್ತಿದ್ದಂತೆ ತಂದೆ, ತಾಯಿ, ಪತ್ನಿ, ಪುತ್ರ, ಸಹೋದರ, ಸಹೋದರಿಯರ ಆಕ್ರಂಧನ ಜೋರಾಗಿ–ತ್ತು. ಕುಟುಂಬದವರ ಆಕ್ರಂಧನ ನೆರೆದ ಜನರ ಕಣ್ಣಾಲಿಗಳನ್ನು ತೇವಗೊಳಿಸಿದವು.

11 ಗಂಟೆಗೆ ಅಲಂಕರಿಸಿದ ಟ್ರ್ಯಾಕ್ಟರ್ ನಲ್ಲಿ ರಮೇಶ ಬದಾಮಿ ಅವರ ಮೃತದೇಹದ ಮೆರವಣಿಗೆ ಬಾಗಲಕೋಟೆ ಜಿಲ್ಲಾ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗೌರವಾಧ್ಯಕ್ಷ ಅರ್ಜುನ ಕೋರಿ, ಅಧ್ಯಕ್ಷ ಗದಿಗೆಪ್ಪ ಅರಕೇರಿ ನೇತೃತ್ವದಲ್ಲಿ ಶಿರೂರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆಯಿತು.

12 ಗಂಟೆಯ ವೇಳೆಗೆ ಪಟ್ಟಣದ ಬಸ್ ನಿಲ್ದಾಣದ ಬಳಿಯ ಯೋಧರ ಸಮಾಧಿ ಸ್ಥಳದಲ್ಲಿ

ಬೆಂಗಳೂರ ಬಿಎಫ್ ಸೆಂಟರ್ ನ ಕಮಾಂಡರ್ ಲಾಲಸಾಬ ನದಾಫ ನೇತೃತ್ವದ ಜವಾನರು ಮೂರು ಬಾರಿ ಕುಶಾಲ ತೋಪು ಹಾರಿಸಿ ಗೌರವ ವಂದನೆ ಸಲ್ಲಿಸಿದ ನಂತರ ವಿಧಿವಿಧಾನಗಳೊಂದಿಗೆ ಅಂತ್ಯ ಸಂಸ್ಕಾರ ನೆರವೇರಿತು.

# ಮಕ್ಕಳ ಬದುಕಿನಲ್ಲಿ ಅರಿವಿನ ಬೆಳಕು ಮೂಡಿಸುವವರು ಶಿಕ್ಷಕರು:ಶಿವಕುಮಾರ ಶ್ರೀಗಳು




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಸೆ.11: ಶಿಕ್ಷಕರು ನೈತಿಕತೆಯನ್ನು ಪ್ರಾಮಾಣಿಕತೆಯನ್ನು ಕಾಯ್ದುಕೊಳ್ಳಬೇಕು ನಮ್ಮ ದೇಶ ಶಿಕ್ಷಕರಿಗೆ ಉನ್ನತ ಸ್ಥಾನ ನೀಡಿದೆ. ಇಂದಿನ ಜಗತ್ತಿನಲ್ಲಿ ಬೇರೆ ಯಾವುದೂ ಶಕ್ತಿಯಲ್ಲ ಜ್ಞಾನವೇ ದೊಡ್ಡ ಶಕ್ತಿ ನಮ್ಮ ದೇಶ ವಿದ್ಯೆಗೆ ಬಹಳ ಪ್ರಾಮುಖ್ಯ ಕೊಟ್ಟಿದೆ ವಿದ್ಯೆ ಎನ್ನುವುದು ದೊಡ್ಡ ಆಸ್ತಿ ಎಂದು ಕಪ್ಪತ್ ಗುಡ್ಡದ ಶಿವಕುಮಾರ ಶ್ರೀಗಳು ಹೇಳಿದರು

ಇತ್ತೀಚಿಗೆ ಭಾಗ್ಯನಗರ ರಸ್ತೆಯ ಪಾನಗಂಟಿ ಕಲ್ಯಾಣ ಮಂಟಪದಲ್ಲಿ ಕೊಪ್ಪಳ ತಾಲೂಕ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟ (ಕುಸ್ಮಾ) ಇದರ 20ನೇ ವರ್ಷದ ಸಂಭ್ರಮಚರಣೆ ಹಾಗೂ ಶಿಕ್ಷಕರ ದಿನಾಚರಣೆ ಜೊತೆಗೆ ಉತ್ತಮ ಶಿಕ್ಷಕ ಶಿಕ್ಷಕಿ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಸಾನಿಧ್ಯವನ್ನು ವಹಿಸಿಕೊಂಡು ಮಾತನಾಡುತ್ತಿದ್ದರು. ಜ್ಞಾನವೇ ದೊಡ್ಡ ಶಕ್ತಿ. ಮಕ್ಕಳ ಬದುಕಿನಲ್ಲಿ ಅರಿವಿನ ಬೆಳಕು ಬಿತ್ತುವವರು ಶಿಕ್ಷಕರು ರಾಜಕಾರಣಿಗಳು ದೇಶವನ್ನು ಕಟ್ಟುತ್ತೇವೆ ಅನ್ನಬಹುದು ಆದರೆ ನಿಜವಾಗಿ ದೇಶವನ್ನು ಕಟ್ಟುವವರು ಗುರುಗಳು. ರಾಜಕಾರಣಿಗಳು ಆಡಳಿತ ಮಾಡಬಹುದು ಅಷ್ಟೇ ಆದರೆ ನಿಜವಾಗಿ ದೇಶ ಕಟ್ಟುವ ಕೆಲಸ ಮಾಡುವವರು ಶಿಕ್ಷಕರು. ಶಿಕ್ಷಕರಿಗೆ ತಮ್ಮ ವೃತ್ತಿಯ ಬಗ್ಗೆ ಗೌರವ ಅಭಿಮಾನ ಇರಲಿ ಮಕ್ಕಳಿಗೆ ವಿದ್ಯೆ ಕಲಿಸುವುದು ಸರಳವಲ್ಲ ಅದು ಒಂದು ದೊಡ್ಡ ತಪಸ್ಸು. ಶಿಕ್ಷಕರಿಗೆ ಭಾಷೆಯ ಮೇಲೆ ಪ್ರಭುತ್ವ ಬರಲು ವ್ಯಾಕರಣ ಕಲಿಯಬೇಕು ಮತ್ತು ಮಕ್ಕಳಿಗೆ ವ್ಯಾಕರಣವನ್ನು ಕಲಿಸಬೇಕು ವಿದ್ಯೆಯಿಂದ ಬಂದ ಸೌಂದರ್ಯ ಅಪೂರ್ವದದ್ದು ಇನ್ನೊಬ್ಬರ ಕಣ್ಣೀರು ಒರೆಸುವ ಸದ್ವಿತೆಯನ್ನು ಕಲಿಸಬೇಕು ಹಿಂದಿನ ದಿನಮಾನಗಳಲ್ಲಿ ಕಣ್ಣೀರು ಒರೆಸುವ ಅಗತ್ಯ ಬಹಳ ಇದೆ. ವಿದ್ಯೆಗೆ ಗುಪ್ತ ಧನ ಎನ್ನುತ್ತಾರೆ. ಮಕ್ಕಳಿಗೆ ಅಕ್ಷರ ಕಲಿಸಿ ಆ ಅಕ್ಷರದ ಬೆಳಕಿನ ಮೂಲಕವಾಗಿ ಅರಿವಿನ ಬೆಳಕನ್ನು ನಾವು ಮಕ್ಕಳಿಗೆ ತಂದು ಕೊಡುವದಾದರೆ ಅದಕ್ಕಿಂತ ಹೆಚ್ಚಿನ ಸಾರ್ಥಕತೆ ಏನು ಇಲ್ಲ ಎಂದು ಹೇಳಿದರು.

ಸರ್ವಪಲ್ಲಿ ರಾಧಾಕೃಷ್ಣನ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಶಾಸಕ ರಾಘವೇಂದ್ರ ಹಿಟ್ನಾಳ್ ಕಲ್ಯಾಣ ಕರ್ನಾಟಕದಲ್ಲಿ ಶಿಕ್ಷಣಕ್ಕಾಗಿ ಹೆಚ್ಚು ಅನುದಾನ ಖರ್ಚು ಮಾಡಲಾಗುತ್ತಿದೆ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವುದಕ್ಕಾಗಿ ಸತತ ಪ್ರಯತ್ನ ಮಾಡುತ್ತಿದ್ದೇವೆ ಆದರೂ ಸಹ ನಮ್ಮ ಜಿಲ್ಲೆಯ ಫಲಿತಾಂಶ ನೋಡಿದರೆ ದು–ಃಖಕರ ಸಂಗತಿ ಆಗಿದೆ. ಶಿಕ್ಷಕರು ದೇಶದ ನಿರ್ಮಾಪಕರು. ಉನ್ನತ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ನಾವು ಸಾಕಷ್ಟು ಹಿಂದುಳಿದಿದ್ದೇವೆ. ಕುಸ್ಮಾ ಸಂಘಟನೆ ಕ್ರಿಯಾಶೀಲವಾಗಿ ಕೆಲಸ ಮಾಡುತ್ತಿದೆ. ನಿರಂತರವಾಗಿ ನಾವು ಸಂಘಟನೆಯ ಜೊತೆಗಿದ್ದೇವೆ ಕೆಕೆಆರ್‌ಡಿಬಿ ಸಭೆಯಲ್ಲೂ ಸಹ ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳಿಗೆ ಸಹಾಯ ನೀಡುವ ಕುರಿತು ಅನುದಾನ ನೀಡುವ ಕುರಿತು ಚರ್ಚೆ ಮಾಡಿದ್ದೇವೆ ಇದರ ಬಗ್ಗೆ ಸಚಿವರೊಂದಿಗೆ ಹಾಗೂ ಮುಖ್ಯಮಂತ್ರಿಗಳ ಜೊತೆಗೆ ಚರ್ಚೆ ಮಾಡುತ್ತೇನೆ ಖಾಸಗಿ ಅನುದಾನ ರಹಿತ ಶಾಲೆಗಳಿಗೆ ಅನುದಾನ ನೀಡಿದರೆ ಸಾಕಷ್ಟು ಶಕ್ತಿ ಬರುತ್ತದೆ ಇದಕ್ಕಾಗಿ ನಾನು ಸಹ ಒತ್ತಾಯ ಮಾಡುತ್ತೇನೆ ಎಂದು ಹೇಳಿದರು.

ಇವತ್ತು ಸರ್ಕಾರಿ ಶಾಲೆಗಳನ್ನು ಮುಚ್ಚುವಂತ ಪರಿಸ್ಥಿತಿ ಬಂದಿದೆ. ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಹೈಸ್ಕೂಲ್ ಮಕ್ಕಳಿಗೆ ಓದಲು ಬರುತ್ತಿಲ್ಲ ಎನ್ನುವುದು ವಿಪರ್ಯಾಸದ ಸಂಗತಿ. ಸರ್ಕಾರಿ ಶಾಲೆಗಳ ಗುಣಮಟ್ಟ ಕಡಿಮೆಯಾಗುತ್ತಿದೆ. ಪ್ರತಿಯೊಬ್ಬ ತಂದೆ ತಾಯಿ ಮಕ್ಕಳು ಉತ್ತಮವಾದ ವಿದ್ಯೆಯನ್ನು ಪಡೆಯಲಿ ಮಾರ್ಕ್ಸ್ ಗಳಿಸಲಿ ಎಂದು ಬಯಸುತ್ತಾರೆ. ಖಾಸಗಿ ಶಾಲೆಯಲ್ಲಿ ನೀಡುವ ಉತ್ತಮ ಶಿಕ್ಷಣಕ್ಕೆ ಪಾಲಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳಿಸುತ್ತಿದ್ದಾರೆ. ಖಾಸಗಿ ಶಾಲೆಯ ಆಡಳಿತ ಮಂಡಳಿಯವರು ಬಡವರ ಮಕ್ಕಳಿಗೂ ಅವಕಾಶ ನೀಡಲಿ ಎಂದು ಮುಖ್ಯ ಅತಿಥಿಯಾಗಿದ್ದ ವಿಧಾನ ಪರಿಷತ್ ಸದಸ್ಯ ಹೇಮಲತಾ ನಾಯಕ್ ಹೇಳಿದರು

ಈಶ್ವರಿ ಬ್ರಹ್ಮಕುಮಾರಿಯ ಯೋಗಿನಿ ಅಕ್ಕ ಹಾಗೂ ಜಬೀವುಲ್ಲಾ ಜಾವೇದ್ ವಿಶೇಷ ಉಪನ್ಯಾಸ ನೀಡಿದರು. . ಇದೇ ಸಂದರ್ಭದಲ್ಲಿ ಉತ್ತಮ ಶಿಕ್ಷಕ ಹಾಗೂ ಶಿಕ್ಷಕಿ ಪ್ರಶಸ್ತಿಯನ್ನು ಪ್ರಧಾನ ಮಾಡಲಾಯಿತು. ವಿಶೇಷ ಸಾಧನೆಗೈದ ಆಕ್ಸಫರ್ಡ ಶಾಲೆಯ ಸುಮನ್ ಹಾಗೂ ಜ್ಞಾನ ಗಂಗೋತ್ರಿ ಶಾಲೆಯ ಶಾಲೆಯ ಶರಣಪ್ಪ ಮಾಮನಿವರಿಗೆ ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ್ ಗುಪ್ತ ,ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ರೇಣುಕಾ ಏಜೆನ್ಸಿಯ ಪ್ರವೀಣ, ಮಾಜಿ ಅಧ್ಯಕ್ಷ ಅಲೀಮುದ್ದಿನ್, ಆಕ್ಸಪರ್ಡ ಸಂಸ್ಥೆಯ ಸುಮನ್, ತಾಲೂಕ ಕಾರ್ಯದರ್ಶಿ ನಾಗರಾಜ್, ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು , ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕುಸ್ಮಾ ಗೌರವಾಧ್ಯಕ್ಷ ರಾಘವೇಂದ್ರ ಪಾನಘಂಟಿ ವಹಿಸಿದ್ದರು. ತಾಲೂಕ ಅಧ್ಯಕ್ಷ ಶಾಹಿದ್ ತಹಸಿಲ್ದಾರ್ ಉಪಸ್ತಿತರಿದ್ದರು. ಸುರೇಶ ಕುಂಬಾರ್, ಮುಲ್ಲಾರ್ ಕಾರ್ಯಕ್ರಮ ನಿರೂಪಿಸಿದರು.

# ಪಿಡಿಒಗಳು ವಿನೂತನ ಕಾರ್ಯಗಳಿಂದ ಜಿಲ್ಲೆಯನ್ನು ರಾಜ್ಯಮಟ್ಟದಲ್ಲಿ ಪ್ರತಿನಿಧಿಸುವಂತೆ ಮಾಡಬೇಕು:ಸಿಇಓ ಡಾ.ಗಿರೀಶ ದಿಲೀಪ್ ಬದೋಲೆ




ಬೀದರ,ಸೆ.11:ಗ್ರಾಮೀಣಾಭಿವೃದ್ಧಿ ಮತ್ತುಪಂಚಾಯತ್‌ರಾಜ್ ಇಲಾಖೆಯು ಗ್ರಾಮೀಣ ಜನರೊಂದಿಗೆ ನಿತ್ಯ ವ್ಯವಹರಿಸುವ ಇಲಾಖೆಯಾಗಿದ್ದು ಪಿಡಿಒಗಳು ಗ್ರಾಮೀಣ ಪ್ರದೇಶದ ಜನತೆಯ ಸಮಸ್ಯೆಗಳಿಗೆ ಸ್ಪಂದನಶೀಲರಾಗಿ ಪ್ರತಿಕ್ರಿಯಿಸಬೇಕು. ಗ್ರಾಮ ಪಂಚಾಯತಿಗಳು ಜನರ ಪಾಲ್ಗೊಳ್ಳುವಿಕೆಯ ಜನಾಡಳಿತದ ಕೇಂದ್ರಗಳಾಗಬೇಕು. ಗ್ರಾಮೀಣ ಪ್ರದೇಶದ ಪ್ರತಿಯೊಬ್ಬರೂ ಗ್ರಾಮ ಪಂಚಾಯತಿಯ ಬಗ್ಗೆ " ನಮ್ಮ ಪಂಚಾಯತಿ, ನಮ್ಮ ಹೆಮ್ಮೆ" ಎಂದು ಭಾವಿಸುವಂತೆ ಜನಸ್ನೇಹಿಗಳಾಗಿ ಕರ್ತವ್ಯ ನಿರ್ವಹಿಸಬೇಕು" ಎಂದು ಬೀದರ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಿವಿಮಾತು ಹೇಳಿದರು. ಅವರಿಂದು ಔರಾದ್ ತಾಲೂಕಾ ಪಂಚಾಯತಿಯ ಸಭಾಂಗಣದಲ್ಲಿ ನಡೆದ ಜಿಲ್ಲೆಯ ಔರಾದ ಮತ್ತು ಕಮಲನಗರ ತಾಲೂಕುಗಳ ಪಿಡಿಒಗಳು ಮತ್ತು ಅನುಷ್ಠಾನ ಇಲಾಖೆಯ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿದ್ದರು.

ಗ್ರಾಮೀಣಾಭಿವೃದ್ಧಿ ಮತ್ತುಪಂಚಾಯತ್ ರಾಜ್ ಇಲಾಖೆಯ ಎರಡು ತಾಲೂಕುಗಳ ಎಲ್ಲ ಅಭಿವೃದ್ಧಿ ಯೋಜನೆಗಳ ಪ್ರಗತಿಪರಿಶೀಲನೆ ಮಾಡುತ್ತಾ, ಗಿರೀಶ ದಿಲೀಪ್ ಬದೋಲೆಯವರು 'ತೆರಿಗೆ ವಸೂಲಾತಿಯ ಸಂದರ್ಭದಲ್ಲಿ ಗ್ರಾಮೀಣ ಜನತೆಯ ಕಷ್ಟಸುಖಗಳನ್ನು ಅರ್ಥಮಾಡಿಕೊಂಡು ತೆರಿಗೆ ವಸೂಲಿ ಮಾಡಿ. ಮಳೆಯ ಕಾರಣದಿಂದ ಕೆಲಸ ಇಲ್ಲದೆ ಇರುವಬಡವರು ತೆರಿಗೆ ಕಟ್ಟಲು ಕಾಲಾವಕಾಶ ಕೇಳಿದರೆ ಅದಕ್ಕೆ ಸ್ಪಂದಿಸಿ. ಕಾರ್ಖಾನೆಗಳು, ಸಣ್ಣಉದ್ಯಮಗಳು, ಅಂಗಡಿಗಳು, ಹೊಟೆಲ್‌ಗಳು, ವೈನ್‌ಶಾಪ್‌ಗಳಂತಹ ವಾಣಿಜ್ಯ ಸಂಸ್ಥೆಗಳಿಂದ ತೆರಿಗೆ ವಸೂಲುಮಾಡಿ. ವಸೂಲಾದ ತೆರಿಗೆಯಲ್ಲಿ ಗ್ರಂಥಾಲಯ ಸೆಸ್ ತುಂಬಬೇಕು. ನರೇಗಾ ಯೋಜನೆಯಡಿ ಕೂಲಿಕಾರರಿಗೆ ಕೆಲಸ ಕೊಡಬೇಕು. ಎನ್‌ಎಂಎಂಎಸ್ ಫೋಟೋಗಳು ದುರ್ಬಳಕೆಆಗಬಾರದು. ಕಾಮಗಾರಿಗಳ ಪೂರ್ಣಗೊಂಡ ಸರ್ಟಿಫಿಕೇಟ್ ಹಾಕಬೇಕು. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಬಾಕಿ ಫಲಾನುಭವಿಗಳ ಆಯ್ಕೆ ಮತ್ತು ಜಿಪಿಎಸ್ ಪ್ರಕ್ರಿಯೆಗಳನ್ನು ತ್ವರಿತವಾಗಿ ಮುಗಿಸಬೇಕು. ಸ್ವಚ್ಛಭಾರತಯೋಜನೆಯಡಿ ಪ್ರಗತಿಯಲ್ಲಿ ಇರುವ ವೈಯಕ್ತಿಕ ಶೌಚಾಲಯಗಳನ್ನು ಶೀಘ್ರವಾಗಿ ಮುಕ್ತಾಯಗೊಳಿಸಬೇಕು. ಬೂದು ನೀರುನಿರ್ವಹಣಾಘಟಕಗಳಕಾಮಗಾರಿಗಳನ್ನು ಬೇಗ ಪ್ರಾರಂಭಿಸಬೇಕು ಮತ್ತು ಪ್ಲಾಸ್ಟಿಕ್ ವೇಸ್ಟ್ ಮ್ಯಾನೇಜ್ ಮೆಂಟ್ ,ಮಲತ್ಯಾಜ್ಯ ವಿಲೇವಾರಿ ಘಟಕಗಳ ನಿರ್ಮಾಣ ಕಾರ್ಯ ಕಾಲಮಿತಿಯಲ್ಲಿ ಮುಗಿಸಬೇಕು' ಎಂದು ಔರಾದ ಮತ್ತು ಕಮಲನಗರ ತಾಲೂಕುಗಳ ಪಿಡಿಒಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಅಭಿವೃದ್ಧಿ ಯೋಜನೆಗಳನ್ನು ಕಾಲ ಮಿತಿಯಲ್ಲಿ ಮುಕ್ತಾಯಗೊಳಿಸುವ ಹಾಗೂ ಸರಕಾರದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾಕ್ಟರ್ ಗಿರೀಶ ದಿಲೀಪ್ ಬದೋಲೆಯವರು ಜಿಲ್ಲಾ ಪಂಚಾಯತಿಯ ಹಿರಿಯ ಅಧಿಕಾರಿಗಳೊಂದಿಗೆ ತಾಲೂಕುಗಳ ಪ್ರಗತಿ ಪರಿಶೀಲನೆಗೆ " ಪ್ರಗತಿ–ಪರಿವರ್ತನೆ " ಎನ್ನುವ ನೂತನ ಕಾರ್ಯಕ್ರಮ ಹಮ್ಮಿಕೊಂಡು ವಾರಕ್ಕೊಮ್ಮೆ ತಾಲೂಕುಗಳಿಗೆ ಭೇಟಿ ನೀಡುವ ಉದ್ದೇಶ ಹೊಂದಿದ್ದು ಅದರ ಅಂಗವಾಗಿ ಇಂದು ಔರಾದ ತಾಲೂಕಿನಲ್ಲಿ ಔರಾದ ಮತ್ತು ಕಮಲನಗರ ತಾಲೂಕುಗಳ ಪ್ರಗತಿ ಪರಿಶೀಲನೆ ಮಾಡಲಾಯಿತು.

ಇಂದಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಉಪಕಾರ್ಯದರ್ಶಿ ಮುಕ್ಕಣ್ಣ ಕರಿಗಾರ, ಯೋಜನಾ ನಿರ್ದೇಶಕ ಸೂರ್ಯಕಾಂತ ಬಿರಾದರ, ಸಹಾಯಕ ಕಾರ್ಯದರ್ಶಿ ಬೀರೇಂದ್ರಸಿಂಗ್ ಠಾಕೂರ್, ಆಡಳಿತ ವಿಭಾಗದ ಸಹಾಯಕ ನಿರ್ದೇಶಕ ಜಯಪ್ರಕಾಶ ಚೌಹಾಣ್, ಔರಾದ 'ತಾಪಂಯ ಕಾರ್ಯನಿರ್ವಾಹಕ ಅಧಿಕಾರಿ ಕಿರಣಪಾಟೀಲ್, ಕಮಲನಗರ ತಾಲೂಕಾ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತ್ರಾಯ ಕೌಟಗೆ, ಸಹಾಯಕ ನಿರ್ದೇಶಕ ಶಿವಕುಮಾರ್ ಘಾಟೆ, ನರೇಗಾ ಎಡಿಪಿಸಿ ದೀಪಕ್ ಕಡಿಮನಿ, ಎರಡು ತಾಲೂಕುಗಳ ಪಂಚಾಯತ್ ರಾಜ್ ಇಂಜನಿಯರಿಂಗ್ ಮತ್ತು ಗ್ರಾಮೀಣ ಕುಡಿಯುವ ನೀರು ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿವಿಧ ಇಲಾಖೆಗಳ ತಾಲೂಕಾ ಮಟ್ಟದ ಅಧಿಕಾರಿಗಳು, ಎರಡು ತಾಲೂಕುಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಪಾಲ್ಗೊಂಡಿದ್ದರು. ಶಿವಕುಮಾರ್ ಘಾಟೆಯವರು ಕಾರ್ಯಕ್ರಮವನ್ನು ನಿರ್ವಹಿಸಿದರು.

# ತುರ್ತು ನೆರವಿನ ಸಂಖ್ಯೆಗಳ ಸ್ಟಿಕ್ಕರ್ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 11 : ಬೀದರ್ ಬೆಟರ್‌ಮೆಂಟ್ ಫೌಂಡೇಷನ್‌ನಿಂದ ಹೊರ ತರಲಾದ ತುರ್ತು ನೆರವಿನ ಸಂಖ್ಯೆಗಳ ಸ್ಟಿಕ್ಕರ್ ಅನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ನಗರದಲ್ಲಿ ಗುರುವಾರ ಬಿಡುಗಡೆ ಮಾಡಿದರು.

ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ನೆರವಾಗುವ ದಿಸೆಯಲ್ಲಿ ಫೌಂಡೇಷನ್ ತುರ್ತು ಸಂಖ್ಯೆಗಳ ಸ್ಟಿಕ್ಕರ್ ಹೊರ ತಂದಿರುವುದು ಪ್ರಶಂಸನೀಯ ಎಂದು ಅವರು ಹೇಳಿದರು.

ಫೌಂಡೇಷನ್‌ನಿಂದ ಮನೆ ಮನೆಗಳಲ್ಲಿ ಅಂಟಿಸಲು ತುರ್ತು ನೆರವಿನ ಸಂಖ್ಯೆಗಳ ಒಟ್ಟು 10 ಸಾವಿರ ಸ್ಟಿಕ್ಕರ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಫೌಂಡೇಷನ್ ಅಧ್ಯಕ್ಷ ಡಾ.ಅಬ್ದುಲ್ ಖದೀರ್ ತಿಳಿಸಿದರು.

ಸ್ಟಿಕ್ಕರ್ ಪೊಲೀಸ್ ಠಾಣೆಗಳು, ಆಸ್ಪತ್ರೆ, ಆಂಬುಲೆನ್ಸ್, ಮಹಿಳಾ ಸಹಾಯವಾಣಿ,

ರಾಷ್ಟ್ರೀಯ ಟೆಲಿ ಮೆಂಟಲ್ ಹೆಲ್ತ್ ಕಾರ್ಯಕ್ರಮ, ಜೆಸ್ಕಾಂ, ಏರ್‌ಪೋರ್ಟ್, ಮಹಾನಗರ

ಪಾಲಿಕೆ ಸೇರಿದಂತೆ ಮಹತ್ವದ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಿದೆ ಎಂದು ತಿಳಿಸಿದರು.

ತುರ್ತು ಸಂಖ್ಯೆಗಳು ಕಳ್ಳತನ, ಅಪಘಾತ, ಅನಾರೋಗ್ಯ ಸೇರಿದಂತೆ ವಿವಿಧ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಸಹಕಾರಿಯಾಗಲಿವೆ. ಕಾರಣ, ಸಾರ್ವಜನಿಕರು ಮನೆಯ ಗೋಡೆ, ಬಾಗಿಲು ಮತ್ತಿತರ ಗಮನ ಸೆಳೆಯುವ ಸ್ಥಳಗಳಲ್ಲಿ ಸ್ಟಿಕ್ಕರ್‌ಗಳನ್ನು ಅಂಟಿಸಬೇಕು ಎಂದು ಕೋರಿದರು. ಫೌಂಡೇಷನ್‌ನ ಡಾ. ಮಕ್ಸೂದ್ ಚಂದಾ, ಮುಹಮ್ಮದ್ ರಫಿಕ್ ಅಹಮ್ಮದ್, ಮುಹಮ್ಮದ್ ಹುಸೇನಿ, ಮುಕ್ತಾರ್ ಅಹಮ್ಮದ್, ಹಾಮೇದ್ ಖಾದ್ರಿ, ತಾಹ ಕಲೀಮುಲ್ಲಾ ಇದ್ದರು.

ಇದೇ ವೇಳೆ ಬೀದರ್ ಬೆಟರ್‌ಮೆಂಟ್ ಫೌಂಡೇಷನ್ ವತಿಯಿಂದ ಕೈಗೊಳ್ಳಲಾದ ವಿವಿಧ ಸಾಮಾಜಿಕ ಕಾರ್ಯಗಳ ಸಂಕ್ಷಿಪ್ತ ವರದಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರಿಗೆ ಸಲ್ಲಿಸಲಾಯಿತು.

# ಮನೆಗಳ್ಳತನ: ಆರೋಪಿ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸೆ.11: ತಾಲ್ಲೂಕಿನ ತಾಡತೆಗನೂರಿನಲ್ಲಿ ಹಾಡಹಗಲೇ ಕುರಿಗಾರ ಬಸವರಾಜ್ ತಂದೆ ಗುರಪ್ಪ ಪೂಜಾರಿ ಅವರ ಮನೆಯಲ್ಲಿನ ಅಲಮಾರಿಯಲ್ಲಿನ ಸುಮಾರು 3,62,500ರೂ.ಗಳ ಮೌಲ್ಯದ ಚಿನ್ನಾಭರಣ ಮತ್ತು 1,75,000ರೂ.ಗಳ ನಗದು ಹಣ ಕಳ್ಳತನ ಮಾಡಿ ಪರಾರಿಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಫರತಾಬಾದ್ ಠಾಣೆಯ ಪೋಲಿಸರು ಪೊ–ಕ್ಸೋ ಪ್ರಕರಣದ ಆರೋಪಿಯನ್ನು ಬಂಧಿಸಿದ್ದಾರೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿ ತಾಲ್ಲೂಕಿನ ವರ್ಕನಹಳ್ಳಿ ಗ್ರಾಮದ ನಿವಾಸಿ ಜಗದೀಶ್ ತಂದೆ ಜ್ಯೋತೆಪ್ಪ ಬುಳ್ಳಾ (23) ಎಂಬಾತನನ್ನು ಬಂಧಿಸಲಾಗಿದೆ. ಕಳ್ಳತನ ಮಾಡಿದ್ದನ್ನು ಆರೋಪಿ ವಿಚಾರಣೆಯ ವೇಳೆ ಒಪ್ಪಿದ್ದಾನೆ. ಬಂಧಿತನಿಂದ ಕಳ್ಳತನ ಮಾಡಿದ ಒಟ್ಟು 3,22,000ರೂ.ಗಳ ಮೌಲ್ಯದ 33 ಗ್ರಾಮ್ ತೂಕದ ಬಂಗಾರದ ಆಭರಣಗಳು ಹಾಗೂ 243 ಗ್ರಾಮ್ ಬೆಳ್ಳಿಯ ಆಭರಣಗಳನ್ನು ಜಪ್ತಿ ಮಾಡಿಕೊಂಡಿದ್ದು, ಆರೋಪಿಯನ್ನು ಬಂಧಿಸಿ ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ ಎಂದರು.

ಆರೋಪಿಯು ಸರ್ಕಾರಿ ಉದ್ಯೋಗ ಪಡೆಯಲು ಯತ್ನಿಸುತ್ತಿದ್ದ. ಅಲ್ಲದೇ ಆರೋಪಿಯು ಈ ಮೊದಲು ಫರತಾಬಾದ್ ಠಾಣೆಯಲ್ಲಿ ಅಪಹರಣ ಮತ್ತು ಪೋಕ್ಸೋ ಪ್ರಕರಣದಲ್ಲಿನ ಬಂಧಿತ ಆರೋಪಿಯಾಗಿದ್ದಾನೆ ಎಂದು ಹೇಳಿದರು.

ಕುರಿಗಾರ ಬಸವರಾಜ್ ಪೂಜಾರಿ ಅವರು ದೂರು ಸಲ್ಲಿಸಿ, ಮನೆಯ ಅಲಮಾರಿಯಲ್ಲಿದ್ದ 2 ಲಕ್ಷರೂ.ಗಳ ಮೌಲ್ಯದ 5 ಗ್ರಾಮ್ ಬಂಗಾರದ ಐದು ಉಂಗುರುಗಳು, 60,000ರೂ.ಗಳ ಮೌಲ್ಯದ ಏಳು ಬಂಗಾರದ ಬೋರಮಳಾ, 60,000ರೂ.ಗಳ ಮೌಲ್ಯದ 6 ಗ್ರಾಮ್ ಬಂಗಾರದ ಚಿಕ್ಕ ಸರಗಳು, 10,000ರೂ.ಗಳ ಮೌಲ್ಯದ 2 ಗ್ರಾಮ್ ತೂಕದ ಜುಮಕಿ, 8000ರೂ.ಗಳ ಮೌಲ್ಯದ ಒಂದು ಗ್ರಾಮ್ ಕಿವಿಮುರು, 4000ರೂ.ಗಳ ಮೌಲ್ಯದ ಅರ್ಧ ಗ್ರಾಮ್ ಬಂಗಾರದ ಕಿವಿಕಡ್ಡಿ, 80000ರೂ.ಗಳ ಮೌಲ್ಯದ ಒಂದು ಗ್ರಾಮ್‌ನ ಮೂರು ಬಿಗಡಿ ಕಡ್ಡಿಗಳು, 12,500ರೂ.ಗಳ ಮೌಲ್ಯದ 25 ತೊಲಿ ಬೆಳ್ಳಿಯ ಆಭರಣಗಳು ಸೇರಿ ಒಟ್ಟು 3,62,500ರೂ.ಗಳ ಮೌಲ್ಯದ್ದು ಹಾಗೂ 1,75,000ರೂ.ಗಳ ನಗದು ಹಣವನ್ನು ದೋಚಿದ್ದರು ಎಂದು ತಿಳಿಸಿದ್ದರು .

ಸಬ್ ಅರ್ಬನ್ ಉಪ ವಿಭಾಗದ ಸಹಾಯಕ ಪೋಲಿಸ್ ಆಯುಕ್ತ ಡಿ.ಜಿ. ರಾಜಣ್ಣ ಅವರ ನೇತೃತ್ವದಲ್ಲಿ ಪಿಎಸ್‌ಐ ಮಲ್ಲಿಕಾರ್ಜುನ್ ಇಕ್ಕಳಕಿ, ಎಎಸ್‌ಐ ಅಶೋಕ್, ಸಿಬ್ಬಂದಿಗಳಾದ ಕಲ್ಯಾಣಕುಮಾರ್, ಆನಂದ್ ಅವರು ಕಾರ್ಯಾಚರಣೆ ಕೈಗೊಂಡು ಆರೋಪಿಯನ್ನು ಬಂಧಿಸಿದರು. ಪೋಲಿಸರ ಕಾರ್ಯಾಚರಣೆ ಶ್ಲಾಘನೀಯ ಎಂದು ಅವರು ಪ್ರಶಂಸೆ ವ್ಯಕ್ತಪಡಿಸಿದರು.

# ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಸೆ. 11 : ಭಾರತ ಸರ್ಕಾರದ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆ ಇಲಾಖೆಯು ಘೋಷಿಸಿದಂತೆ ಸೆಪ್ಟೆಂಬರ್ 11ರಂದು ರಾಷ್ಟ್ರೀಯ ಅರಣ್ಯ ಹುತಾತ್ಮ ದಿನ ಎಂದು ಆಚರಿಸಲಾಗುತ್ತದೆ ಎಂದು ನಿವೃತ್ತ ಸಹಾಯಕ ಅರಣ್ಯಾಧಿಕಾರಿ ಆರ್.ಆರ್. ಯಾದವ ಹೇಳಿದರು.

ಗುರುವಾರದಂದು ಕಲಬುರಗಿ ವೃತ್ತ ಕಚೇರಿಯ ಅರಣ್ಯ ಭವನದಲ್ಲಿ ರಾಷ್ಟ್ರಿಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಅರಣ್ಯ ಸಂಪತ್ತು ಮತ್ತು ವನ್ಯ ಜೀವಿಗಳ ಸಂರಕ್ಷಣೆಗಾಗಿ ತಮ್ಮ ಪ್ರಾಣವನ್ನೆ ಅರ್ಪಿಸುವ ಸರ್ವೋಚ್ಛ ತ್ಯಾಗವನ್ನು ಮಾಡಿದಂತಹ ಸಮರ್ಪಣಾ ಮನೋಭಾವದ ಹಲವಾರು ಅರಣ್ಯ ಅಧಿಕಾರಿಗಳ ಹೆಸರುಗಳು ಇಂದಿಗೂ ಹಚ್ಚಹಸಿರಾಗಿ ರಾರಾಜಿಸುತ್ತಿದೆ ನಾವು ಮಾಡಿದಂತೆ ಕೆಲಸ ಕಾರ್ಯಗಳನ್ನು ಗೌರವದಿಂದ ಜನರು ಕಾಣಬೇಕೆಂದು ಅವರು ತಿಳಿಸಿದರು. ಭಾರತ ಸರ್ಕಾರದಲ್ಲಿ ಅರಣ್ಯದ ರಕ್ಷಣೆ ಹಾಗೂ ವನ್ಯಜೀವಿಗಳ ರಕ್ಷಣೆಯಲ್ಲಿ ಹುತಾತ್ಮರಾದ ಅರಣ್ಯ ಸಿಬ್ಬಂದಿಗಳನ್ನು ಸ್ಮರಿಸಿ ಗೌರವ ಸೂಚಿಸಿದರು. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಹೆಚ್.ಬಿ. ಸುನಿಲ್ ಪನ್ವರ್ ಅವರು ಅಧ್ಯಕ್ಷತೆ ವಹಿಸಿ ತ್ಯಾಗ ಮತ್ತು ಬಲಿದಾನಗಳ ಸ್ಮರಣೆಗಾಗಿ ದೇಶದಾದ್ಯಂತ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ಪ್ರಸ್ತಾವಿಕವಾಗಿ ಮಾತನಾಡಿದರು. ಚಿತ್ತಾಪುರ ವಲಯ ಅರಣ್ಯಧಿಕಾರಿ ವಿಜಯಕುಮಾರ ರಕ್ಷಣೆಯಲ್ಲಿ ಹುತಾತ್ಮರಾದ ಅರಣ್ಯ ಸಿಬ್ಬಂದಿಗಳ ಹೆಸರುಗಳನ್ನು ಇವರು ವಾಚಿಸಿದರು. ಹುತಾತ್ಮರ ಗೌರವ ಸೂಚಕವಾಗಿ ಮೂರು ಸುತ್ತು ಗುಂಡು ಹಾರಿಸಿದರು. ತನ್ಮಧ್ಯಲ್ಲಿ ಪೊಲೀಸ್ ವಾದ್ಯವೃಂದದವರಿಂದ ರಾಷ್ಟ್ರೀಗೀತೆ ನುಡಿಸಿದ್ದರು. ಇದೇ ಸಂದರ್ಭದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಾದೇಶಿಕ ಅರಣ್ಯ ವಿಭಾಗ ಸುಮಿತಕುಮಾರ್ ಪಾಟೀಲ್, ಕಲಬುರಗಿ ಅರಣ್ಯ ವಿಭಾಗದ ಅರಣ್ಯ ಸಂರಕ್ಷಣಾಧಿಕಾರಿ ಪ್ರವೀಣ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಬಸವರಾಜ ಎಸ್.ಡಾಂಗೆ, ಕಲಬುರಗಿ ಪ್ರಾದೇಶಿಕ ಅರಣ್ಯವಲಯದ ವಲಯ ಅರಣ್ಯಧಿಕಾರಿ ಗುರುರಾಜ್ ಕಮತರ, ಉಪ ವಲಯ ಅರಣ್ಯಧಿಕಾರಿಗಳಾದ ರಮೇಶ ಹಾಳಕೇರಿ, ಮೋನಪ್ಪ, ಗಸ್ತು ಅರಣ್ಯ ಪಾಲಕರಾದ ಶೇಖ್ ಅಮೆರ್, ಪರಸಪ್ಪ ಹಾಗೂ ಎಲ್ಲಾ ಅರಣ್ಯ ಸಿಬ್ಬಂದಿಯವರು. ಉಪಸ್ಥಿತರಿದ್ದರು. ರೇವಣಸಿದ್ಧ ತಾವರಾಖೇಡ ಕಾರ್ಯಕ್ರಮ ನಿರೂಪಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.